23 February 2026 Monday | SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಭವಿಷ್ಯದ ಮುನ್ನುಡಿ

ಸಂಪಾದಕ: ಕೆ.ಎನ್.ರವಿ

info.varthaman@gmail.com

**ಭಾವನಾಂತರಂಗ**

ನಮ್ಮ ಮನಸ್ಸು ನಮ್ಮ ಮಾತನ್ನು ಸರಿಯಾಗಿ ಕೇಳಿದರೆ ಮಾತ್ರ ಜೀವನದಲ್ಲಿ ಗೆಲ್ಲಲು ಸಾಧ್ಯ!

-ಸ್ನೇಹಾ ಆನಂದ್


ಲಲಿತಾದ್ರಿಪುರ 940 ಮನೆಗಳಿಗೆ ಹಕ್ಕುಪತ್ರ ವಿತರಣೆ ಶೀಘ್ರ — ಪುಟ ಸಂ. 2


ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಸಿದ್ಧತೆ: ಜಿಲ್ಲಾಧಿಕಾರಿ ಸೂಚನೆ — ಪುಟ ಸಂ. 4


ಸದನದಲ್ಲಿ ಸಿದ್ಧಲಿಂಗಯ್ಯ ಪುಸ್ತಕ ಓದಲಿ: ಮಾವಳ್ಳಿ ಶಂಕರ್ — ಪುಟ ಸಂ. 5

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 105 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಜೂನ್ ಅಂತ್ಯಕ್ಕೆ ಜಿಪಂ–ತಾಪಂ ಚುನಾವಣೆ

## ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಹಿತಿ | ಗಂಗಾವಳಿ–ಮಂಜಗುಣಿ ಸೇತುವೆ ಉದ್ಘಾಟನೆ

ಅಂಕೋಲಾ: ಜೂನ್ ತಿಂಗಳೊಳಗೆ ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿ ಚುನಾವಣೆಗಳನ್ನು ನಡೆಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ತಾಲ್ಲೂಕಿನ ಮಂಜಗುಣಿಯಲ್ಲಿ ಗಂಗಾವಳಿ ಮಂಜಗುಣಿ ಸೇತುವೆ ಉದ್ಘಾಟಿಸಿ ಅವರು ಮಾತನಾಡಿದರು.

ಗೋಕರ್ಣವನ್ನು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೇರಿಸುವ ಬೇಡಿಕೆ ಇದ್ದರೂ, ಚುನಾವಣೆ ಹಾಗೂ ಜನಗಣತಿ ಸಮೀಪಿಸಿರುವ ಹಿನ್ನೆಲೆಯಲ್ಲಿ ಸದ್ಯ ಅದು ಸಾಧ್ಯವಾಗುವುದಿಲ್ಲ. ಚುನಾವಣೆ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಗೋಕರ್ಣ ಪಟ್ಟಣ ಪಂಚಾಯಿತಿ ರಚನೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಸಿಎಂ ಸ್ಪಷ್ಟಪಡಿಸಿದರು. ಹಾಲಕ್ಕಿ ಒಕ್ಕಲಿಗರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ರಾಜ್ಯ ಸರ್ಕಾರದ ಪ್ರಸ್ತಾವವನ್ನು ಕೇಂದ್ರ ಸರ್ಕಾರ ತಿರಸ್ಕರಿಸಿದ್ದರೂ, ಅಗತ್ಯ ದಾಖಲೆಗಳು ಮತ್ತು ಸಮರ್ಥನೆಗಳೊಂದಿಗೆ ಪುನಃ ಪ್ರಸ್ತಾವ ಸಲ್ಲಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ ಎಂದು ಹೇಳಿದರು. ಸಮುದಾಯದ ನ್ಯಾಯೋಚಿತ ಬೇಡಿಕೆಗೆ ಸರ್ಕಾರ ಬದ್ಧವಾಗಿದೆ ಎಂದರು. ಮಂಜಗುಣಿ?ಗಂಗಾವಳಿ ಸೇತುವೆ ನಿರ್ಮಾಣದಿಂದ ಅಂಕೋಲಾ ಮತ್ತು ಗೋಕರ್ಣ ಭಾಗದ ಜನರ 18 ಕಿ.ಮೀ ಸುತ್ತು ಸಮಸ್ಯೆ ನಿವಾರಣೆಯಾಗಿದೆ. ಈ ಸೇತುವೆ ಸ್ಥಳೀಯ ವ್ಯಾಪಾರ, ಪ್ರವಾಸೋದ್ಯಮ ಹಾಗೂ ತುರ್ತು ಸೇವೆಗಳ ಸಂಚಾರಕ್ಕೆ ಸಹಾಯಕವಾಗಲಿದೆ. 2017ರಲ್ಲಿ ನಾನು ಮುಖ್ಯಮಂತ್ರಿ ಆಗಿದ್ದಾಗ ಕಾಮಗಾರಿಗೆ ಚಾಲನೆ ನೀಡಿದ್ದು, ಈಗ ಅದನ್ನೇ ಉದ್ಘಾಟಿಸಿರುವುದು ಸಂತೋಷದ ವಿಷಯ ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ, ಶಾಸಕರಾದ ಆರ್.ವಿ. ದೇಶಪಾಂಡೆ, ಸತೀಶ ಸೈಲ್, ದಿನಕರ ಶೆಟ್ಟಿ, ಭೀಮಣ್ಣ ನಾಯ್ಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.






### ಕರಾವಳಿ ಪ್ರವಾಸೋದ್ಯಮಕ್ಕೆ ಹೊಸ ನೀತಿ

ಉಪಮುಖ್ಯಮಂತ್ರಿಡಿ. ಕೆ. ಶಿವಕುಮಾರ್ ಕರಾವಳಿ ಭಾಗದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಸಮಗ್ರ ಹೊಸ ನೀತಿ ರೂಪಿಸಲಾಗುತ್ತಿದೆ. ಗೋವಾಕ್ಕಿಂತ ಕರ್ನಾಟಕದತ್ತ ಹೆಚ್ಚು ಪ್ರವಾಸಿಗರನ್ನು ಸೆಳೆಯುವ ಉದ್ದೇಶದಿಂದ ಮೂಲಸೌಕರ್ಯ ಅಭಿವೃದ್ಧಿ, ಕಡಲತೀರ ಸೌಲಭ್ಯ ವಿಸ್ತರಣೆ ಹಾಗೂ ಹೂಡಿಕೆ ಆಕರ್ಷಣೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

## ಮುಂದಿನ ಸಿಎಂ ದಲಿತ ನಾಯಕನೇ ಆಗಬೇಕು

### ಹೈಕಮಾಂಡ್‌ಗೆ ಮಹದೇವಪ್ಪ ಮನವಿ



ಮಡಿಕೇರಿ: ರಾಜ್ಯದಲ್ಲಿ ಮುಂದಿನ ಮುಖ್ಯಮಂತ್ರಿ ಸ್ಥಾನಕ್ಕೆ ದಲಿತ ನಾಯಕನನ್ನೇ ಆಯ್ಕೆ ಮಾಡಬೇಕು ಎಂದು ಸಚಿವ ಎಚ್. ಸಿ. ಮಹಾದೇವಪ್ಪ ಹೈಕಮಾಂಡ್‌ಗೆ ಮನವಿ ಮಾಡಿದ್ದಾರೆ.

ಮಡಿಕೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ದಲಿತ ಸಿಎಂ ಎಂಬ ಬೇಡಿಕೆ ಇನ್ನೂ ಪೂರ್ಣಗೊಂಡಿಲ್ಲ ಎಂದು ಹೇಳಿದ್ದಾರೆ. ಈಗ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿ ಕಾರ್ಯನಿರ್ವಹಿಸುತ್ತಿರುವುದರಿಂದ, ಮುಂದಿನ ಅವಧಿಯಲ್ಲಿ ದಲಿತ ಸಮುದಾಯದ ನಾಯಕನಿಗೆ ಅವಕಾಶ ನೀಡಬೇಕು. ಹೈಕಮಾಂಡ್ ಸೂಕ್ತ ಹಾಗೂ ಅರ್ಹ ದಲಿತ ಅಭ್ಯರ್ಥಿಯನ್ನು ಆಯ್ಕೆ ಮಾಡಿ ಮುಖ್ಯಮಂತ್ರಿ ಸ್ಥಾನದಲ್ಲಿ ಕೂರಿಸಬೇಕು ಎಂದು ಅವರು ಒತ್ತಾಯಿಸಿದರು. ದಲಿತ ನಾಯಕರ ಆಯ್ಕೆ ಪ್ರಕ್ರಿಯೆಯಲ್ಲಿ ಯಾವುದೇ ಗೊಂದಲಗಳು ಉಂಟಾಗಬಾರದು. ರಾಜ್ಯದಲ್ಲಿ ದಲಿತ ಸಮುದಾಯ ಗಣನೀಯ ಸಂಖ್ಯೆಯಲ್ಲಿ ಇದ್ದು, ಅವರು ಸದಾ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲವಾಗಿ ನಿಂತಿದ್ದಾರೆ.

## ಮೈಸೂರಲ್ಲಿ ಹೀಲಿಯಂ ಬಲೂನ್ ಮಾರಾಟ ನಿಷೇಧ



ಮೈಸೂರು: ನಗರದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಹೀಲಿಯಂ ಬಲೂನ್ ತುಂಬುವುದು, ಮಾರಾಟ, ಸಂಗ್ರಹ ಹಾಗೂ ಸಾಗಣೆಗೆ ತಾತ್ಕಾಲಿಕ ನಿಷೇಧ ಹೇರಲಾಗಿದೆ. ಪೊಲೀಸ್ ಕಮಿಷನರ್ ಸೀಮಾ ಲಾಟ್ಕರ್‌ಅವರು ಬಿಎನ್‌ಎಸ್‌ಎಸ್–2023 ಸೆಕ್ಷನ್ 152 ಅಡಿಯಲ್ಲಿ ಆದೇಶ ಹೊರಡಿಸಿದ್ದಾರೆ. ಸುರಕ್ಷತಾ ಕ್ರಮಗಳಿಲ್ಲದೆ ಸಿಲಿಂಡರ್ ಬಳಕೆ ಅಪಾಯಕಾರಿ ಹಿನ್ನೆಲೆ ಈ ನಿರ್ಧಾರ ಕೈಗೊಳ್ಳಲಾಗಿದೆ. ವೈದ್ಯಕೀಯ?ವೈಜ್ಞಾನಿಕ ಬಳಕೆಗೆ ಮಾತ್ರ ವಿನಾಯಿತಿ ಇದೆ. ಆದೇಶ ಉಲ್ಲಂಘಿಸಿದರೆ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಸಲಾಗಿದೆ.

## ಅಸ್ಸಾಂ ಕಾಂಗ್ರೆಸ್ ಮಾಜಿ ಅಧ್ಯಕ್ಷ ಭೂಪೇನ್ ಬಿಜೆಪಿಗೆ



ಗೌವಾತಿ: ಅಸ್ಸಾಂ ಕಾಂಗ್ರೆಸ್‌ನ ಮಾಜಿ ಮುಖ್ಯಸ್ಥ ಭೂಪೇನ್ ಕುಮಾರ್ ಬೋರಾ ಭಾನುವಾರ ಆಡಳಿತಾರೂಢ ಬಿಜೆಪಿಗೆ ಸೇರ್ಪಡೆಗೊಂಡರು

ಅಸಾಂ ಬಿಜೆಪಿ ಪ್ರಧಾನ ಕಚೇರಿ ವಾಜಪೇಯಿ ಭವನದಲ್ಲಿ ನಡೆದ ಸಮಾರಂಭದಲ್ಲಿ ಬೋರಾ ಅಸ್ಸಾಂ ಬಿಜೆಪಿ ರಾಜ್ಯ ಧ್ಯಕ್ಷ ದಿಲೀಪ್ ಸೈಕಿಯಾ ಅವರ ಸಮ್ಮುಖದಲ್ಲಿ ಸೇರ್ಪಡೆಗೊಂಡಿದ್ದಾರೆ. ಮಾಜಿ ಕಾಂಗ್ರೆಸ್ ಕಾರ್ಯಕರ್ತ ಸಂಜು ಬೋರಾ ಕೂಡ ಈ ಸಂದರ್ಭದಲ್ಲೇ ಬಿಜೆಪಿ ಸೇರಿದ್ದಾರೆ.

### ಲಂಚ ಪ್ರಕರಣ

## ಶಾಸಕ ಲಮಾಣಿಗೆ ನ್ಯಾಯಾಂಗ ಬಂಧನ



ಬೆಂಗಳೂರು: ಲಂಚ ಸ್ವೀಕರಿಸುವ ವೇಳೆ ಲೋಕಾಯುಕ್ತ ಬಲೆಗೆ ಸಿಕ್ಕಿಬಿದ್ದ ಬಿಜೆಪಿ ಶಾಸಕ ಚಂದ್ರು ಲಮಾಣಿ ಅವರಿಗೆ ಮಾರ್ಚ್ 2ರವರೆಗೆ ನ್ಯಾಯಾಂಗ ಬಂಧನ ವಿಧಿಸಲಾಗಿದೆ. ಗುತ್ತಿಗೆದಾರರಿಂದ ಲಂಚದ ಹಣ ಸ್ವೀಕರಿಸುವಾಗ ರೆಡ್‌ಹ್ಯಾಂಡಾಗಿ ಸಿಕ್ಕಿಬಿದ್ದ ಚಂದ್ರು ಲಮಾಣಿ ಅವರನ್ನು ಬಂಧಿಸಿದ ಲೋಕಾಯುಕ್ತ ಅಧಿಕಾರಿಗಳು, ಇಂದು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ಮುಂದೆ ಹಾಜರುಪಡಿಸಿ ದರು. ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಧೀಶ ಸಂತೋಷ್ ಗಜಾನನ ಭಟ್, ಆರೋಪಿಗೆ ಮಾ.2 ರವರೆಗೆ ನ್ಯಾಯಾಂಗ ಬಂಧನ ವಿಧಿಸಿ ಆದೇಶ ಹೊರ ಡಿಸಿದರು. ಕ್ಷೇತ್ರದ ಸುಂಕದಾಳ ಗ್ರಾಮ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಚೆಕ್‌ಡ್ಯಾಂ ನಿರ್ಮಾಣ ಹಾಗೂ ತಡೆಗೋಡೆ ಕಾಮಗಾರಿಗೆ ಸುಮಾರು 1 ಕೋಟಿ ರೂ. ಮಂಜೂರಾಗಿತ್ತು. ಕಾಮಗಾರಿ ಮುಂದುವರಿಸಲು 11 ಲಕ್ಷ ರೂ. ಕಮಿಷನ್ ನೀಡಬೇಕೆಂದು ಶಾಸಕ ಲಮಾಣಿ ಬೇಡಿಕೆ ಇಟ್ಟಿದ್ದರು ಎಂಬ ಆರೋಪ ಕೇಳಿಬಂದಿದೆ. ಲಂಚದ ಹಣ ಸ್ವೀಕರಿಸುವ ಸಂದರ್ಭದಲ್ಲೇ ಲೋಕಾಯುಕ್ತ ಅಧಿಕಾರಿಗಳು ಟ್ರ್ಯಾಪ್ ನಡೆಸಿ ಬಂಧಿಸಿದ್ದಾರೆ.

## ನಾಯಕತ್ವ ಗೊಂದಲ: ಶೀಘ್ರವೇ ಹೈ ತೀರ್ಮಾನ

**ಸಚಿವ ಸತೀಶ್ ಜಾರಕಿಹೊಳಿ ಹೇಳಿಕೆ**

ಬೆಳಗಾವಿ: ರಾಜ್ಯ ಕಾಂಗ್ರೆಸ್‌ನ ನಾಯಕತ್ವ ವಿಚಾರದಲ್ಲಿ ಹೈಕಮಾಂಡ್ ಅಂತಿಮ ತೀರ್ಮಾನಕ್ಕೆ ಸಮೀಪಿಸಿದ್ದು, ಶೀಘ್ರದಲ್ಲೇ ನಿರ್ಧಾರ ಪ್ರಕಟವಾಗುವ ಸಾಧ್ಯತೆ ಇದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.


ನವದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಮಾಜಿ ಸಚಿವ ಕೆ.ಎನ್.ರಾಜಣ್ಣ ಅವರೊಂದಿಗೆ ಭೇಟಿ ಮಾಡಿದ ಜಾರಕಿಹೋಳಿ, ರಾಜ್ಯದ ಪ್ರಸ್ತುತ ರಾಜಕೀಯ ಬೆಳವಣಿಗೆಗಳ ಕುರಿತು ಸುಮಾರು ಅರ್ಧ ಗಂಟೆ ಚರ್ಚೆ ನಡೆಸಿದ್ದಾರೆ. ಭೇಟಿಯ ಬಳಿಕ ಮಾತನಾಡಿದ ಅವರು, ರಾಜ್ಯದಲ್ಲಿನ ರಾಜಕೀಯ ಪರಿಸ್ಥಿತಿಯ ಬಗ್ಗೆ ಹೈಕಮಾಂಡ್‌ಗೆ ವಿವರ ನೀಡಿದ್ದು, ಪಕ್ಷದೊಳಗಿನ ಗೊಂದಲವನ್ನು ಶೀಘ್ರ ಬಗೆಹರಿಸಲು ಮನವಿ ಮಾಡಲಾಗಿದೆ. ಈ ವಿಷಯ ಶೀಘ್ರದಲ್ಲೇ ಪರಿಹಾರ ಕಾಣಲಿದೆ ಎಂಬ ಭರವಸೆ ಖರ್ಗೆ ನೀಡಿದ್ದಾರೆ ಎಂದರು.

### ಹೈಕಮಾಂಡ್ ಅಂತಿಮ ತೀರ್ಮಾನ



ಮುಖ್ಯಮಂತ್ರಿ ಬದಲಾವಣೆ ಅಥವಾ ಇತರೆ ಪ್ರಮುಖ ಸಂಘಟನಾತ್ಮಕ ನಿರ್ಧಾರಗಳ ಕುರಿತು ಸ್ಪಷ್ಟ ಮಾಹಿತಿ ಇಲ್ಲದಿದ್ದರೂ, ಹೈಕಮಾಂಡ್ ಅಂತಿಮ ತೀರ್ಮಾನ ಕೈಗೊಳ್ಳಬೇಕೆಂದು ಮನವಿ ಮಾಡಿದ್ದೇವೆ. ಚರ್ಚೆಗಳು ಸಕಾರಾತ್ಮಕವಾಗಿದ್ದು, ಪರಿಸ್ಥಿತಿ ಶೀಘ್ರದಲ್ಲೇ ಸ್ಥಿರಗೊಳ್ಳಬಹುದು ಎಂದು ಹೇಳಿದರು. ಕೆಪಿಸಿಸಿ ಅಧ್ಯಕ್ಷ ಸ್ಥಾನ ಅಥವಾ ಸಚಿವ ಸಂಪುಟ ಪುನರ್‌ರಚನೆ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ ಎಂದು ಸ್ಪಷ್ಟಪಡಿಸಿದರು. ಇದೇ ವೇಳೆ ರಾಜಣ್ಣ, ಪಕ್ಷದೊಳಗಿನ ಸಮಸ್ಯೆಗಳನ್ನು ವಿಳಂಬವಿಲ್ಲದೆ ಪರಿಹರಿಸಬೇಕೆಂಬ ಅಭಿಪ್ರಾಯಕ್ಕೆ ಹಲವು ಶಾಸಕರು ಸಹಮತ ವ್ಯಕ್ತಪಡಿಸಿರುವುದಾಗಿ ತಿಳಿಸಿದ್ದಾರೆ.

## ಇಬ್ಬರನ್ನು ಬಲಿ ಪಡೆದ ಕಾಡಾನೆ ಸೆರೆ



ಚಿಕ್ಕಮಗಳೂರು: ಇಬ್ಬರನ್ನು ಬಲಿ ಪಡೆದಿದ್ದ ಕಾಡಾನೆಯನ್ನು ಅರಣ್ಯ ಇಲಾಖೆ ಸಿಬ್ಬಂದಿ ಸೆರೆ ಹಿಡಿದಿದ್ದಾರೆ. ಹುಣಸೆಹಳ್ಳಿ ಸಮೀಪ ಮಹಿಳೆ ಬೋರಮ್ಮ (33) ಅವರನ್ನು ಬಲಿ ಪಡೆದ ಕೆಲವೇ ಕ್ಷಣಗಳಲ್ಲಿ ಕಾರ್ಯಾಚರಣೆ ಆರಂಭಿಸಿ ಆನೆಗೆ ಅರವಳಿಕೆ ಚುಚ್ಚುಮದ್ದು ನೀಡಲಾಗಿದೆ. ಅರವಳಿಕೆಯ ಪ್ರಭಾವದಿಂದ ಬೆರಣಗೋಡು ಸಮೀಪದ ಕೆರೆಮನೆ ಬಳಿ ಆನೆ ಕುಸಿದು ಬಿದ್ದಿದ್ದು, ಸಾಕಾನೆಗಳ ಸಹಾಯದಿಂದ ಅದನ್ನು ನಿಯಂತ್ರಣಕ್ಕೆ ತೆಗೆದುಕೊಳ್ಳಲಾಗಿದೆ. ಇದೇ ಆನೆ ಫೆ.19ರಂದು ಕಾರ್ಮಿಕನೊಬ್ಬನನ್ನೂ ಬಲಿ ಪಡೆದಿತ್ತು ಎಂದು ತಿಳಿದುಬಂದಿದೆ.

## ನಾನಲ್ಲದೆ ದೆಹಲಿಗೆ ಮತ್ಯಾರು ಹೋಗ್ತಾರೆ: ಡಿಕೆಶಿ

ಬೆಂಗಳೂರು: ನಾನು ದೆಹಲಿಗೆ ಹೋಗುವುದು ಬರುವುದು ಇದ್ದೇ ಇರುತ್ತದೆ. ನಾನು ಹೋಗದೆ ಮತ್ಯಾರು ಹೋಗುತ್ತಾರೆ? ಅವರು ಯಾವಾಗ ಕರೆಯುತ್ತಾರೋ ಆಗೆಲ್ಲಾ ಹೋಗುತ್ತೇವೆ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು

ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳು ಭಾನು ವಾರ ಮಾತನಾಡಿಸಿದಾಗ ಈ ಪ್ರತಿಕ್ರಿಯೆ ನೀಡಿ ಡಿಕೆಶಿ ಮುಂದಿನ ವಾರ ದೆಹಲಿಗೆ ಹೋಗುತ್ತೀರಾ' ಎಂದು ಕೇಳಿದಾಗ ಮರು ಉತ್ತರ ನೀಡಿದರು ನಾನು ರಾಜ್ಯ ರಾಜಕೀಯದ ಬಗ್ಗೆ , ಎಲ್ಲೆಂದರಲ್ಲಿ ಚರ್ಚೆ ಮಾಡುವುದಿಲ್ಲ. ಅದು ಸಾರ್ವಜನಿಕವಾಗಿ ಚರ್ಚಿಸುವ ವಿಚಾರವೂ ಅಲ್ಲ ಎಂದರು.

**ಮನರೇಗಾ ರಕ್ಷಣೆಗೆ ನಾಳೆ ಸಮಾವೇಶ :** ಇಂದು ನಾನು ಹಾಗೂ ಸಿಎಂ ಇಬ್ಬರೂ ಕಾರವಾರಕ್ಕೆ ಹೋಗಿ ವೈದ್ಯಕೀಯ ವಿವಿ ಉದ್ಘಾಟನೆ ಮಾಡುತ್ತಿದ್ದೇವೆ. ನಾಳೆ ಕೋಲಾರ ಹಾಗೂ ಚಿಕ್ಕಬಳ್ಳಾಪುರ ಎರಡೂ ಸೇರಿಸಿ ಮನರೇಗಾ ಉಳಿಸಿ ಸಮಾವೇಶ ಹಮ್ಮಿಕೊಂಡಿದ್ದೇವೆ. ದೆಹಲಿಯಿಂದ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ ಅವರು ಆಗಮಿಸುತ್ತಿದ್ದು,



### ದೇಶದ ಹಿತಕ್ಕಾಗಿ ರಾಹುಲ್ ಶ್ರಮ



ರಾಹುಲ್ ಗಾಂಧಿ ಅವರು ದೇಶದ ಹಿತಕ್ಕಾಗಿ ಏನು ಬೇಕೋ ಅದನ್ನು ಮಾಡುತ್ತಾರೆ, ಮಾತಾಡುತ್ತಾರೆ. ಅಮೆರಿಕದ ಜತೆಗಿನ ತೆರಿಗೆ ಒಪ್ಪಂದದಿಂದ ದೇಶದ ಪ್ರತಿ ರೈತನ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ. ರಾಹುಲ್ ಗಾಂಧಿ ಅವರು ಲೋಕಸಭೆ ವಿರೋಧ ಪಕ್ಷದ ನಾಯಕರಾಗಿ ಚರ್ಚೆ ಮಾಡುತ್ತಾರೆ" ಎಂದರು.

## ಮಾಜಿ ಶಾಸಕ ಸುರೇಶ್‌ಗೌಡ ಕಾರು ಅಪಘಾತ

ಮಂಡ್ಯ: ನಾಗಮಂಗಲದ ಮಾಜಿ ಶಾಸಕ ಸುರೇಶ್ ಗೌಡ ಕಾರು ಅಪಘಾತದಲ್ಲಿ ಗಾಯಗೊಂಡು ಪ್ರಾಣಾಪಾಯದಿಂದ ಪಾರಾಗಿದ್ದಾರೆ.



ಮಂಡ್ಯ ತಾಲೂಕಿನ ಬಸರಾಳು ಗ್ರಾಮದ ಸಮೀಪ ಬಸರಾಳು ಕೊಪ್ಪ ರಸ್ತೆಯ ಬಂತೆ ಕೊಪ್ಪಲು ಬಳಿ ಈ ಅಪಘಾತ ಸಂಭವಿಸಿದೆ. ಮೈಸೂರಿನಲ್ಲಿ ಮದುವೆ ಕಾರ್ಯಕ್ರಮ ಮುಗಿಸಿಕೊಂಡು ಹಿಂದಿರುಗುವ ವೇಳೆ ಕಾರು ನಿಯಂತ್ರಣ ತಪ್ಪಿ ಅಪಘಾತಕ್ಕೀಡಾಗಿದೆ ಎನ್ನಲಾಗಿದೆ. ಘಟನೆಯಲ್ಲಿ ಕಾರು ಚಾಲಕ ಶೇಖರ್ ಹಾಗೂ ಗನ್‌ಮ್ಯಾನ್ ಬಿಂಡೇನಹಳ್ಳಿ ಪ್ರಸನ್ನ ಗಂಭೀರವಾಗಿ ಗಾಯಗೊಂಡಿದ್ದಾರೆ. ಸುರೇಶ್ ಗೌಡರ ಕೈ ಬೆರಳುಗಳಿಗೆ ತೀವ್ರ ಗಾಯಗಳಾಗಿದ್ದು, ಅವರನ್ನು ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಈ ಕುರಿತು ಬಸರಾಳು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

### ಎಐ ಶೃಂಗಸಭೆ

## 3 ರಾಜ್ಯಗಳನ್ನು ಹೊರಗಿಟ್ಟ ಕೇಂದ್ರ ತೀರ್ಮಾನಕ್ಕೆ ಖರ್ಗೆ ಅಸಮಾಧಾನ



ಬೆಂಗಳೂರು: ನವದೆಹಲಿಯಲ್ಲಿ ನಡೆದ ಎಐ ಶೃಂಗಸಭೆಯಲ್ಲಿ ಕೇಂದ್ರ ಸರ್ಕಾರ ರಾಜಕೀಯ ಮಾಡಿದ್ದು, ಭಾರತದ ತಂತ್ರಜ್ಞಾನ ಮತ್ತು ನವೋದ್ಯಮ ಕ್ಷೇತ್ರವನ್ನು ಮುನ್ನಡೆಸುತ್ತಿರುವ ಕರ್ನಾಟಕ, ತೆಲಂಗಾಣ ಮತ್ತು ತಮಿಳುನಾಡು ರಾಜ್ಯಗಳಿಗೆ ಆಹ್ವಾನ ನೀಡಿಲ್ಲ ಎಂದು ಐಟಿ/ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅಸಮಾಧಾನ ವ್ಯಕ್ತಪಡಿಸಿದರು.

ದೇಶದ ಹಿತಾಸಕ್ತಿಗಾಗಿ ಪಕ್ಷ ರಾಜಕಾರಣ ಮೀರಿ ಕೇಂದ್ರ ಸರ್ಕಾರದ ಎಲ್ಲ ಯೋಜನೆಗಳಿಗೆ ಕರ್ನಾಟಕ ಸಹಕಾರ ನೀಡಿದೆ. ಆದರೆ, ಎಐ ಶೃಂಗಸಭೆಗಳಂತಹ ರಾಷ್ಟ್ರೀಯ ವೇದಿಕೆಯಲ್ಲಿ ಕರ್ನಾಟಕ, ತೆಲಂಗಾಣ ಮತ್ತು ತಮಿಳುನಾಡು ರಾಜ್ಯಗಳ ಐಟಿ ಸಚಿವರನ್ನು ಹೊರಗಿಡಲಾಗಿದೆ ಎಂದು ಹೇಳಿದ್ದಾರೆ. ಮಾಜಿ ಇನ್ಫೋಸಿಸ್ ಸಿಎಫ್‌ಒ ಮೋಹನ್ ದಾಸ್ ಪೈ ಅವರ ಟೀಕೆಗೆ ಪ್ರತಿಕ್ರಿಯಿಸಿ,

## ಭಾರತ 'ಎ' ಚಾಂಪಿಯನ್: ಸತತ 2ನೇ ಬಾರಿ ಏಷ್ಯಾ ಕಪ್ ಜಯ




ಮಹಿಳಾ ಏಷ್ಯಾ ಕಪ್ ರೈಸಿಂಗ್ ಸ್ಟಾರ್ಸ್ 2026ರ ಫೈನಲ್‌ನಲ್ಲಿ ಭಾರತ 'ಎ' ತಂಡವು ಬಾಂಗ್ಲಾದೇಶ 'ಎ' ತಂಡವನ್ನು 46 ರನ್‌ಗಳಿಂದ ಸೋಲಿಸಿ ಸತತ ಎರಡನೇ ಬಾರಿ ಟ್ರೋಫಿ ಗೆದ್ದಿದೆ. ಬಾಂಗ್ಲಾದೇಶ ತಂಡ ಮತ್ತೊಮ್ಮೆ ರನ್ನರ್‌ಅಪ್ ಸ್ಥಾನಕ್ಕೆ ತೃಪ್ತಿಪಟ್ಟಿದೆ.

ಮೊದಲು ಬ್ಯಾಟಿಂಗ್ ಮಾಡಿದ ಭಾರತ ಆರಂಭದಲ್ಲೇ ವಿಕೆಟ್‌ಗಳನ್ನು ಕಳೆದುಕೊಂಡು ಸಂಕಷ್ಟಕ್ಕೀಡಾಯಿತು. ಈ ವೇಳೆ ತೇಜಲ್ ಹಸಬ್ನಿಸ್ 34 ಎಸೆತಗಳಲ್ಲಿ 51 ರನ್‌ಗಳ ಜವಾಬ್ದಾರಿಯುತ ಇನ್ನಿಂಗ್ಸ್ ಆಡಿದರು. ನಾಯಕಿ ರಾಧಾ ಯಾದವ್ ಜೊತೆ ನಿರ್ಣಾಯಕ ಜೊತೆಯಾಟ ನಡೆಸಿ ತಂಡವನ್ನು 134/7ಕ್ಕೆ ಕೊಂಡೊಯ್ದರು. ಬಾಂಗ್ಲಾದೇಶದ ನಾಯಕಿ ಫಹಿಮಾ ಖಾತುನ್ ನಾಲ್ಕು ವಿಕೆಟ್‌ಗಳನ್ನು ಪಡೆದರು. 134 ರನ್ ಗುರಿ ಬೆನ್ನಟ್ಟಿದ ಬಾಂಗ್ಲಾದೇಶ ತಂಡ ಭಾರತೀಯ ಬೌಲರ್‌ಗಳ ಎದುರು ತತ್ತರಿಸಿತು. ಶಮಿಮಾ ಸುಲ್ತಾನ 20 ರನ್ ಗಳಿಸಿದರೂ

## ಸುಲಭವಾಗಿ ಕುರ್ಚಿ ಬಿಡದ ಸಿದ್ದು: ಎಚ್‌ಡಿಕೆ

ಬೆಂಗಳೂರು: ಸಿದ್ದರಾಮಯ್ಯ ಕುರ್ಚಿ ಬಿಟ್ಟು ಕೊಡುವ ಜಾಯಮಾನದವರಲ್ಲ ಎಂದು ಕುಮಾರಸ್ವಾಮಿ ಹೇಳಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿದ ಕೇಂದ್ರ ಸಚಿವ ಕುಮಾರಸ್ವಾಮಿ, ಸಿದ್ದರಾಮಯ್ಯ ಅಧಿಕಾರ ಬಿಟ್ಟು ಕೊಡೊಲ್ಲ. ಇದು ಅವರ ಜಾಯಮಾನದಲ್ಲಿ ಬಂದಿಲ್ಲ. ನನ್ನ ಪಕ್ಷದಲ್ಲೇ ಇದನ್ನು ನೋಡಿದ್ದೇನೆ ನಾನು. ಅಹಿಂದ ಜನರಿಗಾಗಿ ಕೆಲಸ ಮಾಡೋಕೆ ಅವರು ಅಧಿಕಾರಕ್ಕೆ ಬಂದಿಲ್ಲ ಅವರು. ಅವರಿಗೆ ವೈಯಕ್ತಿಕವಾಗಿ ಕುರ್ಚಿ ಮುಖ್ಯ. ಕುರ್ಚಿ ಹಿಡಿಯಲು ನಮ್ಮಲ್ಲಿ ಇದ್ದಾಗ ಕೆಲವು ಪಕ್ಷದ ವಿರೋಧಿ ಚಟುವಟಿಕೆ ಮಾಡಿದ್ರು. ಅವತ್ತು ಅದಕ್ಕೆ ನಾವು ನಿರ್ಧಾರ ಮಾಡಿದ್ವಿ. ಆಶ್ರಯ ಕೊಟ್ಟ ಪಕ್ಷವನ್ನೇ ಇವತ್ತು ಆವರಿಸಿಕೊಂಡಿದ್ದಾರೆ ಅಂತ ಹೇಳಿದರು.



### ನನ್ನಿಂದಲೇ ಕಾಂಗ್ರೆಸ್, ನಾನೇ ಕಾಂಗ್ರೆಸ್

ಕಾಂಗ್ರೆಸ್ ಪಕ್ಷದ ಹಳಬರನ್ನು ಮೂಲೆಗುಂಪು ಮಾಡಿದ್ದಾರೆ. ನಾನು ಇದ್ದರೆ ಕಾಂಗ್ರೆಸ್, ನಾನು ಇಲ್ಲ ಅಂದರೆ ಕಾಂಗ್ರೆಸ್ ಇಲ್ಲ ಅಂತ ವಾತಾವರಣ ನಿರ್ಮಾಣ ಮಾಡ್ತಾ ಇದ್ದಾರೆ. ಈ ಮೂಲಕ ಸಿಎಂ ಸ್ಥಾನ ಬಿಡೋಕೆ ಆಗೊಲ್ಲ ಅಂತ ಹೊಸ ಅಸ್ತ್ರ ಪ್ರಯೋಗ ಮಾಡಿದ್ದಾರೆ. ಸಿದ್ದರಾಮಯ್ಯ ಕುರ್ಚಿ ಬಿಡೊಲ್ಲ ಅಂತ ಹೆಚ್‌ಡಿಕೆ ಪುನರುಚ್ಚರಿಸಿದರು

### ಜಾತಿಯಿಂದ ಸಾಮಾಜಿಕ ನ್ಯಾಯ ಸಾಧ್ಯವೆ?

ಸಿದ್ದರಾಮಯ್ಯ ಸರಣಿ ಟ್ವೀಟ್ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯೆ ನೀಡಿರುವ ಕುಮಾರಸ್ವಾಮಿ ಅವರು, ಇಂತಹ ಸಮಯದಲ್ಲಿ ಸಿದ್ದರಾಮಯ್ಯ ಕುರುಬ ಸಮಾಜವನ್ನು ಎಳೆದಿರೋದು ಯಾವ ಮಟ್ಟಕ್ಕೆ ಅವರ ಹೃದಯದ ಭಾವನೆ ಇದೆ ಅಂತ ಗೊತ್ತಾಗುತ್ತದೆ. ಜಾತಿ ಹೆಸರು ಇಟ್ಟುಕೊಂಡು ಸಾಮಾಜಿಕ ನ್ಯಾಯ, ಜಾತ್ಯಾತೀತ ಅಂತ ಹೇಳ್ತಾರೆ ಎಂದು ಹೆಚ್‌ಡಿಕೆ ಕಿಡಿಕಾರಿದ್ದಾರೆ.

### ಸಂದೇಶ ಯಾರಿಗೆ ?

ಸಿದ್ದರಾಮಯ್ಯ ಕಾಂಗ್ರೆಸ್ ಅವರಿಗೆ ಸಂದೇಶ ಕೊಟ್ಟಿದ್ದಾರೋ? ಸಿಎಂ ಸ್ಥಾನ ತೆಗೆಯೋಕೆ ನಿಂತಿರೋರಿಗೆ ಸಂದೇಶ ಕೊಟ್ಟಿದ್ದಾರೋ ಗೊತ್ತಿಲ್ಲ ಎಂದು ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ವ್ಯಂಗ್ಯವಾಡಿದ್ದಾರೆ.

### ಎಲ್ಲಾ ಸಮಾಜದ ಕೊಡುಗೆ ಇದೆ

ಕುರುಬ ಸಮಾಜದವನಾದ ನನ್ನನ್ನು ಅಸೂಯೆಯಿಂದ ತೆಗೆಯೋಕೆ ಹೋಗ್ತಾ ಇದ್ದಾರೆ ಅಂತಾರೆ. ಉತ್ತಮ ಬಜೆಟ್ ಕೊಟ್ಟವನು ನಾನು ಅಂತಾರೆ. ಸಿದ್ದರಾಮಯ್ಯ ಬೆಳೆಯೋಕೆ ಕುರುಬ ಸಮಾಜ ಮಾತ್ರವಲ್ಲ ಎಲ್ಲಾ ಸಮುದಾಯ ಬೆಂಬಲ ಕೊಟ್ಟಿದೆ. ಇವತ್ತು ಜಾತಿ ಹೆಸರಿನ ಸಂಕುಚಿತ ಮನೋಭಾದಲ್ಲಿ ಸಾಮಾಜಿಕ ನ್ಯಾಯ ಜಾರಿಗೆ ತರೋದು, ಎಲ್ಲಾ ಸಮಾಜದ ಬಗ್ಗೆ ಚರ್ಚೆ ಮಾಡ್ತಾರೆ.ಅಂಬೇಡ್ಕರ್, ಬಸವಣ್ಣ ಎಲ್ಲರ ಹೆಸರು ಹೇಳಿದ್ದಾರೆ. ಸಿದ್ದರಾಮಯ್ಯಗೆ ಈಗ ಜ್ಞಾನೋದಯವಾಗಿದೆ. ಅವರ ನಡವಳಿಕೆ ಅವರನ್ನ ಬೆಳೆಸಿದವರು ಊಹೆ ಮಾಡಿರಲಿಲ್ಲ ಎಂದಿದ್ದಾರೆ.

# ಲಲಿತಾದ್ರಿಪುರ 940 ಮನೆಗಳಿಗೆ ಹಕ್ಕುಪತ್ರ ವಿತರಣೆ ಶೀಘ್ರ



ಮೈಸೂರು: ಲಲಿತಾದ್ರಿಪುರ 940 ಮನೆಗಳಿಗೆ ಹಕ್ಕು ಪತ್ರವನ್ನು ಶೀಘ್ರದಲ್ಲೇ ವಿತರಣೆ ಕ್ರಮಕೈಗೊಳ್ಳಿ ಎಂದು ಶಾಸಕ ಶ್ರೀವತ್ಸ ತಿಳಿಸಿದರು.

ನಗರಪಾಲಿಕೆಯ ನಾಲ್ವಡಿ ಸಭಾಂಗಣದಲ್ಲಿ ನಡೆದ ಕೃಷ್ಣರಾಜ ಕ್ಷೇತ್ರದ ಆಶ್ರಯ ಸಮಿತಿಯ ಸಭೆಯಲ್ಲಿ ಕ್ಷೇತ್ರದ ವಿವಿಧ ವಸತಿ ಯೋಜನೆಗಳಿಗೆ ಸಂಬಂಧಿಸಿದಂತೆ ಹಲವು ಮಹತ್ವದ ತೀರ್ಮಾನಗಳನ್ನು ಕೈಗೊಳ್ಳಲಾಗಿದೆ ಎಂದರು. ಲಲಿತಾದ್ರಿಪುರದಲ್ಲಿ ನಿರ್ಮಾಣಗೊಂಡಿರುವ 940 ಮನೆಗಳಿಗೆ ಸಂಬಂಧಿಸಿದಂತೆ ಫಲಾನುಭವಿಗಳಿಂದ ಬಾಕಿ ಇರುವ ಮೂರು ಕಂತುಗಳನ್ನು ಸಂಗ್ರಹಿಸಲು ನಿರ್ಧರಿಸಲಾಯಿತು. ಯೋಜನೆಯ ಒಟ್ಟು ವೆಚ್ಚದಲ್ಲಿ ಫಲಾನುಭವಿಗಳ ಶೇ.25 ಪಾಲು ಇರಬೇಕಾದ ಹಿನ್ನೆಲೆಯಲ್ಲಿ, ಬಾಕಿ ಕಂತುಗಳನ್ನು ಪಾವತಿಸುವಂತೆ ಫಲಾನುಭವಿಗಳಿಗೆ ಸಂಪರ್ಕಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಈಗಾಗಲೇ ತಮ್ಮ ಪಾಲಿನ ಹಣ ಪಾವತಿಸಿರುವ ಫಲಾನುಭವಿಗಳಿಗೆ ಮುಂದಿನ ತಿಂಗಳಲ್ಲಿ ಹಕ್ಕುಪತ್ರಗಳನ್ನು ವಿತರಿಸುವ ಕಾರ್ಯವನ್ನು ಕೈಗೊಳ್ಳಲಾಗುವುದು ಎಂದರು.

ಹಿಂದಿನ ಸರ್ಕಾರದ ಅವಧಿಯಲ್ಲಿ ಜಾರಿಗೆ ಬಂದ ಆಶ್ರಯ ಯೋಜನೆಗೆ ಸಂಬಂಧಿಸಿದಂತೆ ಕೆಲವು ಫಲಾನುಭವಿಗಳು ಮನೆ ಬದಲಾಗಿ ನಿವೇಶನ ನೀಡುವಂತೆ ಕೋರಿ ನ್ಯಾಯಾಲಯದ ಮೆಟ್ಟಿಲೇರಿರುವ ಹಿನ್ನೆಲೆ, ಸಂಬಂಧಿಸಿದ ಎಂಟು ಜನರನ್ನು ಕರೆದು ಸಮಾಲೋಚನೆ ನಡೆಸಿ, ಅವರಿಗೆ ಆಶ್ರಯ ನಿವೇಶನಗಳನ್ನು ನೀಡುವ ದಿಸೆಯಲ್ಲಿ ಕ್ರಮ ಕೈಗೊಳ್ಳಲು ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದರು.

ಗೊರೂರಿನಲ್ಲಿ ನಿರ್ಮಾಣಗೊಳ್ಳಲಿರುವ ಒಟ್ಟು 2212 ಮನೆಗಳ ಯೋಜನೆ ಕುರಿತು ಸಭೆಯಲ್ಲಿ ವಿವರವಾದ ಚರ್ಚೆ ನಡೆಸಲಾಗಿದೆ. ಇದಲ್ಲದೆ, ಮಳಲವಾಡಿಯಲ್ಲಿ ಹೊಸ ನ್ಯಾಯಾಲಯದ ಎದುರುಗಡೆ ಇರುವ ಜಮೀನು ಮೂಡಾ ವಶದಲ್ಲಿದ್ದು, ಅದು ಯಾವ ಉದ್ದೇಶಕ್ಕೆ ಮೀಸಲಾಗಿದ್ದು ಎಂಬುದನ್ನು ಪರಿಶೀಲಿಸಿ, ಆಶ್ರಯ ಯೋಜನೆಗೆ ಬಳಸುವ ಸಾಧ್ಯತೆಯನ್ನು ಪರಿಶೀಲಿಸಲು ಸೂಚಿಸಲಾಗಿದೆ ಎಂದು ತಿಳಿಸಿದರು.

ಅದೇ ರೀತಿ ನಾಚನಹಳ್ಳಿ ಪಾಳ್ಯ ಹಾಗೂ ಮಂಡಕಳ್ಳಿ ಮುಖ್ಯರಸ್ತೆಯ ಬಳಿಯ ಜಮೀನು ಕುರಿತು ಚರ್ಚೆ ನಡೆಸಿ, ಭವಿಷ್ಯದ ವಸತಿ ಯೋಜನೆಗಳಿಗಾಗಿ ಸಮಗ್ರ ಯೋಜನಾ ವರದಿ ಸಿದ್ಧಪಡಿಸಲು ತೀರ್ಮಾನಿಸಲಾಗಿದೆ. ಕ್ಷೇತ್ರದಲ್ಲಿ ಪ್ರತಿಯೊಬ್ಬ ಅರ್ಹ ಫಲಾನುಭವಿಗೂ ವಸತಿ ಸೌಲಭ್ಯ ಒದಗಿಸುವುದು ನಮ್ಮ ಬದ್ಧತೆಯಾಗಿದ್ದು, ಈ ನಿಟ್ಟಿನಲ್ಲಿ ಆಶ್ರಯ ಯೋಜನೆಗಳನ್ನು ವೇಗವಾಗಿ ಜಾರಿಗೆ ತರಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಸಭೆಯಲ್ಲಿ ಮೈಸೂರು ನಗರ ಪಾಲಿಕೆ ಆಯುಕ್ತ ಶೇಕ್ ತನ್ವೀರ್ ಆಸೀಫ್, ಅಪರ ಜಿಲ್ಲಾಧಿಕಾರಿ ಕುಸುಮಕುಮಾರಿ, ಎಸ್.ಸಿ. ಮಂಜುನಾಥ್ ಸೇರಿ ಇನ್ನಿತರರು ಭಾಗವಹಿಸಿದ್ದರು.

# ನಗರಸಭೆ ಬಜೆಟ್ ಪೂರ್ವಭಾವಿ ಸಭೆ



**ಹುಣಸೂರು:** ನಗರಸಭೆ ಸಭಾಂಗಣದಲ್ಲಿ ಪೌರಾಯುಕ್ತೆ ಕೆ.ಮಾನಸ ಅವರ ಅಧ್ಯಕ್ಷತೆಯಲ್ಲಿ ನಡೆದ 2026–27ನೇ ಸಾಲಿನ ಬಜೆಟ್ ಪೂರ್ವಭಾವಿ ಸಭೆಯಲ್ಲಿ ನಗರದ ಸಂಘ–ಸಂಸ್ಥೆಗಳ ಮುಖ್ಯಸ್ಥರು, ನಾಗರೀಕರು ಸಮಸ್ಯೆ ಗಳ ಅನಾವರಣಗೊಳಿಸಿ, ನಗರದ ಅಭಿವೃದ್ಧಿಗೆ ಸಾಕಷ್ಟು ಸಲಹೆ ನೀಡಿದರು.

ನಗರದಲ್ಲಿ ಮನೆ ಇಲ್ಲದಿರುವ ಕುಟುಂಬಗಳು ಒಂದೊಂದು ಮನೆ ಯಲ್ಲಿ ಎರಡು ಮೂರು ಕುಟುಂಬಗಳು ಇಕ್ಕಟ್ಟಿನಲ್ಲಿ ವಾಸ ಮಾಡುತ್ತಿದ್ದು ಆಶ್ರಯ ಯೋಜನೆಯಲ್ಲಿ ಸುಮಾರು ಎರಡು ತಾಸು ಇಂದ ಹಂಚಿಕೆ ಮಾಡದೆ ನೆನೆಗುದಿಗೆ ಬಿದ್ದಿರುವ 870 ನಿವೇಶನಗಳನ್ನು ಎಲ್ಲ ಜಾತಿಯ ನಿವೇಶನ ರಹಿತ ಬಡವರಿಗೆ ಮೊದಲು ಹಂಚಿಕೆ ಮಾಡಿ ವಾಸಿಸಲು ಮನೆ ಇತರೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿ ಕೊಡಬೇಕು, ಎಂದು ಸಂಘ ಸಂಸ್ಥೆಗಳು ಮುಖಂಡರು ಮನವಿ ಮಾಡಿದ್ದಾರೆ ಶಿವಜ್ಯೋತಿ ನಗರದ ಬಸವರಾಜಮ್ಮ 20ನೇ ವಾರ್ಡಿನ ಚರಂಡಿ ನೀರು ಸರಾಗವಾಗಿ ಹರಿದು ಹೋಗಲು ಕ್ರಮವಹಿಸಬೇಕು. ನಗರದ ಪ್ರಮುಖ ರಸ್ತೆಗಳಲ್ಲಿ ಮ್ಯಾನ್ ಹೋಲ್‌ಗಳು ಒಡೆದುಹೋಗಿದ್ದು, ತಕ್ಷಣವೇ ದುರಸ್ಥಿ ಯಾಗಬೇಕೆಂದು ನಗರಸಭೆ ಮಾಜಿ ಸದಸ್ಯರೊಬ್ಬರು ಮನವಿ ಮಾಡಿದರು

ನಗರಸಭೆಯ ವತಿಯಿಂದ ಸಂವಿಧಾನ ವೃತ್ತದ ಪಕ್ಕದಲ್ಲಿ ಜಾಗವನ್ನು ಗುರುತಿಸಲಾಗಿದ್ದು, ಈ ಸಂಬಂಧ ಸರ್ಕಾರಕ್ಕೆ ಪತ್ರ ವ್ಯವಹಾರ ಮಾಡ ಲಾಗಿದ್ದು, ಶಾಸಕರಾದ ಜಿ.ಡಿ ಹರೀಶ್ ಗೌಡ ರವರು ಅಂಬೇಡ್ಕರ್ ರವರ ಪುತ್ಥಳಿ ನಿರ್ಮಾಣ ಮಾಡಲು ತುಂಬಾ ಕಾಳಜಿವಹಿಸಿ ಸರ್ಕಾರದ ವತಿಯಿಂದಲೇ ಈ ಪುತ್ಥಳಿಗೆ ಬೇಕಾಗುವ ಹಣಕಾಸಿನ ನೆರವನ್ನು ಕೊಡಿಸಲು ಜವಾಬ್ದಾರಿ ವಹಿಸಿಕೊಂಡಿರುತ್ತಾರೆಎಂದರು

ಪೂರ್ವಭಾವಿ ಸಭೆಯಲ್ಲಿ ಮಂಡಿಸಿರುವ ಎಲ್ಲಾ ಸಮಸ್ಯೆಗಳನ್ನು ಆದ್ಯತೆ ಮೇರೆಗೆ ಬಜೆಟ್ ನಲ್ಲಿ ಸೇರು ಸಲು ನಗರಸಭೆಯ ಅಧ್ಯಕ್ಷರೂ ಆದ ಜಿಲ್ಲಾ ಧಿಕಾರಿಗಳ ಅಧ್ಯಕ್ಷತೆಯಲ್ಲಿ ಸೇರುವ ಸಭೆಯಲ್ಲಿ ತೀರ್ಮಾನ ಕೈಗೊಂಡು ಹಂತ ಹಂತವಾಗಿ ಕಾರ್ಯರೂಪಕ್ಕೆ ತರ ಲಾಗುವುದು ಎಂದರು. ಸಭೆಯಲ್ಲಿ ಕಂದಾಯಾಧಿಕಾರಿ ಸಿದ್ದರಾಜು, ಇಂಜಿನಿಯರ್ ಲೋಕೇಶ್, ಲೆಕ್ಕಾಧಿಕಾರಿ ಶಾರದಮ್ಮ, ಚಂದ್ರು ಸೇರಿದಂತೆ ಅಧಿಕಾರಿಗಳು ನಾಗರೀಕರು ಭಾಗವಹಿಸಿದ್ದರು.

ಮೊದಲ ಪುಟದಿಂದ

## ದಲಿತ ಸಿಎಂ ಆಗಬೇಕು

ಪಕ್ಷದ ಬೆನ್ನೆಲುಬು ಎನ್ನಬಹುದಾದ ದಲಿತ ಸಮುದಾಯದ ವಿಶ್ವಾಸ ಕಾಪಾಡಲು, ಅವರಿಗೆ ಮುಖ್ಯಮಂತ್ರಿ ಸ್ಥಾನ ನೀಡುವ ಬಗ್ಗೆ ಗಂಭೀರವಾಗಿ ಚಿಂತನೆ ಮಾಡಬೇಕು ಎಂದು ಹೇಳಿದರು. ಹೈಕಮಾಂಡ್ ಕೂಡ ಈ ವಿಚಾರವನ್ನು ಗಮನದಲ್ಲಿಟ್ಟುಕೊಂಡಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಇನ್ನೂಡಿ. ಕೆ. ಶಿವಕುಮಾರ್ ಅವರು ತಮ್ಮ ಶ್ರಮಕ್ಕೆ ತಕ್ಕ ಮಾನ್ಯತೆ ನೀಡಬೇಕು ಎಂಬ ಹೇಳಿಕೆಗೆ ಪ್ರತಿಕ್ರಿಯಿಸಿದ ಮಹದೇವಪ್ಪ, ಪ್ರತಿಯೊಬ್ಬ ನಾಯಕರಿಗೂ ತಮ್ಮದೇ ಆದ ಆಶೆ–ಆಕಾಂಕ್ಷೆಗಳು ಇರುತ್ತವೆ. ಅದರಲ್ಲಿ ತಪ್ಪಿಲ್ಲ. ಆದರೆ ಅಂತಿಮ ನಿರ್ಧಾರವನ್ನು ಹೈಕಮಾಂಡ್ ಸೂಕ್ತವಾಗಿ ಪರಿಗಣಿಸಿ ತೆಗೆದುಕೊಳ್ಳುತ್ತದೆ ಎಂದು ಹೇಳಿದರು.

## ಅಧ್ಯಕ್ಷ ಭೂಪೇನ್ ಬಿಜೆಪಿಗೆ

ಫೆಬ್ರವರಿ 16ರಂದು ಬೋರಾ ರಾಜೀನಾಮೆ ನೀಡಿದ್ದರು ಕಾಂಗ್ರೆಸ್ ಹೈಕಮಾಂಡ್ ರಾಜೀನಾಮೆಯನ್ನು ಸ್ವೀಕರಿಸಿರಲಿಲ್ಲ. ಹಿರಿಯ ನಾಯಕರು ಬೋರಾ ನಿವಾಸಕ್ಕೆ ಧಾವಿಸಿದ್ದರು. ರಾಹುಲ್ ಗಾಂಧಿ ಕೂಡಾ ಮಾತನಾಡಿದ್ದರು ಎಂದು ವರದಿಯಾಗಿತ್ತು. ಇದಾದ ಬಳಿಕ ತಮ್ಮ ನಿರ್ಧಾರವನ್ನು ಮರುಪರಿಶೀಲಿಸಲು ಸಮಯ ಬೇಕು ಎಂದು ಕೇಳಿದ ಬೋರಾ ಮರುದಿನವೇ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರ ನಿವಾಸಕ್ಕೆ ತೆರಳಿ ಫೆಬ್ರವರಿ 22ರಂದು ಬಿಜೆಪಿಗೆ ಸೇರುವುದಾಗಿ ಘೋಷಿಸಿದ್ದರು ಇದಾದ ಬಳಿಕ ತಮ್ಮ ನಿರ್ಧಾರವನ್ನು ಮರುಪರಿಶೀಲಿಸಲು ಸಮಯ ಬೇಕು ಎಂದು ಕೇಳಿದ ಬೋರಾ ಮರುದಿನವೇ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರ ನಿವಾಸಕ್ಕೆ ತೆರಳಿ ಫೆಬ್ರವರಿ 22ರಂದು ಬಿಜೆಪಿಗೆ ಸೇರುವುದಾಗಿ ಘೋಷಿಸಿದ್ದರು

## ತೀರ್ಮಾನಕ್ಕೆ ಖರ್ಗೆ ಅಸಮಾಧಾನ

"ಕರ್ನಾಟಕದ ಅನೇಕ ಎಐ ಉದ್ಯಮಿಗಳು ಶೃಂಗಸಭೆಯಲ್ಲಿ ಭಾಗವಹಿಸಿದ್ದರೂ ರಾಜ್ಯ ಸರ್ಕಾರವನ್ನು ಉದ್ದೇಶಪೂರ್ವಕವಾಗಿ ಕಡೆಗಣಿಸಲಾಗಿದೆ. ಇದು ರಾಜಕೀಯ ಪ್ರೇರಿತ ನಿರ್ಲಕ್ಷ್ಯ ಎಂದು ಆರೋಪಿಸಿದರು.

## ನಾನಲ್ಲದೆ ಮತ್ಯಾರು ಹೋಗಾರೆ

ಸಮಾವೇಶಕ್ಕೆ ಕಾಂಗ್ರೆಸ್ ಪಕ್ಷದ ಎಲ್ಲಾ ಶಾಸಕರು ಆಗಮಿಸಬೇಕು. ಮನರೇಗಾ ರಕ್ಷಣೆಗೆ ಆಗ್ರಹಿಸಿ ಬಹುತೇಕ ಎಲ್ಲಾ ಕ್ಷೇತ್ರಗಳಲ್ಲಿ ಪಾದಯಾತ್ರೆ ಮಾಡಲಾಗಿದೆ. ಬಾಕಿ ಇರುವ ಕ್ಷೇತ್ರಗಳಲ್ಲೂ ಮಾಡಲಾಗುವುದು" ಎಂದು ತಿಳಿಸಿದರು.

## 2ನೇ ಬಾರಿ ಏಷ್ಯಾ ಕಪ್ ಜಯ

ಇತರೆ ಬ್ಯಾಟರ್‌ಗಳು ಹೆಚ್ಚು ಕಾಲ ಕ್ರೀಸ್‌ನಲ್ಲಿ ನಿಲ್ಲಲಿಲ್ಲ. ಪ್ರೇಮಾ ರಾವತ್ 3 ವಿಕೆಟ್ ಪಡೆದು ಮೆರೆದರೆ, ಸೋನಿಯಾ ಮೆಂಧಿಯಾ ಮತ್ತು ತನುಜಾ ಕನ್ವರ್ ತಲಾ 2 ವಿಕೆಟ್ ಪಡೆದು ಗೆಲುವು ಖಚಿತಪಡಿಸಿದರು. 2023ರ ಮೊದಲ ಆವೃತ್ತಿಯಲ್ಲಿಯೂ ಫೈನಲ್‌ನಲ್ಲಿ ಬಾಂಗ್ಲಾದೇಶವನ್ನು ಸೋಲಿಸಿದ್ದ ಭಾರತ, ಇದೀಗ ಮತ್ತೆ ಚಾಂಪಿಯನ್ ಪಟ್ಟ ಉಳಿಸಿಕೊಂಡಿದೆ.

# ತ್ರಿಕಾಲ ಜ್ಞಾನಿ ಸರ್ವಜ್ಞರ ಆದರ್ಶ ಪಾಲನೆ ಅಗತ್ಯ: ಕೊಪ್ಪ ರಾಮಚಂದ್ರ ಅಭಿಮತ

## ಹುಣಸೂರು ತಾಲ್ಲೂಕು ಸಿಗೂರು ಗ್ರಾಮದಲ್ಲಿ ಸರ್ವಜ್ಞರ ಜಯಂತಿ

**ಪಿರಿಯಾಪಟ್ಟಣ:** ಸಮಾಜದಲ್ಲಿರುವ ಒಡಕನ್ನು ತೊಡೆದು ಹಾಕಲು ತ್ರಿಪದಿಗಳ ರೂಪದಲ್ಲಿ ಚಿಕಿತ್ಸೆ ನೀಡಿದ ಕೀರ್ತಿ ಸರ್ವಜ್ಞರಿಗೆ ಸಲ್ಲುತ್ತದೆ ಎಂದು ತಾಲೂಕು ಕಲಾಲಗುಂಡ ಕುಂಬಾರ ಸಂಘದ ಉಪಾಧ್ಯಕ್ಷ ಕೊಪ್ಪ ರಾಮಚಂದ್ರ ತಿಳಿಸಿದರು.

ತಾಲ್ಲೂಕಿನ ಸೀಗೂರು ಗ್ರಾಮದಲ್ಲಿ ಆಯೋಜಿಸಿದ್ದ ಸರ್ವಜ್ಞರ 504ನೇ ಜಯಂತಿಯಲ್ಲಿ ಮಾತನಾಡಿದರು.

ಸಮಾಜದ ಅಂಕು ಡೊಂಕು, ಜಾತಿ ಕುಲದ ವಿಷಯ ಕುರಿತು ನಿಂತಲ್ಲೇ ತ್ರಿಪದಿ ರಚಿಸಿ ವಿಮರ್ಶಿಸುತ್ತಿದ್ದ ಸರ್ವಜ್ಞರು ಅಗಾಧ ಪಾಂಡಿತ್ಯ ಹೊಂದಿದ್ದರು. ಒಳಿತು ಮತ್ತು ಕೆಡುಕಿನ ವ್ಯತ್ಯಾಸ, ಏನು ಮಾಡಿದರೆ ಸಮಾಜ ಒಳ್ಳೆಯ ದಾರಿಯಲ್ಲಿ ನಡೆಯುತ್ತದೆ ಎಂದು ತಿಳಿಸಿಕೊಟ್ಟ ಮಹಾನ್ ತತ್ವಜ್ಞಾನಿ ಸರ್ವಜ್ಞ, ಅವರ ಮೂಲ ಹೆಸರು ಬೇರೆ ಇದ್ದರೂ ಅವರು ಎಲ್ಲಾ ಜ್ಞಾನ ಹೊಂದುವ ಮೂಲಕ ತ್ರಿಕಾಲ ಜ್ಞಾನಿ, ಸರ್ವಜ್ಞ ಎಂದು ಕರೆಸಿಕೊಂಡಿದ್ದಾರೆ. ದೇಶದಲ್ಲಿ ಅನೇಕ ಜಾತಿ, ಧರ್ಮಗಳಿವೆ. ಪ್ರತಿ?ಸಮಾಜದಲ್ಲೂ ಸಮಾಜ ಸುಧಾರಕರಿದ್ದಾರೆ. ಆದರೆ, ಅವರು ಎಂದಿಗೂ ಜಾತಿ, ಧರ್ಮಕ್ಕೆ ಸೀಮಿತವಾಗಿರಲಿಲ್ಲ. ಸರ್ವಜ್ಞ ತ್ರಿಪದಿಗಳನ್ನು ರಚಿಸಿ ಮಹಾಕಾವ್ಯದಲ್ಲಿನ ಸಂಗತಿ ವಿವರಿಸಿದ್ದಾರೆ. ಜಾತಿ ಬೇಧ ಬೇಡವೆಂದಿದ್ದ ಅವರು ದೇವರ ಒಲಿಸಿಕೊಂಡವರೇ ಉತ್ತಮ ಮನುಷ್ಯರು, ಕೋಟಿ ವಿದ್ಯೆಗಿಂತ ಮೇಟಿ ವಿದ್ಯೆ ಮೇಲು ಎಂಬ ಸಂದೇಶ ನೀಡಿದ್ದಾರೆ. ಜನ ಅವರ ವಚನ ಓದಬೇಕು. 2 ಸಾವಿರ ತ್ರಿಪದಿಯನ್ನು ರಚಿಸಿದ ವಿದ್ಯಾ ಪರ್ವತ ಸರ್ವಜ್ಞ, ಯಾರು ಬದಲಾಯಿಸದಂತಹ ಇಂದಿಗೂ ಪ್ರಚಲಿತದಲ್ಲಿರುವ ಮನುಷ್ಯನ ನಿತ್ಯದ ಜೀವನಕ್ಕೆ ಬೇಕಾಗುವ ಸಾರವನ್ನು ಕೊಟ್ಟುಹೊಗಿದ್ದಾರೆ. ತ್ರಿಕಾಲಜ್ಞಾನಿಯಾದ ಇವರ ಆದರ್ಶಗಳನ್ನು ಪ್ರತಿಯೊಬ್ಬರು ಪಾಲಿಸಬೇಕು ಎಂದರು.



"ತ್ರಿಪದಿಗಳ ಮೂಲಕ ಬೆಳಕು ನೀಡಿದ ಕವಿ ಸರ್ವಜ್ಞರು ಕನ್ನಡವನ್ನು ವಿಶ್ವದ ಉತ್ತುಂಗಕ್ಕೆ ಏರಿಸಿದ ಕಣ್ಮಣಿ. ಅವರ ತತ್ವಾದರ್ಶ ಅಳವಡಿಸಿಕೊಂಡು ಜಾತಿ, ಧರ್ಮ, ಮತದ ಭೇದ ಭಾವ ತೊರೆದು ಸಮಾಜದಲ್ಲಿ ಸಹಬಾಳ್ವೆಯಿಂದ ಬದುಕಬೇಕು. ಇಂದಿನ ಪೀಳಿಗೆಗೆ ಸರ್ವಜ್ಞರ ವಚನಗಳು ಮತ್ತು ಜೀವನ ಚರಿತ್ರೆ ತಿಳಿಸಿ ಓದಲು ಪ್ರೇರೇಪಿಸಬೇಕು. ತ್ರಿಕಾಲ ಜ್ಞಾನಿಯಾದ ಇವರು ತ್ರಿಪದಿಗಳ ಮೂಲಕ ಕಂಡ ಸತ್ಯವನ್ನು ನೇರ ಮತ್ತು ನಿಷ್ಠುರವಾಗಿ ಹೇಳಿ ಸಮಾಜಕ್ಕೆ ಮಾರ್ಗದರ್ಶನ ನೀಡುವ ಮೂಲಕ ವರಕವಿ ಸರ್ವಜ್ಞ ಇಂದಿಗೂ ಅಜರಾಮರರಾಗಿದ್ದಾರೆ. ವಿದ್ಯೆ, ಜಾತಿ, ಕೃಷಿ, ಮಾತು, ದುಶ್ಚಟಗಳ ಕುರಿತು ವಚನಗಳ ಮೂಲಕ ಜಾಗೃತಿ ಮೂಡಿಸಿದ್ದಾರೆ. ವಚನಗಳು ನಮಗೆ ಜ್ಞಾನದ ದಾರಿ ದೀಪವಿದ್ದಂತೆ. ವಚನ ಪಚನ ಮಾಡಿಕೊಂಡರೆ ಸುಂದರ ಸಮಾಜ ಸೃಷ್ಟಿ ಸಾಧ್ಯ.

**ಎಸ್.ಆರ್.ರಮೇಶ್** ಶಿಕ್ಷಕರು

ಕುಂಬಾರ ಸಮಾಜದ ಯುವ ಮುಖಂಡ ಕೋಣಸೂರು ಪ್ರಭು ಮಾತನಾಡಿ, ಪಿರಿಯಾಪಟ್ಟಣ ತಾಲ್ಲೂಕಿನಲ್ಲಿ 7 ಸಾವಿರಕ್ಕೂ ಅಧಿಕ ಕುಂಬಾರ ಸಮಾಜದ ಬಂಧುಗಳು ವಾಸವಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಕೃಷಿಯನ್ನೇ ಅವಲಂಬಿಸಿದ್ದಾರೆ ಇವರಿಗೆ ಅಲ್ಲೋ ಇಲ್ಲೋ ಸಣ್ಣಪುಟ್ಟ ಗ್ರಾಮ ಪಂಚಾಯಿತಿ ಸದಸ್ಯರ ಸ್ಥಾನ ಬಿಟ್ಟರೆ ಯಾವುದೇ ದೊಡ್ಡ ಮಟ್ಟದಲ್ಲಿ ರಾಜಕೀಯ ಸ್ಥಾನಮಾನ ದೊರೆತಿಲ್ಲ. ಹಾಗಾಗಿ ಎಲ್ಲರೂ ಸಮಾಜದ ಬಗ್ಗೆ ಜಾಗೃತಿ ಹಾಗೂ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಆ ಮೂಲಕ ಸಮಾಜವನ್ನು ಮುಖ್ಯವಾಹಿನಿಗೆ ತರಬೇಕು ಎಂದು ಮನವಿ ಮಾಡಿದರು.

ಗ್ರಾಪಂ ಮಾಜಿ ಉಪಾಧ್ಯಕ್ಷ ಸ್ವಾಮಿ ಶೆಟ್ಟಿ, ರೈತಸಂಘದ ರಾಜ್ಯ ಸಮಿತಿ ಸದಸ್ಯ ದ್ಯಾವಶೆಟ್ಟಿ, ಗ್ರಾಮದ ಮುಖಂಡರಾದ ಪುಟ್ಟರಾಜು, ಜಯಕೃಷ್ಣ ಶೆಟ್ಟಿ, ದೇವರಾಜ್, ವಸಂತ್, ರಂಗ ಶೆಟ್ಟಿ, ಎಸ್.ಟಿ.ರಮೇಶ್, ಜಯಣ್ಣ, ಅಶ್ವತ್, ಕೃಷ್ಣ ಮೂರ್ತಿ, ರವಿ, ಅಭಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಹನೂರು ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘ ಕಾರ್ಯದರ್ಶಿ ಸ್ಥಾನದಿಂದ ಮಧು ವಜಾ



**ಹನೂರು:** ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ನಿಯಮಗಳಿಗೆ ವಿರುದ್ಧವಾಗಿ ನಡೆದುಕೊಂಡಿದ್ದ ಮಧುನನ್ನು ಕಾರ್ಯದರ್ಶಿಯ ಸ್ಥಾನ ದಿಂದ ವಜಾ ಗೊಳಿಸಿ ಮುಂದಿನ ದಿನಗಳಲ್ಲಿ ಪುನರಾವರ್ತನೆ ಆದರೆ ಸದಸ್ಯ ತ್ವವನ್ನು ವಜಾ ಮಾಡುವುದಾಗಿ ಅಧ್ಯಕ್ಷ ದೇವರಾಜ್ ನಾಯ್ಡು ತಿಳಿಸಿದರು.

ಪಟ್ಟಣದ ಲೋಕೋಪಯೋಗಿ ಇಲಾಖೆ ವಸತಿಗೃಹದಲ್ಲಿ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜಿ. ದೇವರಾಜ್ ನಾಯ್ಡು ಅಧ್ಯಕ್ಷತೆಯಲ್ಲಿ ಕರೆಯಲಾಗಿದ್ದ ಸರ್ವ ಸದಸ್ಯರ ಸಭೆಯಲ್ಲಿ ಅವರು ಮಾತನಾಡಿದರು.

ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಕಾರ್ಯದರ್ಶಿ ಮಧು ಇತ್ತೀಚೆಗೆ ಸಂಘದ ಬೈಲಾದ ನಿಯಮಗಳಿಗೆ ವಿರುದ್ಧವಾಗಿ ನಡೆದುಕೊಂಡಿದ್ದರಿಂದ ಆತನನ್ನು ಕಾರ್ಯದರ್ಶಿ ಹುದ್ದೆಯಿಂದ ವಜಾಗೊಳಿಸಿ ಶಿಸ್ತು ಕ್ರಮ ವಹಿಸಲಾಗಿದೆ.

ಇನ್ನು ಮುಂದೆ ಇಂತಹ ಸಂಘ ವಿರೋಧಿ ಚಟುವಟಿಕೆಯಲ್ಲಿ ಭಾಗ ವಹಿಸಿದರೆ ಸಂಘದ ಸದಸ್ಯತ್ವದಿಂದ ಸಂಪೂರ್ಣವಾಗಿ ವಜಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಲಾಯಿತು.

ಇದೇ ಸಂದರ್ಭದಲ್ಲಿ ಗೌರವಾಧ್ಯಕ್ಷ ಮಹಾದೇಶ್ ಪ್ರಧಾನ ಕಾರ್ಯದರ್ಶಿ ಪ್ರಭುಸ್ವಾಮಿ ಉಪಾಧ್ಯಕ್ಷ ಗೋವಿಂದ್ ಕಾರ್ಯದರ್ಶಿ ಶಾಗ್ಯ ನಂದೀಶ್ ಖಜಾಂಜಿ ಸೋಮಶೇಖರ್ ಸದಸ್ಯರಾದ ಅಜ್ಜೀಪುರ ಸುರೇಶ್ ಅಭಿಲಾಶ್ ಮಣಗಳ್ಳಿ ಮಹಾದೇವ ರಾಜೇಶ್,ಬಂಡಳ್ಳಿ ಶಿವಕುಮಾರ್, ಕಾಂಚಳ್ಳಿ ವಿಜಯಕುಮಾರ್, ರವಿ ಹಾಜರಿದ್ದರು.

## ಕಲೆ ಮತ್ತು ಸಂಸ್ಕೃತಿಯನ್ನು ಮೈಗೂಡಿಸಿಕೊಳ್ಳಿ: ಬಿ.ರಂಗೇಗೌಡ



**ಮೈಸೂರು:** ಕಲೆ ಎಲ್ಲರಿಗೂ ಒಲಿದು ಬರೋದಿಲ್ಲ, ಕೆಲವರಿಗೆ ಮಾತ್ರ ಒಲಿದು ಬರುತ್ತದೆ. ಕಲೆ ಮತ್ತು ಸಂಸ್ಕೃತಿ ಮೈಗೂಡಿಸಿಕೊಂಡರೆ ತಮ್ಮ ಬದುಕನ್ನು ಸುಂದರವಾಗಿ ಕಟ್ಟಿಕೊಡುವ ಶಕ್ತಿ ಕಲೆಗೆ ಇದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ಬಿ. ರಂಗೇಗೌಡ ಅವರು ಹೇಳಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತ ಇಲಾಖೆ, ಮೈಸೂರು ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಉಪಯೋಜನೆಯಡಿ ವಿದ್ಯಾರ್ಥಿಗಳ ನಿಲಯಗಳ ವಿದ್ಯಾರ್ಥಿಗಳಿಗೆ ಕಲಾಮಂದಿರದಲ್ಲಿ ಆಯೋಜಿಸಲಾಗಿದ್ದ ಕಲಾ ತರಬೇತಿ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂಗೀತ ನಾಟಕ, ಕ್ರೀಡೆ, ಇವುಗಳಿಗೆ ಯಾವುದೇ ಜಾತಿ ಬೇದ ಇಲ್ಲ. ಧರ್ಮಾತೀತವಾಗಿ ಎಲ್ಲವನ್ನು ಮೀರಿ ಬೆಳೆದು ಬಂದಿರುವಂತಹದ್ದು.ಈ ಕಲೆಯನ್ನು ಓದುವ ಜೊತೆಯಲ್ಲಿ ಕಲೆಯನ್ನು ಮೈಗೂಡಿಸಿಕೊಳ್ಳಿ. ಬಾಲ್ಯದಿಂದ ಪ್ರೌಢ ವ್ಯವಸ್ಥೆಗೆ ಬರುವ ಮಕ್ಕಳು ಮನಸ್ಸನ್ನು ಬೇರೆ ಕಡೆ ಚಂಚಲಗೊಳಿಸದೆ ಓದಿನ ಕಡೆ ಕೇಂದ್ರೀಕರಿಸಬೇಕು ಯಾವುದೇ ಆಕರ್ಷಣೆಗೆ ಒಳಗಾಗಬೇಡಿ. ಒಳ್ಳೆಯ ಸಂಸ್ಕಾರ, ಸಂಸ್ಕೃತಿಯನ್ನು ಪ್ರತಿಯೊಂದು ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಅಳವಡಿಕೊಳ್ಳಬೇಕು ಎಂದು ಹೇಳಿದರು.

ತರಬೇತುದಾರ ದೇವನಂದ ವರಪ್ರಸಾದ್ ಅವರು ಮಾತನಾಡಿ ಜಾನಪದ ಕಲೆಯು ಒಬ್ಬರಿಂದ ಒಬ್ಬರು ಕೇಳಿ ಹಾಡುವುದರ ಮೂಲಕ ಬೆಳೆದು ಬಂದಿದೆ. ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಕಲೆಯ ಬಗ್ಗೆ ತರಬೇತಿ ನೀಡಲು ಇಲಾಖೆ ಗಳು ಉತ್ತಮ ಕಾರ್ಯಕ್ರಮ ಆಯೋಜಿಸಿದ್ದು ಇದರ ಸದುಪಯೋಗ ಪಡೆದುಕೊಳ್ಳಿ ಎಂದರು.

ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಸರಿಯಾದ ತರಬೇತಿ ಸಿಕ್ಕರೆ ಮಕ್ಕಳು ಮುಂದೆ ಬೆಳೆಯುತ್ತಾರೆ. ಕಲಾ ತರಬೇತಿಯಂತಹ ಕಾರ್ಯಕ್ರಮಗಳನ್ನು ಸದುಪಯೋಗ ಮಾಡಿಕೊಂಡರೆ ಜೀವನದಲ್ಲಿ ಮುಂದೆ ಬರಲು ಸಹಾಯಕ ಆಗಲಿದೆ ಕಲೆಗಳನ್ನು ಕಲಿತಾಗ ತನ್ನಲ್ಲಿನ ಚೈತನ್ಯ ಹೊರ ಬರುತ್ತದೆ ಎಂದು ಹೇಳಿದರು.

ತರಬೇತಿ ಪಡೆದ ವಿದ್ಯಾರ್ಥಿನಿ ಸಾಕ್ಷಿ ಮಾತನಾಡಿ ಕಲೆ ಬಗ್ಗೆ ಹೆಚ್ಚಿನ ಮತ್ತು ಸಂಸ್ಕೃತಿ ಬಗ್ಗೆ ನಮಗೆ ಯಾವುದೇ ಜ್ಞಾನ ಇರಲಿಲ್ಲ ನೃತ್ಯ, ಸಂಗೀತ,ವೀರಗಾಸೆ ಬಗ್ಗೆ ತರಬೇತಿ ನೀಡಿದ್ದರೆ ಎಂದರು. ಸಮಾಜದಲ್ಲಿ ಶಿಸ್ತಿನಿಂದ ಹೇಗಿರಬೇಕು, ಹೇಗೆ ವರ್ತಿಸಬೇಕು ಎಂದು ತಿಳಿಸಿಕೊಟ್ಟಿದ್ದಾರೆ. ಧೈರ್ಯ ತುಂಬಿ ವೇದಿಕೆಯ ಮೇಲೆ ಪ್ರದರ್ಶನ ನೀಡುವಂತೆ ತರಬೇತಿ ನೀಡಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಎಂ. ಡಿ ಸುದರ್ಶನ್,ನಿಲಯ ಪಾಲಕರಾದ ಮೋಹನ ಕುಮಾರಿ ಕೆ. ಎಸ್ ಉಪಸ್ಥಿತರಿದ್ದರು.

## ನಾಳೆ ತಂಬಾಕು ಮಂಡಳಿ ಸಭೆ

**ಹುಣಸೂರು:** ಫೆ.23ರ ಸೋಮವಾರ ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ತಂಬಾಕು ಮಂಡಳಿ ಅಧಿಕಾರಿಗಳು ಖರೀದಿದಾರರ ಸಭೆ ಕರೆಯಲಾಗಿದೆ.

ಹುಣಸೂರು ತಾಲೂಕಿನ ಕಟ್ಟೆಮಳಲವಾಡಿ ತಂಬಾಕು ಹರಾಜು ಮಾರುಕಟ್ಟೆಯಲ್ಲಿ ಕಳೆದ ಮೂರ್‍ನಾಲ್ಕು ದಿನಗಳಿಂದ ರೈತರು ತಂಬಾಕು ಬೆಲೆ ಕುಸಿತದಿಂದಾಗಿ ಹೋರಾಟ ಮಾಡುತ್ತಿರುವ ಬಗ್ಗೆ ಮಾಹಿತಿ ತಿಳಿದು ಸ್ಥಳಕ್ಕೆ ಮಾಜಿ ಶಾಸಕರಾದ ಎಚ್.ಪಿ. ಮಂಜುನಾಥ್ ಹಾಗೂ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಅವರು ಭೇಟಿ ನೀಡಿ ಸ್ಥಳದಿಂದಲೇ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ದೂರವಾಣಿ ಮೂಲಕ ಮಾಹಿತಿ ನೀಡಿ



ದೂರವಾಣಿ ಮೂಲಕವೇ ತಂಬಾಕು ರೈತರಿಗೆ ಆತ್ಮಸ್ಥೈರ್ಯ ತುಂಬಿ ಈಗಾಗಲೇ ತಂಬಾಕು ಬೆಳೆಗಾರ ಹಿತ ಕಾಯಲು ಮುಂದಾಗಬೇಕೆಂದು ಪತ್ರ ಸಹ ಬರೆಯಲಾಯಿತು. ಕೂಡಲೇ ಕೇಂದ್ರ ಸರ್ಕಾರ ತಂಬಾಕು ರೈತರ ಹಿತ ಕಾಪಾಡಲು ಮುಂದಾಗಬೇಕೆಂದು ಮತ್ತೊಮ್ಮೆ ಪತ್ರ ಬರೆದಿರುವುದಾಗಿ ತಿಳಿಸಿ ಈ ಬಗ್ಗೆ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಮೈಸೂರು ಜಿಲ್ಲಾಧಿಕಾರಿಗಳಾದ ಲಕ್ಷ್ಮೀಕಾಂತ್ ರೆಡ್ಡಿಯವರಿಗೆ ದೂರವಾಣಿ ಮೂಲಕವೇ ಮಾತನಾಡಿ ತಂಬಾಕು ಮಂಡಳಿಯ ಅಧಿಕಾರಿಗಳು ಹಾಗೂ ತಂಬಾಕು ಖರೀದಿ ಕಂಪನಿಗಳ ಮುಖ್ಯಸ್ಥರೊಂದಿಗೆ ಸಭೆ ನಡೆಸಿ ಕೂಡಲೇ ತಂಬಾಕು ಬೆಳೆಗಾರರ ಹಿತ ಕಾಪಾಡಲು ಮುಂದಾಗಬೇಕೆಂದು ಸೂಚಿಸಿದ್ದಾರೆ.

## ಓದು ಜೀವನ ಪರಿವರ್ತನೆ ಕಾರಣವಾಗುತ್ತೇ: ಗುರುರಾಜ ಕರಜಗಿ




ಮೈಸೂರು: ಪುಸ್ತಕವು ಮನರಂಜನೆಯ ಮೂಲವಾಗಿ ಪ್ರಾರಂಭವಾಗಬಹುದು, ಆದರೆ ಅದು ಅಂತಿಮವಾಗಿ ವೈಯಕ್ತಿಕ ಪರಿವರ್ತನೆಗೆ ಕಾರಣವಾಗುತ್ತದೆ ಮತ್ತು ಓದುಗರ ಜೀವನ ಮತ್ತು ಅನುಭವವನ್ನು ಶ್ರೀಮಂತಗೊಳಿಸುತ್ತದೆ ಎಂದು ಶಿಕ್ಷಣ ತಜ್ಞ, ಲೇಖಕ ಡಾ.ಗುರುರಾಜ ಕರಜಗಿ ಹೇಳಿದರು.

ಮೈಸೂರು ಮಹಾರಾಜ ಕಾಲೇಜಿನ ಶತಮಾನೋತ್ಸವ ಭವನದಲ್ಲಿ ಮೈಸೂರು ಲಿಟರರಿ ಅಸೋಸಿಯೇಷನ್ ವತಿಯಿಂದ ಆಯೋಜಿಸಿದ್ದ ಮೈಸೂರು ಲಿಟರರಿ ಫೆಸ್ಟ್–2026 7ನೇ ಆವೃತ್ತಿ ಉದ್ಘಾಟಿಸಿ ಮಾತನಾಡಿದ ಅವರು, ಸಾಹಿತ್ಯಕ್ಕೆ ವ್ಯಕ್ತಿಯಿಂದ ಸಮಾಜವನ್ನು ಬದಲಾಯಿಸುವ ಶಕ್ತಿಯಿದೆ. ಹಾಸ್ಯದ ಮೂಲಕವೇ ಬದುಕಿನ ಅರ್ಥವನ್ನು ತಿಳಿಸಲಿದೆ ಎಂದರು.

ಮೈಸೂರು ಸದಾ ಸಾಂಸ್ಕೃತಿಕ ಜೀವನದ ಮೇಲೆ ನಂಬಿಕೆ ಇಟ್ಟಿರುವಂತೆ, ಸಾಹಿತ್ಯವು ಸಂಸ್ಕೃತಿಯನ್ನು ಆಧರಿಸಿದೆ. ಇಂದು ನಾವೆಲ್ಲರೂ ಸೇರಿ ಒಂದಾಗಿ ಪದಪುಂಜಗಳ ಸಂಭ್ರಮಾಚರಣೆ ನಡೆಸುತ್ತಿದ್ದೇವೆ.

ಸಾಹಿತ್ಯವು ಕೇವಲ ಬುದ್ಧಿಶಕ್ತಿಗೆ ಸೀಮಿತವಾಗದೆ ಹೃದಯವನ್ನು ತಲುಪಲಿದೆ. ಅದು ಜೀವನ ಪಾಠಗಳನ್ನು ಕಲಿಸುತ್ತದೆ ಮತ್ತು ಜೀವನವನ್ನು ಬದಲಾಯಿಸುವ ಪ್ರೇರಣೆಯನ್ನು ನೀಡುತ್ತದೆ. ಬಾಲ್ಯದಲ್ಲಿ ಚಂದಮಾಮ, ಪಂಚತಂತ್ರ, ಸಣ್ಣ ಸಣ್ಣ ಹಾಸ್ಯ ಕಥೆಗಳ ಮೂಲಕ ಮನರಂಜನೆ ನೀಡುವ ಸಾಹಿತ್ಯವೂ ಆರ್. ಕೆ.ನಾರಾಯಣ್ ಅವರ ಮಾಲ್ಗುಡಿ ಡೇಸ್, ಮಹಾತ್ಮ ಗಾಂಧಿ, ನೆಲ್ಸನ್ ಮಂಡೆಲಾ ಅವರ ಆತ್ಮಕಥೆಗಳು ಹಾಗೂ ಶಿವರಾಮ ಕಾರಂತರ ಮೂಕಜ್ಜಿಯ ಕನಸುಗಳು, ರವೀಂದ್ರನಾಥ ಟ್ಯಾಗೋರ್ ರಚಿತ ಗೀತಾಂಜಲಿ, ವಿ.ಸ. ಖಾಂಡೇಕರ್ ಅವರ ಮರಾಠಿ ಭಾಷೆಯ

ಶಾಸಕ ಹರೀಶ್ ಗೌಡ ಚಾಲನೆ

# 42ಕೋಟಿ ರೂ. ವಿವಿಧ ಕಾಮಗಾರಿಗೆ ಚಾಲನೆ

ಮೈಸೂರು:ಮಹಾನಗರ ಪಾಲಿಕೆ ಮತ್ತು ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮ ನಿಯಮಿತ (ಕರ್ನಾಟಕ ಸರ್ಕಾರದ ಉದ್ಯಮ) ಅನುದಾನದಡಿ ಕಲುಷಿತ ನೀರು ಕೆರೆಕಟ್ಟೆಗಳಿಗೆ ಸೇರುತ್ತಿರುವುದನ್ನು ತಡೆಗಟ್ಟುವ ಸಲುವಾಗಿ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ ಪರಿಸರ ಪರಿಹಾರ ನಿಧಿ ಅಡಿಯಲ್ಲಿ ಬಳಸಿದ ನೀರು ನಿರ್ವಹಣೆ ಯೋಜನೆಯ ಹಂತ ?2 ರಲ್ಲಿ ಮೈಸೂರು ನಗರದ ವ್ಯಾಪ್ತಿಯಲ್ಲಿ ಅಂದಾಜು 42 ಕೋಟಿ ರೂಪಾಯಿಗಳ ವೆಚ್ಚದ ಕಾಮಗಾರಿಗೆ ಶಾಸಕ ಕೆ.ಹರೀಶ್ ಗೌಡ ಚಾಲನೆ ನೀಡಿದರು.

ಸದರಿ ಅನುದಾನದಲ್ಲಿ ಒಳಚರಂಡಿ ವ್ಯವಸ್ಥೆಯ ನಿರ್ಮಾಣ, ಉನ್ನತೀಕರಣ ಕಾಮಗಾರಿಗಳಗೆ ಒಟ್ಟು ಮೂರು ಕಡೆ ರಾಯಲ್ ಇನ್ ವೃತ್ತ ರಿಂಗ್ ರಸ್ತೆ,




ಶೇಷಾದ್ರಿಪುರಂ ಕಾಲೇಜು ರಿಂಗ್ ರಸ್ತೆ ಹಾಗೂ ಪುಲಿಕೇಶಿ ರಸ್ತೆ ಗುದ್ದಲಿ ಪೂಜೆ ನೆರವೇರಿಸಿದರು ಈ ಸಂಧರ್ಭದಲ್ಲಿ ಇಂದಿರಾಗಾಂಧಿ ಬ್ಲಾಕ್ ಅಧ್ಯಕ್ಷ ರವಿ ಎಂ.ಜಿ.ಕೊಪ್ಪಲು, ದೇವರಾಜ ಬ್ಲಾಕ್ ಅಧ್ಯಕ್ಷ ಡಿ. ನಾಗಭೂಷಣ್, ಮಾಜಿ ಮೇಯರ್ ಗಳಾದ ಪುಷ್ಪವಲ್ಲಿ , ಅನಂತು , ನಗರಪಾಲಿಕೆ ಮಾಜಿ ಸದಸ್ಯರಾದ ಪೈಲ್ವಾನ್ ಶ್ರೀನಿವಾಸ್, ಮುಖಂಡರಾದ ಕೇಬಲ್ ನಾಗಣ್ಣ, ರಮೇಶ್, ಮಹೇಶ್ ಮಸಿಯಪ್ಪ, ವೆಂಕಟೇಶ್, ಡೈರಿ ರಮೇಶ್, ಸುಪ್ರೀಂ ಮಂಜು ಮಹಾನಗರ ಪಾಲಿಕೆ ಸೂಪರಿಂಡೆಂಟ್ ಇಂಜಿನಿಯರ್ ಆದ ಮಂಜು, ಎಕ್ಸಿಕ್ಯೂಟಿವ್ ಇಂಜಿನಿಯರ್ ಆದ ಅಶ್ವಿನ್, ಸಹಾಯಕ ಇಂಜಿನಿಯರ್ ಗಳಾದ ಮುಸ್ತಫಾ, ಶುಶ್ರುತ್, ಮುದ್ದು ಮಲ್ಲೇಗೌಡ ಸೇರಿ ಇನ್ನಿತರರು ಭಾಗಿಯಾಗಿದ್ದರು.

ಕರ್ನಾಟಕ ಸರ್ಕಾರ

# ಸಾರ್ಥಕ ಸಾವಿರ ದಿನಗಳು



# ಸಾಕಾರಗೊಂಡಿವೆ ಕೋಟಿ ಕನಸುಗಳು





"ವರ್ತಮಾನದಲ್ಲಿ ನಾವು ಏನು ಕೆಲಸಗಳನ್ನು ಮಾಡುತ್ತೇವೆಯೋ, ಅದರ ಮೇಲೆ ಭವಿಷ್ಯ ನಿರ್ಧಾರವಾಗುತ್ತದೆ."

ಮಹಾತ್ಮ ಗಾಂಧೀಜಿ

ಮಹಾತ್ಮ ಗಾಂಧೀಜಿಯವರ **'ಅಂತ್ಯೋದಯ'** ಮತ್ತು **'ಸರ್ವೋದಯ'** ತತ್ವದ ಅಡಿಯಲ್ಲಿ, ಸನ್ಮಾನ್ಯ ಮುಖ್ಯಮಂತ್ರಿಗಳಾದ **ಶ್ರೀ ಸಿದ್ದರಾಮಯ್ಯ** ಮತ್ತು ಮಾನ್ಯ ಉಪ ಮುಖ್ಯಮಂತ್ರಿಗಳಾದ **ಶ್ರೀ ಡಿ ಕೆ ಶಿವಕುಮಾರ್** ಅವರ ನಾಯಕತ್ವದ ಕರ್ನಾಟಕ ಸರ್ಕಾರ ಸಾರ್ಥಕ ಸಾವಿರ ದಿನಗಳನ್ನು ಪೂರೈಸಿದೆ.

## ಪ್ರಮುಖ ಮೈಲಿಗಲ್ಲುಗಳು

**₹1.16+ ಲಕ್ಷ ಕೋಟಿ**
ಪಂಚ ಗ್ಯಾರಂಟಿಗಳಿಗೆ ಈವರೆಗೆ ವಿನಿಯೋಗ

**2.11+ ಲಕ್ಷ**
ಕುಟುಂಬಗಳಿಗೆ ಹಕ್ಕುಪತ್ರ

**₹1.5 ಲಕ್ಷ ಕೋಟಿ**
ಬೆಂಗಳೂರು ಮೂಲಸೌಕರ್ಯಕ್ಕೆ ವೆಚ್ಚ

**₹1.12+ ಲಕ್ಷ ಕೋಟಿ**
ಸಾರ್ವಜನಿಕ ಕಲ್ಯಾಣ ಯೋಜನೆಗಳಿಗೆ ಮೀಸಲು (ವಾರ್ಷಿಕ)

**1.37+ ಕೋಟಿ**
ಕುಟುಂಬಗಳು ಸರ್ಕಾರದ ಯೋಜನೆಗಳ ನೇರ ಫಲಾನುಭವಿಗಳು

ಕರ್ನಾಟಕದ ನವ ನಿರ್ಮಾಣಕ್ಕೆ
**ಗ್ಯಾರಂಟಿ ಸರ್ಕಾರ**

**ಪ್ರಗತಿಯ ಹಾದಿ
ಇದು ಕರ್ನಾಟಕ ಅಭಿವೃದ್ಧಿ ಮಾದರಿ**

ಶಕ್ತಿ ಅನ್ನಭಾಗ್ಯ ಗೃಹ ಜ್ಯೋತಿ ಗೃಹಲಕ್ಷ್ಮಿ ಯುವನಿಧಿ

CMofKarnataka https://dipr.karnataka.gov.in/

"ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
-ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ಕರ್ನಾಟಕ ವಾರ್ತೆ

ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ಹಿಂದುಳಿದ ವರ್ಗ/ ಬ್ರಾಹ್ಮಣ ಸಮುದಾಯಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆಪ್ರೋತ್ಸಾಹ ರೂಪದ ಜಾಹೀರಾತು

# ಛತ್ರಪತಿ ಶಿವಾಜಿ, ಸರ್ವಜ್ಞ ಜಯಂತಿ ಆಚರಣೆ

**ಅರಸೀಕೆರೆ:** ಹಿಂದುಳಿದ ವರ್ಗಗಳು ಮತ್ತು ತಳ ಸಮುದಾಯಗಳು ಸಂಘಟಿತವಾಗಬೇಕು. ಆ ಮೂಲಕ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಹಾಗೂ ಔದ್ಯೋಗಿಕವಾಗಿ ಮುನ್ನೆಲೆಗೆ ಬರಬೇಕು ಎಂದು ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷ, ಶಾಸಕ ಕೆ.ಎಂ.ಶಿವಲಿಂಗೇಗೌಡ ಸಲಹೆ ನೀಡಿದರು.

ನಗರದ ತಾಲೂಕು ಕಚೇರಿ ಕಂದಾಯ ಭವನದಲ್ಲಿ ತಾಲೂಕು ಆಡಳಿತ ಹಾಗೂ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ, ತಾಲೂಕು ಮರಾಠ ಸಂಘ ಮತ್ತು ತಾಲೂಕು ಕುಂಬಾರ ಸಂಘದ ಸಹಯೋಗದಲ್ಲಿ ಆಯೋಜಿಸಿದ್ದ ಛತ್ರಪತಿ ಶಿವಾಜಿ ಅವರ 399 ನೇ ಜಯಂತಿ ಹಾಗೂ ಷಟ್ಪದಿಗಳ ಬ್ರಹ್ಮ ಸರ್ವಜ್ಞ ಅವರ 506 ನೇ ಜಯಂತಿ ಕಾರ್ಯಕ್ರಮದಲ್ಲಿ ಇಬ್ಬರು ಮಹನೀಯರ ಭಾವಚಿತ್ರಗಳಿಗೆ ಪೂಜೆ ಹಾಗೂ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

17 ನೇ ಶತಮಾನದಲ್ಲೇ ಸರ್ವಜ್ಞ ತಮ್ಮ ವಚನಗಳ ಮೂಲಕ ನಾಡಿನ ಜನತೆಯ ಒಳಿತಿಗಾಗಿ ಕೊಡುಗೆ ನೀಡಿದ್ದಾರೆ. ಅದೇ ರೀತಿ 200 ವರ್ಷಗಳ ಕಾಲ ಭಾರತದ ಆಡಳಿತವನ್ನು ತಮ್ಮ ಕಪಿಮುಷ್ಠಿಯಲ್ಲಿ ಹಿಡಿದಿಟ್ಟುಕೊಂಡಿದ್ದ ಬ್ರಿಟಿಷರನ್ನು ದೇಶದಿಂದ ಓಡಿಸಲು ಛತ್ರಪತಿ ಶಿವಾಜಿ ಅಳವಡಿಸಿಕೊಂಡಿದ್ದ ತಮ್ಮ ಯುದ್ಧದ ಚತುರುತೆಯನ್ನು ಭಾರತೀಯರಾದ ನಾವು ಎಂದೂ ಮರೆಯಲಾಗದು ಎಂದರು.



ರಾಜ್ಯದ ಪ್ರಸ್ತುತ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಹಿಂದೆ ಮುಖ್ಯಮಂತ್ರಿ ಆಗಿದ್ದ ಅವಧಿಯಲ್ಲಿ ರಾಜ್ಯದ ಎಲ್ಲಾ ಧರ್ಮ ಮತ್ತು ಸಮುದಾಯಗಳಿಗೆ ಸೇರಿದ ಒಟ್ಟು 36 ಮಹನೀಯರ ಜಯಂತಿಯನ್ನು ಸರ್ಕಾರದ ವತಿಯಿಂದ ಆಚರಿಸಲು ಮುನ್ನುಡಿ ಬರೆದರು. ಇಂಥ ತೀರ್ಮಾನ ತೆಗೆದುಕೊಳ್ಳುವ ಧೈರ್ಯ ಸಾಮಾಜಿಕ ಕಳಕಳಿವುಳ್ಳ ಮುಖ್ಯಮಂತ್ರಿಗೆ ಮಾತ್ರ ಸಾಧ್ಯ ಎಂದರು.

ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಧರ್ಮಶೇಖರ್, ಸದಸ್ಯ ಸಿದ್ದೇಶ್ ಜಾಜೂರು, ತಾಲೂಕು ಗಂಗಾಮತಸ್ಥ ಸಂಘದ ಅಧ್ಯಕ್ಷ ಲಕ್ಷ್ಮಣ್, ತಾಲೂಕು ಮರಾಠ ಸಂಘದ ಅಧ್ಯಕ್ಷ ಚಂದ್ರಶೇಖರ್, ತಾಲೂಕು ಕುಂಬಾರ ಸಂಘದ ಅಧ್ಯಕ್ಷ ದಯಾನಂದ್, ಮುಖಂಡರಾದ ಗುರುಮೂರ್ತಿ, ಆನಂದ್, ಗಣಪತಿ ಮಹಾದೇವ್, ತಾಲೂಕು ಮರಾಠ ಮತ್ತು ಕುಂಬಾರ ಎರಡೂ ಸಮುದಾಯಗಳ ಮುಖಂಡರು ಹಾಗೂ ಬಾಂಧವರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರಾಘವೇಂದ್ರಸ್ವಾಮಿ 405ನೇ ಪಟ್ಟಾಭಿಷೇಕ

**ರಾಮನಾಥಪುರ:** ಶ್ರೀಗುರು ರಾಘವೇಂದ್ರ ಸ್ವಾಮಿ 405 ನೇ ಪಟ್ಟಾಭಿಷೇಕ ಮಹೋತ್ಸವದ ಅಂಗವಾಗಿ ಕಾವೇರಿ ನದಿ ದಂಡೆಯಲ್ಲಿರುವ ಶ್ರೀ ರಾಘವೇಂದ್ರಸ್ವಾಮಿ ಮಠದಲ್ಲಿ ಲೋಕ ಕಲ್ಯಾಣಾರ್ಥವಾಗಿ ವಿಶೇಷ ಪೂಜಾ ಕೈಂಕರ್ಯ, ಉತ್ಸವಾದಿಗಳು ಪ್ರಾರಂಭವಾದವು.

ರಾಮನಾಥಪುರದ ಶ್ರೀಮಠದ ಅವರಣದಲ್ಲಿ ಶ್ರೀಗುರುರಾಯರ ಅಷ್ಟಕ್ಷರ ಹೋಮ ಹವನಾದಿಗಳು, ಸೇರಿದಂತೆ ವಿವಿಧ ಪೂಜೆ, ಧಾರ್ಮಿಕ ಸೇವಾ ಕಾರ್ಯಗಳು ಜರುಗಿದವು. ಶ್ರೀ ಸ್ವಾಮಿಯವರ ಬೃಂದಾವನಕ್ಕೆ ವಿಶೇಷ ಅಭಿಷೇಕ ಮಾಡಲಾಯಿತು. ಅಲ್ಲದೇ ಬೃಂದಾವನಕ್ಕೆ ವಿಶೇಷ ಹಾಗೂ ಮನಮೋಹಕ ಹೂವಿನ ಅಲಂಕಾರ ಭಕ್ತರ ಮನ ಸೆಳೆಯಿತು. ಬೆಳಗ್ಗೆಯಿಂದಲೇ ಭಕ್ತರು ಶ್ರೀಮಠಕ್ಕೆ ಅಗಮಿಸಿ ಭಕ್ತಿಭಾವದಿಂದ ಆರತಿ ದೀಪ ಬೆಳಗಿಸಿ ಗುರುರಾಯರ ದರ್ಶನ ಪಡೆದು ವಿಶೇಷ ಪೂಜೆ ಹಾಗೂ ಪ್ರಾರ್ಥನೆ ಸಲ್ಲಿಸಿದರು.



## ಅಗ್ನಿಶಾಮಕ ನೌಕರ ಹರೀಶ್‌ಗೆ ರಾಷ್ಟ್ರಮಟ್ಟದ ಪದಕ ಪ್ರದಾನ



**ಮಂಡ್ಯ:** ಪಾಂಡವಪುರ ಅಗ್ನಿಶಾಮಕ ಇಲಾಖೆಯಲ್ಲಿ ಪ್ರಮುಖ ಅಗ್ನಿಶಾಮಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಹರೀಶ್ ಎನ್. ಎಸ್. ಅವರಿಗೆ ಕೇಂದ್ರ ಸರ್ಕಾರ 2024ನೇ ಸಾಲಿನ ರಾಷ್ಟ್ರಮಟ್ಟದ ಪದಕ ನೀಡಿ ಗೌರವಿಸಿದೆ.

ರಾಜ್ಯ ಅಗ್ನಿಶಾಮಕ ಇಲಾಖೆಯ ಪೊಲೀಸ್ ಮಹಾನಿರ್ದೇಶಕ ಪ್ರಶಾಂತ್ ಕುಮಾರ್ ಠಾಕೂರ್ ಅವರು ಬೆಂಗಳೂರಿನ ಕೇಂದ್ರ ಕಚೇರಿಯಲ್ಲಿ ಹರೀಶ್ ಅವರಿಗೆ ಪದಕ ಪ್ರದಾನ ಮಾಡಿದರು.

ಹರೀಶ್ ಅವರು ಕಳೆದ 20 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದು, ಈ ಹಿಂದೆ ಇವರು ಹಾಸನ ಜಿಲ್ಲೆಯ ಹೊಳೆನರಸೀಪುರ, ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆ ಯಲ್ಲಿ ಕರ್ತವ್ಯ ನಿರ್ವಹಿಸಿದ್ದರು. ಪ್ರಸ್ತುತ ಪಾಂಡವಪುರ ಅಗ್ನಿಶಾಮಕ ಠಾಣೆ ಪ್ರಭಾರ ಅಗ್ನಿಶಾಮಕ ಠಾಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಕರ್ನಾಟಕ ಸರ್ಕಾರ ನೀಡುವ ಮುಖ್ಯಮಂತ್ರಿ ಚಿನ್ನದ ಪದಕವನ್ನೂ ಪಡೆದಿರುವ ಇವರು, ರಾಜ್ಯ ಹಾಗೂ ಮಂಡ್ಯ ಜಿಲ್ಲೆಯ ಗೌರವವನ್ನು ಹೆಚ್ಚಿಸಿದ್ದಾರೆ. ಹರೀಶ್ ಅವರನ್ನು ಮಂಡ್ಯ ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಬಿ.ಎಂ. ರಾಘವೇಂದ್ರ, ಪ್ರಭಾಕರ ಮತ್ತು ಇತರ ಅಧಿಕಾರಿ ಸಿಬ್ಬಂದಿಯವರು ಅಭಿನಂದಿಸಿದ್ದಾರೆ.

## ಅಹಿತಕರ ಘಟನೆ ನಿಯಂತ್ರಣಕ್ಕೆ ಒತ್ತಾಯ

ಸಕಲೇಶಪುರ: ಹಿಂದೂಗಳನ್ನು ಗುರಿಯಾಗಿಸಿಕೊಂಡು ಕೆಲವೆಡೆ ನಡೆಯುತ್ತಿರುವ ಅಹಿತಕರ ಘಟನೆಗಳ ನಿಯಂತ್ರಣಕ್ಕೆ ಒತ್ತಾಯಿಸಿ ಹಿಂದೂ ಹಿತರಕ್ಷಣಾ ವೇದಿಕೆ ಕಾರ್ಯಕರ್ತರು ನಗರ ಠಾಣೆ ಇನ್ಸ್‌ಪೆಕ್ಟರ್ ಮೂಲಕ ರಾಜ್ಯ ಪೊಲೀಸ್ ಮಹಾನಿರ್ದೇಶಕರಿಗೆ ಮನವಿ ಸಲ್ಲಿಸಿದರು.

ಬಾಗಲಕೋಟೆಯಲ್ಲಿ ಶಿವಾಜಿ ಜಯಂತಿ ಅಂಗವಾಗಿ ನಡೆಯುತ್ತಿದ್ದ ಮೆರವಣಿಗೆಯ ವೇಳೆ ಕಲ್ಲು ತೂರಾಟ ಹಾಗೂ ಚಪ್ಪಲಿ ಎಸೆದ ಘಟನೆ ಸಂಭವಿಸಿದೆ. ಇಂತಹ ಘಟನೆಗಳ ಹಿಂದೆ ಪ್ರಬಲ ಮತಾಂಧ ಶಕ್ತಿಗಳ ಕೈವಾಡವಿದೆ. ಚಿಕ್ಕಮಗಳೂರಿನಲ್ಲಿ ಹಿಂದೂ ದಲಿತ ಮಹಿಳೆಯ ಮನೆ ಮೇಲೆ ನಿರಂತರ ಕಲ್ಲು ತೂರಾಟ ನಡೆಸಿ, ಮನೆಯಲ್ಲಿ ಇದ್ದ ಮಹಿಳೆ ಹಾಗೂ ಯುವತಿಯನ್ನು ಗುರಿಯಾಗಿಸಿಕೊಂಡು ನಿಂದನೆ ಮಾಡಿದ ಘಟನೆ ಕೂಡ ರಾಜ್ಯದಲ್ಲಿ ಉಂಟಾದ ಅಶಾಂತಿಯ ಉದಾಹರಣೆಯಾಗಿದೆ ಎಂದು ತಿಳಿಸಿದರು. ಹಿಂದೂ ಮುಖಂಡ ರಘು ಸಕಲೇಶಪುರ, ಶಿವು ಜಿಪ್ಪಿ, ಶೇಖರ್ ಸಿದ್ದಾಪುರ ಹಾಗೂ ಸುಪ್ರಿತ್ ಉಪಸ್ಥಿತರಿದ್ದರು.



# ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಸಿದ್ಧತೆ

## ಲೋಪ ಆಗದಂತೆ ಕ್ರಮವಹಿಸಲು ಅಧಿಕಾರಿಗಳಿಗೆ ಡಿಸಿ ಲತಾಕುಮಾರಿ ಸೂಚನೆ

**ಹಾಸನ:** ಮಾರ್ಚ್ 18ರಿಂದ ಏಪ್ರಿಲ್ 2ರವರೆಗೆ ನಡೆಯಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಜಿಲ್ಲೆಯಲ್ಲಿ ಸಕಲ ಸಿದ್ಧತೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಪರೀಕ್ಷಾ ಸಿದ್ಧತಾ ಪೂರ್ವಭಾವಿ ಸಭೆ ನಡೆಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಒಟ್ಟು 20,750 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದು, 19,718 ಹೊಸ, 343 ಖಾಸಗಿ, 615 ಪುನರಾವರ್ತಿತ ಹಾಗೂ 74 ಖಾಸಗಿ ಪುನರಾವರ್ತಿತ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು ತಿಳಿಸಿದರು.

ಹೊಸ ವಿದ್ಯಾರ್ಥಿಗಳಲ್ಲಿ 9,904 ಬಾಲಕರು ಹಾಗೂ 9,814 ಬಾಲಕಿಯರು ಇದ್ದಾರೆ. ಗ್ರಾಮೀಣ ಪ್ರದೇಶದಿಂದ 12,823 ಮತ್ತು ನಗರ ಪ್ರದೇಶದಿಂದ 6,895 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ ಎಂದರು.

ತಾಲೂಕುವಾರು ಹೊಸ ವಿದ್ಯಾರ್ಥಿಗಳಲ್ಲಿ ಹಾಸನ– 4,637, ಆಲೂರು– 981, ಅರಕಲಗೂಡು– 2,331, ಅರಸೀಕೆರೆ–3,487, ಬೇಲೂರು– 2,031, ಚನ್ನರಾಯಪಟ್ಟಣ– 2,863, ಹೊಳೆನರಸೀಪುರ–2,131 ಹಾಗೂ ಸಕಲೇಶಪುರ– 1,257 ಮಂದಿ ಸೇರಿದ್ದಾರೆ. ಜಿಲ್ಲೆಯಲ್ಲಿ ಒಟ್ಟು 78 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಹಾಸನ ನಗರದಲ್ಲಿ 16, ಆಲೂರು–5, ಅರಸೀಕೆರೆ–11, ಅರಕಲಗೂಡು–9, ಬೇಲೂರು–7, ಚನ್ನರಾಯಪಟ್ಟಣ–12, ಹೊಳೆನರಸೀಪುರ–9 ಹಾಗೂ ಸಕಲೇಶಪುರ–9 ಕೇಂದ್ರಗಳಿವೆ ಎಂದರು.

ಮುಖ್ಯ ಅಧೀಕ್ಷಕರನ್ನು ಹೊರತುಪಡಿಸಿ ಇತರ ಸಿಬ್ಬಂದಿಗೆ ಮೊಬೈಲ್ ಬಳಕೆ ನಿಷೇಧಿಸಲಾಗಿದೆ. ಸಿಬ್ಬಂದಿ ಕಡ್ಡಾಯವಾಗಿ ಗುರುತಿನ ಚೀಟಿ ಧರಿಸಬೇಕು. ವಿದ್ಯಾರ್ಥಿಗಳಿಗೆ ಮೊಬೈಲ್, ವಾಚ್, ಬ್ಲೂಟೂತ್ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ಸಾಧನ ತರಲು ಅವಕಾಶವಿಲ್ಲ. ಪರೀಕ್ಷೆಗೆ ಸಂಬಂಧಿಸದವರ ಪ್ರವೇಶ ಸಂಪೂರ್ಣ ನಿರ್ಬಂಧಿಸಲಾಗಿದೆ ಎಂದರು.

ಎಲ್ಲಾ 78 ಕೇಂದ್ರಗಳಲ್ಲೂ ವಿದ್ಯಾರ್ಥಿಗಳು ಹಾಗೂ ಕೊಠಡಿ ಮೇಲ್ವಿಚಾರಕರನ್ನು ರ್‍ಯಾಂಡಮೈಸೇಶನ್ ಮೂಲಕ ನಿಯೋಜಿಸಲಾಗಿದೆ. ಪರೀಕ್ಷೆಗಳ ಸಮರ್ಪಕ ನಿರ್ವಹಣೆಗೆ ಕರ್ನಾಟಕ ಸ್ಕೂಲ್ ಎಕ್ಸಾಮಿನೇಷನ್ ಅಂಡ್ ಅಸಸ್ಮೆಂಟ್ ಬೋರ್ಡ್ ವತಿಯಿಂದ ಸ್ಥಾನಿಕ ಜಾಗೃತದಳ ಹಾಗೂ ತಾಲೂಕು ಮಟ್ಟದ ಸಂಚಾರಿ ಜಾಗೃತದಳಗಳನ್ನು ನಿಯೋಜಿಸಲಾಗಿದೆ. ಪ್ರತೀ ಕೇಂದ್ರಕ್ಕೆ ಮುಖ್ಯಅಧೀಕ್ಷಕರು, ಸಹ ಮುಖ್ಯ ಅಧೀಕ್ಷಕರು, ಉತ್ತರಪತ್ರಿಕೆ ಪಾಲಕರು ಹಾಗೂ ಕಚೇರಿ ಸಿಬ್ಬಂದಿಯನ್ನು ನೇಮಿಸಲಾಗಿದೆ. ವಿಶೇಷಚೇತನ ವಿದ್ಯಾರ್ಥಿಗಳಿಗೆ ಎರಡು ಭಾಷೆಗಳಿಂದ ವಿನಾಯಿತಿ, ಸಹಾಯಕ ಬರಹಗಾರರ ವ್ಯವಸ್ಥೆ, ಒಂದು ಗಂಟೆ ಹೆಚ್ಚುವರಿ ಕಾಲಾವಕಾಶ ಹಾಗೂ ನೆಲಮಹಡಿಯಲ್ಲಿ ಆಸನ ವ್ಯವಸ್ಥೆ ಕಲ್ಪಿಸಲಾಗಿದೆ. ಈ ಬಾರಿ 225 ವಿದ್ಯಾರ್ಥಿಗಳು ಈ ಸೌಲಭ್ಯ ಪಡೆಯಲಿದ್ದಾರೆ ಎಂದರು.



> ಮಧುಮೇಹ ಹೊಂದಿರುವ ವಿದ್ಯಾರ್ಥಿಗಳಿಗೆ ಪರೀಕ್ಷೆ ಮಧ್ಯೆ ಆಹಾರ ಸೇವನೆಗೆ ಅವಕಾಶ ನೀಡಲಾಗಿದೆ. ಪರೀಕ್ಷಾ ದಿನಗಳಲ್ಲಿ ನಿರಂತರ ವಿದ್ಯುತ್ ಪೂರೈಕೆಗೆ ಸೆಸ್ಕ್ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ವಿದ್ಯಾರ್ಥಿಗಳ ಸುಗಮ ಸಂಚಾರಕ್ಕಾಗಿ ಕೆಎಸ್‌ಆರ್‌ಟಿಸಿ ಮೂಲಕ ಹೆಚ್ಚುವರಿ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ. ವಿದ್ಯಾರ್ಥಿಗಳು ಮೊದಲ ದಿನ ಕನಿಷ್ಠ 40 ನಿಮಿಷ ಮುಂಚಿತವಾಗಿ ಪರೀಕ್ಷಾ ಕೇಂದ್ರ ತಲುಪುವಂತೆ ಜಿಲ್ಲಾಡಳಿತ ಮನವಿ ಮಾಡಿದೆ.
>
> **ಲತಾ ಕುಮಾರಿ** ಜಿಲ್ಲಾಧಿಕಾರಿ

### ದ್ವಿ.ಪಿ.ಯು: 15,782 ಪರೀಕ್ಷಾರ್ಥಿಗಳು

ದ್ವಿತೀಯ ಪಿಯುಸಿ ಪರೀಕ್ಷೆ ಫೆಬ್ರವರಿ 28ರಿಂದ ಮಾರ್ಚ್ 17ರವರೆಗೆ ನಡೆಯಲಿದ್ದು, 15,782 ಮಂದಿ ಪರೀಕ್ಷೆ ಬರೆಯಲಿದ್ದಾರೆ ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಜಿಲ್ಲೆಯಲ್ಲಿ 14,759 ಹೊಸ ವಿದ್ಯಾರ್ಥಿಗಳು, 305 ಖಾಸಗಿ ಅಭ್ಯರ್ಥಿಗಳು, 715 ಪುನರಾವರ್ತಿತರು ಹಾಗೂ 3 ಮಂದಿ ಫಲಿತಾಂಶ ಉನ್ನತೀಕರಣಕ್ಕಾಗಿ ಹಾಜರಾಗುತ್ತಿದ್ದಾರೆ. 6,167 ಬಾಲಕರು ಮತ್ತು 8,592 ಬಾಲಕಿಯರು ಪರೀಕ್ಷೆ ಬರೆಯಲಿದ್ದಾರೆ ಎಂದರು.

ಹಾಸನ ನಗರದಲ್ಲಿ–12, ಆಲೂರು–1, ಅರಸೀಕೆರೆ–6, ಅರಕಲಗೂಡು–3, ಬೇಲೂರು–2, ಚನ್ನರಾಯಪಟ್ಟಣ–4, ಜಾವಗಲ್–1, ಹೊಳೆನರಸೀಪುರ–3 ಹಾಗೂ ಸಕಲೇಶಪುರ–1 ಕೇಂದ್ರಗಳಿವೆ. ಕಲಾ ವಿಭಾಗದಲ್ಲಿ 2,594, ವಾಣಿಜ್ಯ–5,317 ಹಾಗೂ ವಿಜ್ಞಾನದಲ್ಲಿ 6,848 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಗ್ರಾಮೀಣ ಪ್ರದೇಶದಿಂದ 4,875 ಹಾಗೂ ನಗರ ಪ್ರದೇಶದಿಂದ 9,884 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದರು.

ಪ್ರತಿಯೊಂದು ಕೇಂದ್ರದ ಸುತ್ತಮುತ್ತ 200 ಮೀ. ವ್ಯಾಪ್ತಿಯನ್ನು ನಿಷೇಧಿತ ಪ್ರದೇಶವೆಂದು ಘೋಷಿಸಲಾಗುತ್ತದೆ. ಎಲ್ಲಾ ಕೇಂದ್ರಗಳಲ್ಲಿ ಪೊಲೀಸ್ ಬಂದೋಬಸ್ತ್ ಕಲ್ಪಿಸಬೇಕು. ಸಮೀಪದ ಜೆರಾಕ್ಸ್ ಮತ್ತು ಸೈಬರ್ ಕೇಂದ್ರಗಳನ್ನು ಪರೀಕ್ಷಾ ಅವಧಿಯಲ್ಲಿ ಮುಚ್ಚಲು ಸೂಚಿಸಲಾಗಿದೆ. ಪರೀಕ್ಷಾ ಅಕ್ರಮಗಳನ್ನು ತಡೆಯಲು ಸಿಸಿಟಿವಿ ಕಣ್ಗಾವಲು ಹಾಗೂ ವೆಬ್‌ಕಾಸ್ಟಿಂಗ್ ವ್ಯವಸ್ಥೆ ಜಾರಿಗೊಂಡಿದೆ. ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಪ್ರತಿ ಕೊಠಡಿಯ ಚಲನವಲನಗಳನ್ನು ನೇರ ವೀಕ್ಷಣೆ ಮಾಡುವ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಲತಾಕುಮಾರಿ ತಿಳಿಸಿದರು.

## ಬ್ರಹ್ಮಕುಮಾರಿ ವತಿಯಿಂದ ವಿಶೇಷ ಕಾರ್ಯಕ್ರಮ



**ಸಕಲೇಶಪುರ:** ಪಟ್ಟಣದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯ ವತಿಯಿಂದ ಶಿವರಾತ್ರಿ ಅಂಗವಾಗಿ ನಗರದ ಲಯನ್ಸ್ ಹಾಲ್‌ನಲ್ಲಿ ಇತ್ತೀಚೆಗೆ ವಿಶೇಷ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ರಾಜ ಯೋಗಿಣಿ ಆಶಾಕ್ಕ, ಶಿವರಾತ್ರಿ ಕೇವಲ ಒಂದು ದಿನದ ಆಚರಣೆ ಅಲ್ಲ. ಅದು ಜೀವನಪೂರ್ತಿ ಜಾಗೃತಿಯ ಸಂಕೇತ. ಹಬ್ಬ ಆಚರಿಸಲು ದುಡ್ಡು ಮುಖ್ಯವಲ್ಲ, ಮನಸ್ಸು ಮುಖ್ಯ. ಒಂದು ದಿನದ ಹಬ್ಬಕ್ಕಿಂತ ಜೀವನಪೂರ್ಣ ಶುದ್ಧತೆ, ಸತ್ಕಾರ್ಯ ಮತ್ತು ಆತ್ಮಪರಿಶೀ ಲನೆ ಮುಖ್ಯ ಎಂದು ತಿಳಿಸಿದರು.

ಇಂದಿನ ತಂತ್ರಜ್ಞಾನ ಯುಗದಲ್ಲಿ ಮೊಬೈಲ್ ಮತ್ತು ಗೂಗಲ್ ಮೂಲಕ ಶಿವರಾತ್ರಿಯ ಬಗ್ಗೆ ಅನೇಕ ಮಾಹಿತಿಗಳು ದೊರೆಯುತ್ತವೆ. ಆದರೆ, ಅದರ ನಿಜವಾದ ಅರ್ಥವನ್ನು ಅರಿತು ಜೀವನದಲ್ಲಿ ಅಳವಡಿಸಿಕೊಳ್ಳುವುದು ಮುಖ್ಯ. ಶಿವರಾತ್ರಿ ಎಂದರೆ ಅಜ್ಞಾನ ಅಂಧಕಾರವನ್ನು ದೂರ ಮಾಡುವ ಆತ್ಮಜಾಗೃತಿ. ಉಪವಾಸ ಮತ್ತು ಜಾಗರಣೆ ಕೇವಲ ಶಾರೀರಿಕ ಕ್ರಮವಾಗಬಾರದು ಎಂದರು.

ಮುಖ್ಯಅತಿಥಿಯಾಗಿ ಆಗಮಿಸಿದ್ದ ರಘು ಜೀ ಮಾತನಾಡಿ, ದುಷ್ಟರ ಶಿಕ್ಷೆ ಹಾಗೂ ಶಿಷ್ಟರ ರಕ್ಷಣೆಗಾಗಿ ಭಗವಂತನು ಪ್ರತಿ ಯುಗದಲ್ಲೂ ಅವತರಿಸುತ್ತಾನೆ. ಕಲಿಯುಗದಲ್ಲಿ ಈ ಕಾರ್ಯ ಸಂಘಟನೆ ಶಕ್ತಿಯಿಂದ ನಡೆಯುತ್ತದೆ. ಬ್ರಹ್ಮಕುಮಾರಿ ಸಂಸ್ಥೆಯಂತಹ ಸಂಘಟನೆಗಳು ಸಮಾಜವನ್ನು ಜಾಗೃತಗೊಳಿಸುವಲ್ಲಿ ಶ್ರೇಷ್ಠ ಕಾರ್ಯ ಮಾಡುತ್ತಿವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲೂಕು ಲಯನ್ಸ್ ಸಂಸ್ಥೆ ಅಧ್ಯಕ್ಷ ಗಿರೀಶ್ ಮಂಜು ವಹಿಸಿದ್ದರು. ಈ ಸಂದರ್ಭದಲ್ಲಿ ಸತ್ಯ, ಸುಂದರ್, ಬಿ.ಕೆ. ಚಂದ್ರಿಕಾ, ಶಶಿ , ಶಿವಣ್ಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ

**ಮಡಿಕೇರಿ:** ಛತ್ರಪತಿ ಶಿವಾಜಿ ಮಹಾರಾಜರು ಭರತ ಖಂಡದಲ್ಲಿ ಜನಿಸದಿದ್ದರೆ ದೇಶದ ಸ್ಥಿತಿಯನ್ನು ಊಹಿಸಿಕೊಳ್ಳಲು ಸಾಧ್ಯವಾಗುತ್ತಿರಲಿಲ್ಲ ಎಂದು ಕನ್ನಡ ಸಾಹಿತ್ಯ ಪರಿಷತ್ ನಿಕಟ ಪೂರ್ವ ಅಧ್ಯಕ್ಷ ಲೋಕೇಶ್ ಸಾಗರ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಗಾಂಧಿ ಭವನದಲ್ಲಿ ನಡೆದ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿ ದರು. ಶಿವಾಜಿ ಮಹಾರಾಜರ ತಾಯಿ ಜೀಜಾಬಾಯಿ ಅವರು ಮಕ್ಕಳನ್ನು ಹೇಗೆ ಬೆಳೆಸಬೇಕು ಎಂಬು ದನ್ನು ಸಮಾಜಕ್ಕೆ ಹೇಳಿಕೊಟ್ಟಿದ್ದಾರೆ. ಗುಡ್ಡಗಾಡು ಪ್ರದೇಶದಲ್ಲಿ ಹುಟ್ಟಿ ಬೆಳೆದು ಭರತಖಂಡದ ಸಾಮ್ರಾಜ್ಯವನ್ನು ಕಟ್ಟಿದ್ದಾರೆ ಎಂದು ಹೇಳಿದರು.

ತಾಯಿ ಜೀಜಾಬಾಯಿ ಅವರ ಕಥೆಯನ್ನು ಕೇಳಿ ಬೆಳೆದ ಶಿವಾಜಿ ಅವರು ಸಮಾಜಕ್ಕೆ ಏನಾದರೂ ಕೊಡಬೇಕು ಎಂಬ ಉದ್ದೇಶದಿಂದ ಇಡೀ ಭರತ ಸಾಮ್ರಾಜ್ಯವನ್ನು ಕಟ್ಟಲು ಪ್ರಯತ್ನಿಸುತ್ತಾರೆ. ಶಿವಾಜಿ ಮಹಾರಾಜರು ಎಲ್ಲರನ್ನು ಪ್ರೀತಿಸುತ್ತಿದ್ದರು. ಗೌರವಿಸುತ್ತಿದ್ದರು. ಅವರ ತಾಯಿ ಜಿಜಾಬಾಯಿ ಅವರು ಮಕ್ಕಳಿಗೆ ನೈತಿಕ ಶಿಕ್ಷಣ ನೀಡಬೇಕು ಎಂಬುದು ಅಶಯವಾಗಿತ್ತು ಎಂದು ಹೇಳಿದರು.



ಸಂತ ಚೀನಾ ಸೋಮೇಶ್ ಮಾತನಾಡಿ, ಶಿವಾಜಿ ಅವರು ಭರತ ಭೂಮಿಯಲ್ಲಿ ಜನಿಸಿ ಸಾಮ್ರಾಜ್ಯ ವನ್ನು ಕಟ್ಟಿ ಬೆಳೆಸಿದರು. ಛತ್ರಪತಿ ಶಿವಾಜಿ ಮಹಾ ರಾಜರು ಭರತ ಖಂಡದ ಅನರ್ಘ್ಯ ರತ್ನ ಎಂದು ವರ್ಣಿಸಿದರು.

ಮರಾಠ ಸಮಾಜದ ಜಿಲ್ಲಾಧ್ಯಕ್ಷ ಎಸ್.ಆರ್. ಅರುಣ್ ರಾವ್ ಮಾತನಾಡಿ, ಛತ್ರಪತಿ ಶಿವಾಜಿ ಮಹಾರಾಜರು ಸಮಾಜಕ್ಕೆ ನೀಡಿರುವ ಸಂದೇಶಗಳನ್ನು ತಿಳಿದುಕೊಳ್ಳುವಂತಾಗಬೇಕು ಎಂದರು.

ಛತ್ರಪತಿ ಶಿವಾಜಿ ಮಹಾರಾಜರು ಮಹಿಳೆಯರಿಗೆ ಸಮಾನ ಅವಕಾಶ ಮತ್ತು ರಕ್ಷಣೆಗೆ ಒತ್ತು ನೀಡಿದ್ದರು. ಶಿವಾಜಿ ಮಹಾರಾಜರು ಭರತ ಸಾಮ್ರಾ ಜ್ಯದ ದೊರೆಯಾಗಿದ್ದಾರೆ ಎಂದು ಹೇಳಿದರು. ತಹಸೀಲ್ದಾರ್ ಶ್ರೀಧರ್ ಮಾತನಾಡಿ, ಛತ್ರಪತಿ ಶಿವಾಜಿ ಮಹಾರಾಜರ ವಿಚಾರಧಾರೆಗಳನ್ನು ಪ್ರತಿಯೊಬ್ಬರೂ ತಿಳಿದುಕೊಳ್ಳುವಂತಾಗಬೇಕು ಎಂದು ಹೇಳಿದರು.

ಪ್ರಮುಖರಾದ ಸುನಿಲ್ ರಾವ್, ನೇಕಾರರ ಒಕ್ಕೂಟದ ಕಾರ್ಯದರ್ಶಿ ಕೆ.ಕೆ.ನಾಗರಾಜ ಶೆಟ್ಟಿ, ಡಿ.ದೇವರಾಜ ಅರಸು ಅಭಿವೃದ್ಧಿ ನಿಗಮದ ವ್ಯವಸ್ಥಾಪಕಿ ಮಹಾದೇವಿ, ಇದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಸ್ವಾಗತಿಸಿದರು. ಕಲಾವತಿ ಮತ್ತು ತಂಡದವರು ನಾಡಗೀತೆ ಹಾಡಿದರು. ಮಣಜೂರು ಮಂಜುನಾಥ್ ನಿರೂಪಿಸಿ, ವಂದಿಸಿದರು.

## ರೈಲಿಗೆ ಸಿಲುಕಿ ಮನ್‌ಮುಲ್ ಉದ್ಯೋಗಿ ಆತ್ಮಹತ್ಯೆ

ಮಂಡ್ಯ: ನಗರದ ರೈಲ್ವೇ ನಿಲ್ದಾಣದದ ಕೂಗಳತೆ ದೂರದಲ್ಲಿ ಮನ್‌ಮುಲ್ ಉದ್ಯೋಗಿ ಗುರುವಾರ ಸಂಜೆ ರೈಲಿಗೆ ಸಿಲುಕಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.



ಎಚ್.ಡಿ.ಕೋಟೆ ತಾಲೂಕಿನ ಭರತ್ ರಾಜ್ (38) ಮೃತರು. ಭರತ್ ರಾಜ್ ಗೆಜ್ಜಲಗೆರೆ ಮನ್‌ಮುಲ್ನಲ್ಲಿ ಉಪ ವ್ಯವಸ್ಥಾಪಕರಾಗಿದ್ದರು. ಇವರ ಕುಟುಂಬ ಮೈಸೂರಿನಲ್ಲಿ ವಾಸವಿದ್ದು, ಮೈಸೂರಿ ನಿಂದಲೇ ಗೆಜ್ಜಲಗೆರೆ ಮನ್‌ಮುಲ್‌ಗೆ ಹೋಗಿ ಬರುವುದು ಮಾಡುತ್ತಿದ್ದರು. ಗುರುವಾರ ಸಂಜೆ ಇದ್ದಕಿದ್ದಂತೆ ಮೈಸೂರಿನಿಂದ ಬೆಂಗಳೂರಿಗೆ ಚಲಿಸುತ್ತಿದ್ದ ರೈಲಿಗೆ ಸಿಲುಕಿ ಸಾವನ್ನಪಿದ್ದಾರೆ.ಸುದ್ದಿ ತಿಳಿದ ಮಂಡ್ಯ ರೈಲ್ವೆ ಪೊಲೀಸರು ಆಗಮಿಸಿ ನೋಡುವಷ್ಟರಲ್ಲಿ ಪ್ರಾಣಪಕ್ಷಿ ಹಾರಿ ಹೋಗಿತ್ತು. ಮಂಡ್ಯ ಮಿಮ್ಸ್‌ನಲ್ಲಿ ಪಂಚನಾಮೆ ಬಳಿಕ ವಾರಸುದಾರರಿಗೆ ನೀಡಲಾಯಿತು ಎಂದು ಪೊಲೀಸರು ತಿಳಿಸಿದ್ದಾರೆ. ಮೃತರ ಭರತ್ ಕುಮಾರ್‌ಗೆ ಪತ್ನಿ ಹಾಗೂ ಮೂರು ವರ್ಷದ ಹೆಣ್ಣು ಮಗುವಿದೆ. ಘಟನೆಗೆ ಕಾರಣ ಏನೆಂದು ತಿಳಿದು ಬಂದಿಲ್ಲ. ಮಂಡ್ಯ ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕ್ರೀಡಾಂಗಣ ನಿರ್ಮಾಣಕ್ಕೆ 5 ಎಕರೆ ಜಾಗ ಹಸ್ತಾಂತರ

## ಸಿಲ್ಕ್ ಫ್ಯಾಕ್ಟರಿ ಆವರಣದಲ್ಲಿ ಕ್ರೀಡಾಂಗಣ ನಿರ್ಮಾಣಕ್ಕೆ 6 ಕೋಟಿ ರೂ. ಅನುದಾನ

**ತಿ.ನರಸೀಪುರ:** ತಾಲ್ಲೂಕು ಆಡಳಿತ ವತಿಯಿಂದ ಪಟ್ಟಣದ ಕರ್ನಾಟಕ ಸಿಲ್ಕ್ ಇಂಡಸ್ಟ್ರೀಸ್ ಕಾರ್ಪೊರೇಷನ್ (ಏಖಐಅ) (ಕೆಎಸ್‌ಐಸಿ) ಸಿಲ್ಕ್ ಫ್ಯಾಕ್ಟರಿ ಆವರಣದಲ್ಲಿ ಕ್ರೀಡಾಂಗಣ ನಿರ್ಮಾಣಕ್ಕಾಗಿ 5 ಎಕರೆ ಜಾಗವನ್ನು ಯುವಜನ ಕ್ರೀಡಾ ಇಲಾಖೆಗೆ ತಹಸೀಲ್ದಾರ್ ಸುರೇಶಾಚಾರ್ ಜಾಗವನ್ನು ಅಧಿಕೃತವಾಗಿ ಹಸ್ತಾಂತರಿಸಿದರು.

ತದ ನಂತರ ಮಾತನಾಡಿದ ತಹಸೀಲ್ದಾರ್ ಸುರೇಶಾಚಾರ್, “ತಾಲ್ಲೂಕಿನಲ್ಲಿ ಸಮಗ್ರ ಕ್ರೀಡಾಂಗಣ ನಿರ್ಮಾಣವಾಗಬೇಕು ಎಂಬುದು ಸಾರ್ವಜನಿಕರ ಬಹುದಿನದ ಕನಸಾಗಿತ್ತು. ಇದೀಗ ಸರ್ಕಾರದ ಸಹಕಾರದಿಂದ ಆ ಕನಸು ನನಸಾಗುತ್ತಿದೆ. ಸಿಲ್ಕ್ ಫ್ಯಾಕ್ಟರಿ ಜಾಗದಲ್ಲಿ 5 ಎಕರೆ ಪ್ರದೇಶವನ್ನು ನಿಗದಿಪಡಿಸಿ, ಅಳತೆ ಮಾಡಿ, ಗಡಿ ಗುರುತು ಮಾಡಿಸಿ ಯುವಜನ ಕ್ರೀಡಾ ಇಲಾಖೆಗೆ ಹಸ್ತಾಂತರಿಸಲಾಗಿದೆ,” ಎಂದು ತಿಳಿಸಿದರು.

ಜಿಲ್ಲಾ ಯುವಜನ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಭಾಸ್ಕರ್ ನಾಯಕ್ ಮಾತನಾಡಿ, “2024–25ನೇ ಸಾಲಿನ ಬಜೆಟ್‌ನಲ್ಲಿ ಕ್ರೀಡಾಂಗಣ ನಿರ್ಮಾಣಕ್ಕಾಗಿ ರೂ. 6 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ. ಇನ್ನೂ ಒಂದು ವಾರದಲ್ಲಿ ಟೆಂಡರ್ ಪ್ರಕ್ರಿಯೆ ಆರಂಭಿಸಿ ಕಾಮಗಾರಿಗೆ ಚಾಲನೆ ನೀಡಲಾಗುವುದು,” ಎಂದು ಹೇಳಿದರು.



> ಕ್ರೀಡಾಂಗಣ ನಿರ್ಮಾಣ ಸ್ಥಳದಲ್ಲಿ ಅನವಶ್ಯಕವಾಗಿ ಯಾವುದೇ ಮರಗಳನ್ನು ಕಡಿಸುವುದಿಲ್ಲ. ಅಗತ್ಯವಿದ್ದಲ್ಲಿ ಮಾತ್ರ ಮರಗಳನ್ನು ತೆರವುಗೊಳಿಸಲಾಗುವುದು. ಉಳಿದ ಮರಗಳನ್ನು ಸಂರಕ್ಷಿಸಿ, ಸುತ್ತಮುತ್ತಲಿನ ಪ್ರದೇಶದಲ್ಲಿ ಸಸಿಗಳನ್ನು ನೆಟ್ಟು ಹಸಿರು ವಾತಾವರಣವನ್ನು ನಿರ್ಮಿಸಲಾಗುವುದು.
>
> **ಭಾಸ್ಕರ್ ನಾಯಕ್** ಜಿಲ್ಲಾ ಯುವಜನ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ

ಸಿಲ್ಕ್ ಫ್ಯಾಕ್ಟರಿ ನೌಕರರು ತಮ್ಮ ಆತಂಕ ವ್ಯಕ್ತಪಡಿಸಿ, “ಫ್ಯಾಕ್ಟರಿ ಆವರಣದಲ್ಲಿ ಕ್ರೀಡಾಂಗಣ ನಿರ್ಮಾಣ ಮಾಡಿದರೆ ಭವಿಷ್ಯದಲ್ಲಿ ಕಾರ್ಖಾನೆ ಮುಚ್ಚುವ ಪರಿಸ್ಥಿತಿ ಉಂಟಾಗಬಹುದು. ನೂರಾರು ಕುಟುಂಬಗಳು ಈ ಕಾರ್ಖಾನೆಯನ್ನು ಅವಲಂಬಿಸಿಕೊಂಡಿವೆ. ಆದ್ದರಿಂದ ಕ್ರೀಡಾಂಗಣವನ್ನು ಬೇರೆ ಸ್ಥಳದಲ್ಲಿ ನಿರ್ಮಿಸಬೇಕು ಎಂದು ಕಾರ್ಖಾನೆ ನೌಕರರು ಒತ್ತಾಯಿಸಿದರು.

> ಕ್ರೀಡಾಂಗಣ ನಿರ್ಮಾಣದಿಂದ ನೌಕರರಿಗೆ ಯಾವುದೇ ತೊಂದರೆ ಆಗುವುದಿಲ್ಲ. ಫ್ಯಾಕ್ಟರಿ ಮುಚ್ಚುವ ಪ್ರಶ್ನೆಯೇ ಇಲ್ಲ. ಊಹಾಪೋಹಗಳಿಗೆ ಕಿವಿಗೊಡಬೇಡಿ. ನಿಮ್ಮೊಂದಿಗೆ ನಾವು ಇದ್ದೇವೆ. ಕ್ರೀಡಾಂಗಣ ನಿರ್ಮಾಣಕ್ಕೆ ಸಹಕರಿಸಿ.
>
> **ಬಿ.ಮರಯ್ಯ** ತಾ.ಪಂ. ಮಾಜಿ ಉಪಾಧ್ಯಕ್ಷ

ಜಿಲ್ಲಾ ಯುವಜನ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಭಾಸ್ಕರ್ ನಾಯಕ್, ಎಇಇ ಜಯಪ್ರಕಾಶ್, ತಹಸೀಲ್ದಾರ್ ಸುರೇಶಾಚಾರ್, ಪೊಲೀಸ್ ಇನ್ಸ್‌ಪೆಕ್ಟರ್ ಧನಂಜಯ್, ಮಾಜಿ ತಾಲೂಕು ಪಂಚಾಯತ್ ಉಪಾಧ್ಯಕ್ಷ ಮರಯ್ಯ, ಆರ್.ಐ. ಮಹೇಂದ್ರ, ಕೆಎಸ್‌ಐಸಿ ಸಿಲ್ಕ್ ಫ್ಯಾಕ್ಟರಿಯ ಸಿಬ್ಬಂದಿ, ಕಾರ್ಮಿಕರು ಉಪಸ್ಥಿತರಿದ್ದರು.

## ಅಕ್ರಮ ಪಡಿತರ ಅಕ್ಕಿ ವಶ

**ತಿ.ನರಸೀಪುರ:** ಅಕ್ರಮವಾಗಿ ಪಡಿತರ ಅಕ್ಕಿ ಸಾಗಿಸುತ್ತಿದ್ದ ಗೂಡ್ಸ್ ಆಟೋ ಮೇಲೆ ಆಹಾರ ಇಲಾಖೆ ಅಧಿಕಾರಿಗಳು ಮತ್ತು ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ ಪಡಿತರ ಅಕ್ಕಿಯನ್ನು ವಶ ಪಡಿಸಿಕೊಂಡಿದ್ದಾರೆ.

ಆಹಾರ ಮತ್ತು ನಾಗರಿಕ ಸರಬ ರಾಜು ಇಲಾಖೆ ಜಂಟಿ ನಿರ್ದೇಶಕರು ಹಾಗೂ ತಹಸೀಲ್ದಾರ್ ಅವರ ಮಾರ್ಗದರ್ಶನದಲ್ಲಿ ಜಂಟಿ ಕಾರ್ಯಾಚರಣೆ ನಡೆ ಸಿದ ಅಧಿಕಾರಿಗಳು ಗುರುವಾರ ತಾಲೂಕಿನ ಹೊಸ ಹೆಮ್ಮಿಗೆ ಗ್ರಾಮದ ಬಳಿ ಅಕ್ರಮವಾಗಿ ಗೂಡ್ಸ್ ಆಟೋ (ಕೆಎ 54–4302)ದಲ್ಲಿ ಸಾಗಿಸುತ್ತಿದ್ದ 350 ಕೆಜಿ ಪಡಿತರ ಅಕ್ಕಿಯನ್ನು ವಶಪಡಿಸಿಕೊಂಡಿ ದ್ದಾರೆ. ದಾಳಿಯಲ್ಲಿ ತಲಕಾಡು ಪೊಲೀಸ್ ಠಾಣೆ ಪಿಎಸ್‌ಐ ವಿಜಯರಾಜ್, ಆಹಾರ ಶಿರಸ್ತೇದಾರ್ ಎನ್.ಸದಾನಂದ ಮತ್ತು ಪೊಲೀಸ್ ಸಿಬ್ಬಂದಿ ಶಿವಕುಮಾರ್, ಶಿವಾನಂದ ಇವರು ಭಾಗಿಯಾಗಿದ್ದರು. ಈ ಕುರಿತು ತಲಕಾಡು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.



# ನಿಯಮ ಮೀರುವವರ ವಿರುದ್ಧ ಕ್ರಮ



ಹನೂರು: ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ನಿಯಮಗಳಿಗೆ ವಿರುದ್ಧವಾಗಿ ನಡೆದುಕೊಂಡಿದ್ದ ಮಧುನನ್ನು ಕಾರ್ಯದರ್ಶಿಯ ಸ್ಥಾನದಿಂದ ವಜಾ ಗೊಳಿಸಿ ಮುಂದಿನ ದಿನಗಳಲ್ಲಿ ಪುನರಾವರ್ತನೆ ಆದರೆ ಸದಸ್ಯತ್ವವನ್ನು ವಜಾ ಮಾಡುವುದಾಗಿ ಅಧ್ಯಕ್ಷ ದೇವರಾಜ್ ನಾಯ್ಡು ತಿಳಿಸಿದರು.

ಪಟ್ಟಣದ ಲೋಕೋಪಯೋಗಿ ಇಲಾಖೆ ವಸತಿಗೃಹದಲ್ಲಿ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜಿ ದೇವರಾಜ್ ನಾಯ್ಡು ಅಧ್ಯಕ್ಷತೆಯಲ್ಲಿ ಕರೆಯಲಾಗಿದ್ದ ಸರ್ವ ಸದಸ್ಯರ ಸಭೆಯಲ್ಲಿ ಅವರು ಮಾತನಾಡಿದರು. ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಕಾರ್ಯದರ್ಶಿ ಮಧು ಇತ್ತೀಚೆಗೆ ಸಂಘದ ಬೈಲಾದ ನಿಯಮಗಳಿಗೆ ವಿರುದ್ಧವಾಗಿ ನಡೆದುಕೊಂಡಿದ್ದರಿಂದ ಅತನನ್ನು ಕಾರ್ಯದರ್ಶಿ ಹುದ್ದೆಯಿಂದ ವಜಾಗೊಳಿಸಿ ಶಿಸ್ತು ಕ್ರಮ ವಹಿಸ ಲಾಗಿದೆ. ಇನ್ನು ಮುಂದೆ ಇಂತಹ ಸಂಘ ವಿರೋಧಿ ಚಟುವಟಿಕೆಯಲ್ಲಿ ಭಾಗವಹಿಸಿದರೆ ಸಂಘದ ಸದಸ್ಯತ್ವದಿಂದ ಸಂಪೂರ್ಣವಾಗಿ ವಜಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಲಾಯಿತು. ಇದೇ ಸಂದರ್ಭದಲ್ಲಿ ಗೌರವಾಧ್ಯಕ್ಷ ಮಹಾದೇಶ್ ಪ್ರಧಾನ ಕಾರ್ಯದರ್ಶಿ ಪ್ರಭುಸ್ವಾಮಿ ಉಪಾಧ್ಯಕ್ಷ ಗೋವಿಂದ್ ಕಾರ್ಯದರ್ಶಿ ಶಾಶ್ವ ನಂದೀಶ್ ಖಜಾಂಚಿ ಸೋಮಶೇಖರ್ ಸದಸ್ಯರಾದ ಅಜ್ಜೀಪುರ ಸುರೇಶ್ ಅಭಿಲಾಶ್ ಮಣಗಳ್ಳಿ ಮಹಾದೇವ ರಾಜೇಶ್.ಬಂಡಳ್ಳಿ ಶಿವಕುಮಾರ್ ವಿಜಯಕುಮಾರ್, ರವಿ, ಹಾಜರಿದ್ದರು

# ವಿದ್ಯಾರ್ಥಿಗಳಿಗೆ ಪೋಷಕರ ಪಾದಪೂಜೆ



ಕೆ.ಆರ್.ಪೇಟೆ, ಪಟ್ಟಣದ ಕೇಂಬ್ರಿಡ್ಜ್ ಪಬ್ಲಿಕ್ ಶಾಲೆಯಲ್ಲಿ ಶಾರದಾ ಪೂಜೆ ಮತ್ತು ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳಿಗೆ ಪಾದಪೂಜೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಶಾರದಾ ಪೂಜೆ ಮತ್ತು ಪೋಷಕರಿಗೆ ಪಾದ ಪೂಜೆ ಕಾರ್ಯಕ್ರಮವು ಭಾರತೀಯ ಸಂಸ್ಕೃತಿಯಲ್ಲಿ ಮಹತ್ವದ್ದಾಗಿದೆ. ಶಾರದಾ ಪೂಜೆಯು ಜ್ಞಾನ, ಸಂಗೀತ, ಕಲೆ ಮತ್ತು ಬುದ್ಧಿವಂತಿಕೆಯ ದೇವತೆಯಾದ ಸರಸ್ವತಿಯನ್ನು ಪೂಜಿಸುವ ಹಬ್ಬವಾಗಿದೆ. ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಕಲಾವಿದರು ಈ ದಿನದಂದು ಸರಸ್ವತಿಯನ್ನು ಪೂಜಿಸಿ, ತಮ್ಮ ಜ್ಞಾನ ಮತ್ತು ಕೌಶಲ್ಯಗಳನ್ನು ಹೆಚ್ಚಿಸಿಕೊಳ್ಳಲು ಪ್ರಾರ್ಥಿಸುತ್ತಾರೆ. ಪೋಷಕರಿಗೆ ಪಾದಪೂಜೆ ಕಾರ್ಯಕ್ರಮವು ನಮ್ಮ ಸಂಸ್ಕಾರದ ಗುಣವಾಗಿದೆ. ಮಕ್ಕಳು ತಮ್ಮ ಪೋಷಕರಿಗೆ ಗೌರವ ಸಲ್ಲಿಸಲು ಮತ್ತು ಅವರ ಆಶೀರ್ವಾದ ಪಡೆಯಲು ಒಂದು ಅವಕಾಶವಾಗಿದೆ. ಪೋಷಕರು ಮಕ್ಕಳಿಗೆ ಜೀವನದ ಮೊದಲ ಗುರುಗಳು ಮತ್ತು ಅವರ ಮಾರ್ಗದರ್ಶನವು ಮಕ್ಕಳ ಬೆಳವಣಿಗೆಗೆ ಅತ್ಯಗತ್ಯವಾಗಿದೆ. ಎಂದು ಸಂಸ್ಥೆಯ ಕಾರ್ಯದರ್ಶಿ ಶಿವಕುಮಾರ್ ತಿಳಿಸಿದರು. ಸಭೆಯಲ್ಲಿ ಕೇಂಬ್ರಿಡ್ಜ್ ಪಬ್ಲಿಕ್ ಶಾಲೆಯ ಅಧ್ಯಕ್ಷ ಪಿ.ವಿ.ರಮೇಶ್, ಕಾರ್ಯದರ್ಶಿ ಶಿವಕುಮಾರ್ ,ಖಜಾಂಚಿ ಶೀಲಾ ಶಿವಕುಮಾರ್, ಮುಖ್ಯ ಶಿಕ್ಷಕಿ ರಹಿಲಾಬಾನು,ಶಿಕ್ಷಕರಾದ ರಶ್ಮಿ, ಪ್ರಕಾಶ್, ಸಂಧ್ಯಾ, ಪ್ರೀತಿ, ಶ್ರೀಕಾಂತ, ಶಬಾನಬಾನು, ಜಯಶ್ರೀ.ಸಿ.ಸಿನ್, ಚೈತ್ರ, ಸಾಮ್ಯ, ಭವ್ಯ, ಜಯಶ್ರೀ ಎನ್, ರಮ್ಯಾ, ಮದೀನಾ, ಮಹಾಲಕ್ಷ್ಮಿ, ಪಿ.ಎಸ್.ಚಿರಂಗ್ ಬಾಬು. ಅಮ್ಜದ್ ಖಾನ್. ಹರಳಹಳ್ಳಿ, ಮನೋಜ್. ಮಂಜಣ್ಣ, ರಾಜಣ್ಣ, ಮುಟ್ಟುಪ್ರಸಾದ್. ಮಂಗಳಮ್ಮ. ಅರಣಿ ಗೀತಾ. ಇತರರು ಉಪಸ್ಥಿತರಿದ್ದರು.

# ಹಿಂದೂ-ಮುಸ್ಲಿಮರ ನಡುವೆ ಬೆಂಕಿ ಹಚ್ಚುವುದೇ ಪ್ರತಾಪಸಿಂಹ ಕೆಲಸ

ಮೈಸೂರು: ಸರ್ವಜನಾಂಗದ ಶಾಂತಿಯ ತೋಟವಾದ ಕರ್ನಾಟಕದಲ್ಲಿ ಪದೇ ಪದೇ ಹಿಂದೂ ಮುಸ್ಲಿಮರ ನಡುವೆ ಬೆಂಕಿ ಹಚ್ಚುವ ಕೆಲಸ ಮಾಡುವ ಪ್ರತಾಪ್ ಸಿಂಹ ಸಿದ್ದರಾಮಯ್ಯ ಅವರಿಗೆ ಸವಾಲ್ ಹಾಕುವುದು ಹಾಸ್ಯಾಸ್ಪದ ಎಂದು ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ಅಧ್ಯಕ್ಷ ಸುಬ್ರಹ್ಮಣ್ಯ ವಾಗ್ದಾಳಿ ನಡೆಸಿದರು.



ಸಿದ್ದರಾಮಯ್ಯಗೆ ತಾಕತ್ ಇದ್ದ ಮೈಸೂರು ಸಿಟಿಯಲ್ಲಿ ಸ್ಪರ್ಧೆ ಮಾಡೋಕೆ ಹೇಳಿ? ಎನ್ನುವ ಮಾಜಿ ಸಂಸದರ ಹೇಳಿಕೆಗೆ ಪ್ರತಿಕ್ರಿಯಿಸಿ, ಸಿದ್ದರಾಮಯ್ಯ ಅವರು ಕರ್ನಾಟಕದ 224 ಕ್ಷೇತ್ರಗಳಲ್ಲಿ ಎಲ್ಲೇ ನಿಂತರೂ, ಜನ ಸ್ವಾಗತಿಸುತ್ತಾರೆ. ಸಿದ್ದರಾಮಯ್ಯ ಅವರು ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಸೋತಿದ್ದು, ವಿರೋಧಿಗಳ ಕುತಂತ್ರದಿಂದ. ಅದೇ ಸಮಯ ಉತ್ತರ ಕರ್ನಾಟಕದಲ್ಲಿ ನಿಮ್ಮ ಪಕ್ಷದ ಶಾಸಕರನ್ನೇ ಸೋಲಿಸಿದ್ದು, ಮರೆತುಬಿಟ್ರಾ? ಸಿದ್ದರಾಮಯ್ಯ ಅವರು ಚುನಾವಣಾ ರಾಜಕಾರಣದಲ್ಲಿ ಸೋತಿದ್ದಾರೆ, ಆದ್ರೆ ಪಕ್ಷ ಎಂದಿಗೂ ಅವರನ್ನ ಮೂಲೆಗುಂಪು ಮಾಡಿಲ್ಲ. ನೀವು ಮೋದಿ ಬಿಟ್ಟರೆ, ದೇಶದಲ್ಲಿ ನಾನೇ ಅತಿಹೆಚ್ಚು ಕೆಲಸ ಮಾಡಿದ್ದು ಅಂತ ಬೀಗುತ್ತಿದ್ರಿ. ಅದಕ್ಕೆ ನಿಮ್ಮನ್ನ ಮೂಲೆಗುಂಪು ಮಾಡಿದ್ದಾರೆ ಎಂದು ಕುಟುಕಿದರು.

ತಾಯಿ ಹೆಸರಲ್ಲಿ 14 ಸೈಟು ಪಡೆದುಕೊಳ್ಳುವ ಕೆಲಸ ಮಾಡ್ತೀರಲ್ಲ ಅಂತ ಯತೀಂದ್ರ ಅವರನ್ನ ಕೇಳುತ್ತೀರಿ. ಸಿದ್ದರಾಮಯ್ಯ ಕುಟುಂಬ ಮುಡಾ ಸೈಟು ಪ್ರಕರಣದಲ್ಲಿ ಕಳಂಕಮುಕ್ತವಾಗಿದೆ. ಆದ್ರೆ ನೀವು ಜೀವನದಲ್ಲಿ ಅಳಿಸಲಾಗದ ಕಳಂಕ ಹೊತ್ತಿದ್ದೀರಿ. ಹೆಂಡತಿಯನ್ನ ತಂಗಿ ಅಂತ ಹೇಳಿ ಸೈಟು ಪಡೆಯುವ ಕೆಲಸವನ್ನ ಯತೀಂದ್ರ ಅವರು ಮಾಡಿಲ್ಲ ಎಂದು ತಿವಿದರು.

ಕೋವಿಡ್ ಸಮಯದಲ್ಲಿ ಮೈಸೂರಿನಲ್ಲಿ ಮಹಿಳಾ ಜಿಲ್ಲಾಧಿಕಾರಿಗಳು ಪ್ರೈವೇಟ್ ಆಸ್ಪತ್ರೆಗಳಲ್ಲಿ ನೀವು ಮಾಡುತ್ತಿದ್ದ ಅಕ್ರಮಗಳಿಗೆ ಬ್ರೇಕ್ ಹಾಕಿದಾಗ, ಅವರ ವಿರುದ್ಧ ತಿರುಗಿ ಬಿದ್ರಿ, ಎಲ್ಲರನ್ನ ಅವರ ವಿರುದ್ಧ ಎತ್ತಿಕಟ್ಟಿದ್ರಿ, ಈ ಕೆಲಸ ಯತೀಂದ್ರ ಅವರು ಮಾಡಲಿಲ್ಲ. ದಶಪಥ ಹೆದ್ದಾರಿ ನಾನು ಮಾಡಿಸಿದ್ದು ಅಂತೀರಿ, ಅದ್ರಲ್ಲಿ ಎಷ್ಟು ಕೋಟಿ ನೀವು ಹೊಡೆದ್ರಿ? ಒಂದು ರೂಪಾಯಿ ಹೊಡೆಯದೇ ಕೆಲಸ ಮಾಡಿದ್ದೀರಾ? ಅದೂ ಈ ಹೆದ್ದಾರಿ ಮೈಸೂರಿಗೆ ಬರೋದು ಸುಮಾರು 5 ಕಿಮೀ ಮಾತ್ರ, ಮಂಡ್ಯದಲ್ಲಿ ಸುಮಲತಾ ಅವರದು. ರಾಮನಗರದಲ್ಲಿ ಡಿಕೆ ಸುರೇಶ್ ಅವರದ್ದು, ಮಿಕ್ಕಿದ್ದು ಬೆಂಗಳೂರು ವ್ಯಾಪ್ತಿಗೆ ಸೇರುತ್ತದೆ. ಅವರೆಲ್ಲಾ ಸಾತ್ ಕೊಡದೇ ಒಬ್ಬರೇ ಮಾಡಿಬಿಟ್ರಾ? ಈಗ ಮಾಧ್ಯಮಗಳ ಮುಂದೆ ಬಂದು ಸಾಚಾಗಳಂತೆ ಮಾತನಾಡುವುದು ಎಷ್ಟು ಸರಿ? ಎಂದು ಲೇವಡಿ ಮಾಡಿದರು.

# ಸದನದಲ್ಲಿ ಸಿದ್ಧಲಿಂಗಯ್ಯ ಪುಸ್ತಕ ಓದಲಿ

## ದಲಿತ ಸಂಘರ್ಷ ಸಮಿತಿಯ ರಾಜ್ಯ ಪ್ರಧಾನ ಸಂಚಾಲಕ ಮಾವಳ್ಳಿ ಶಂಕರ್ ಹೇಳಿಕೆ

ಮೈಸೂರು: ಸಮಸ್ಯೆಗಳ ಬಗ್ಗೆ ಆಳವಾಗಿ ಅಧ್ಯಯನ ನಡೆಸಿ ವಿಧಾನ ಪರಿಷತ್ತಿನಲ್ಲಿ ಸಿದ್ದಲಿಂಗಯ್ಯ ಮಾತನಾಡಿ ಸರ್ಕಾರ ಗಮನ ಸೆಳೆದು ಸಮಸ್ಯೆ ಬಗೆಹರಿಸುತ್ತಿದ್ದರು. ಇಂದಿನ ರಾಜಕಾರಣಿಗಳು ಶಾಸನ ಸಭೆಯಲ್ಲಿ ಹೇಗೆ ಮಾತನಾಡಬೇಕು ಎಂಬ ಆದರ್ಶವನ್ನು ರೂಢಿಸಿಕೊಳ್ಳಲು ಸದನದಲ್ಲಿ ಸಿದ್ದಲಿಂಗಯ್ಯ ಪುಸ್ತಕಗಳನ್ನು ಓದಬೇಕು ಎಂದು ದಲಿತ ಸಂಘರ್ಷ ಸಮಿತಿಯ ರಾಜ್ಯ ಪ್ರಧಾನ ಸಂಚಾಲಕ ಮಾವಳ್ಳಿ ಶಂಕರ್ ಹೇಳಿದರು.

ನಗರದ ಮಾನಸ ಗಂಗೋತ್ರಿಯ ರಾಣಿ ಬಹದ್ದೂರ್ ಸಭಾಂಗಣದಲ್ಲಿ ದಲಿತ ಸಾಹಿತ್ಯ ಪರಿಷತ್ ಜಿಲ್ಲಾ ಮತ್ತು ರಾಜ್ಯ ಘಟಕ, ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ), ಮೈಸೂರು ವಿಶ್ವ ವಿದ್ಯಾನಿಲಯದ ದಲಿತ ವಿದ್ಯಾರ್ಥಿ ಪರಿಷತ್ ಸಹಯೋಗದಲ್ಲಿ ಶನಿವಾರ ನಡೆದ ಜನ ಕವಿ ಸಿದ್ದಲಿಂಗಯ್ಯ ಜನ್ಮ ದಿನಾಚರಣೆಯ ಅಂಗ ವಾಗಿ ಹೊಲೆ ಮಾದಿಗರ ಹಾಡು ಕೃತಿಯ 50ರ ಸಂಗ್ರಾಮ ಮತ್ತು ದಲಿತ ಸಾಹಿತ್ಯ ಪರಿಷತ್ ನ ದಿನದರ್ಶಿಕೆ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಪ್ರಸ್ತುತ ರಾಜಕಾರಣಿಗಳು ಶಾಸನ ಸಭೆಗಳಲ್ಲಿ ವರ್ತಿಸುತ್ತಿರುವ ರೀತಿ ನೀತಿಗಳು ರಾಜ್ಯದ ಜನತೆಗೆ ಮುಜುಗರ ತರುತ್ತಿವೆ. ಇಂತಹ ಸಂದನದಲ್ಲಿ ವಿಧಾನ ಸಭೆಯಲ್ಲಿರುವ ಹೊಸ ತಲೆಮಾರಿನ ಮತ್ತು ಒಟ್ಟು ಶಾಸಕರು ಶಾಸನ ಸಭೆಯಲ್ಲಿ ಹೇಗೆ ಮಾತನಾಡಬೇಕು ಎಂಬುದನ್ನು ತಿಳಿಯಲು 'ಸದನದಲ್ಲಿ ಸಿದ್ದಲಿಂಗಯ್ಯ' ಪುಸ್ತಕ ಆದರ್ಶವಾಗಿದೆ. ಹೀಗಾಗಿ ಈ ಪುಸ್ತಕವನ್ನು ಅ'?ಯಯನ ಮಾಡಬೇಕು ಎಂದು ವಿಶೇಷ ಮನವಿ ಮಾಡುತ್ತೇನೆ ಎಂದರು.

ಕಾಲಹರಣಕ್ಕಾಗಿ ಉಡಾಯಿಂದ ಅವರೆಂದಿಗೂ ಸದನದಲ್ಲಿ ಮಾತನಾಡಲಿಲ್ಲ. ತನ್ನ ಸಮುದಾಯದ ನೋವುಗಳನ್ನು ಎಲ್ಲ ಸಮುದಾಯದ ನೋವುಗಳಾಗಿ ಪರಿವರ್ತಿಸಿಕೊಂಡಿದ್ದರು. ದಲಿತ ಸಮುದಾಯದ



ಬಿಡುಗಡೆಯೇ ಎಲ್ಲ ಬಡವರ ಬಿಡುಗಡೆಯಲ್ಲಿ ಅಡಗಿದೆ ಎನ್ನುತ್ತ ಪ್ರತಿ ವಿಚಾರವನ್ನು ಮಂಡನೆ ಮಾಡುತ್ತಿದ್ದರು. ಇಂದಿನ ಜನಪ್ರತಿನಿsಗಳಿಗೆ ಇದು ಮಾದರಿಯಾಗಬೇಕು ಎಂದರು.

ಸಿದ್ದಲಿಂಗಯ್ಯ ಅವರು ಪ್ರತಿಕ್ಷಣ ಸಮುದಾಯದ ವಿಮೋಚನೆಗೆ ಪರಿತಪ್ಪಿಸುತ್ತಿದ್ದರು. ದೌರ್ಜನ್ಯವಾದಾಗ ಸಂಕಷ್ಟ ಅನುಭವಿಸುತ್ತಿದ್ದರು. ದಲಿತ ಚಳವಳಿಯ ಹೋರಾಟವೂ ಬಡವರ, ತುಳಿತಕ್ಕೆ ಒಳಗಾದವರ, ದಮನಿತ ಸಮುದಾಯಗಳ ಒಂದಾಗುವ ಮೂಲಕ ವಿಮೋಚನೆ ಹೋರಾಟವಾಗಿ ಮುಂದುವರಿಸಬೇಕು ಎಂಬ ಆಶಯ ಹೊಂದಿದ್ದರು.

1975ರಲ್ಲಿ ಬರೆದ ಹೊಲೆ ಮಾದಿಗರ ಹಾಡು ರಾಜ್ಯ ಹೋರಾಟಗಳಿಗೆ ಜೀವ ತುಂಬಿತು. ಇಂದು ಸಿದ್ದಲಿಂಗಯ್ಯ ಅವರ ಹಾಡು ಕರ್ನಾಟಕದ ಜನ ಮಾನಗಳಲ್ಲಿ ತುಂಬಿದೆ. ಯಾವುದೇ ಹೋರಾಟಗಳಲ್ಲಿ ಅವರು ಹಾಡು ಗಳಿಲ್ಲದೆ ಪೂರ್ಣವಾಗುವುದಿಲ್ಲ. ಸಿದ್ದಲಿಂಗಯ್ಯ ಅವರ ಚಿಂತನೆಗಳನ್ನು ಜೀವಂತ ವಾಗಿರಿಸುವ ಕೆಲಸಗಳು ನಡೆಯಬೇಕು ಎಂದರು.

ಶಾಸಕ ಜಿ.ಟಿ.ದೇವೇಗೌಡ ಮಾತನಾಡಿ, ಸಿದ್ದಲಿಂಗಯ್ಯ ಅವರು ತಮ್ಮ ಸಾಹಿತ್ಯದ ಮೂಲಕ ಸಮಾಜಕ್ಕೆ ಬೆಳಕು ಚೆಲ್ಲಿ ಪ್ರತಿಯೊಬ್ಬರು ಎಚ್ಚರಿಸುವ ಕೆಲಸ ಮಾಡಿದ್ದಾರೆ. ಅವರ ಪುಸ್ತಕಗಳನ್ನು ಪ್ರತಿಯೊಬ್ಬರು ಓದಬೇಕು. ದಮನಿತರು, ಶೋಷಿತರ ಪರವಾಗಿ '?ವನಿ ಎತ್ತುತ್ತಿದ್ದರು. ಸಾಮಾಜಿಕ ನ್ಯಾಯ ಪ್ರತಿಯೊಬ್ಬರಿಗೂ ಸಿಗಬೇಕು ಮತ್ತು ಸ್ವತ್ತು ಮತ್ತು ಸತ್ಯ ಪ್ರತಿಯೊಬ್ಬರ ಉಸಿರಾಗಬೇಕು ಎಂಬ ಆಶಯವಾದಾಗಿತ್ತು. ಅವರ ಆಶಯಗಳು ಇಂದಿನ ಪೀಳಿಗೆಗೆ ಆದರ್ಶವಾಗಬೇಕು ಎಂದು ಹೇಳಿದರು.

ಆದಿ ಕರ್ನಾಟಕ ಛಲವಾದಿ ಮಹಾಸಂಸ್ಥಾನ ಗುರುಪೀಠದ ಡಾ.ಜ್ಞಾನ ಸ್ವರೂಪಾನಂದ ಸ್ವಾಮೀಜಿ, ರಮಾ ಸಿದ್ದಲಿಂಗಯ್ಯ, ದಲಿತ ಸಾಹಿತ್ಯ ಪರಿಷತ್ ಸಂಯೋಜಕ ಡಾ.ಚಂದ್ರಗುಪ್ತ, ಹಿರಿಯ ರಂಗ ಕರ್ಮಿ ಜನಾರ್ದನ (ಜನ್ನಿ), ವಿದ್ಯಾ ವಿಕಾಸ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕವೀಶ್ ಗೌಡ, ರಂಗ ಸ್ವಾಮಿ ಕಾಳಿಹುಂಡಿ, ವಿಶ್ವಪ್ರಸಾದ, ಹಿರಿಯ ಹೋರಾಟಗಾರ ಎಲ್.ಶಿವಲಿಂಗಯ್ಯ, ಕರ್ನಾಟಕ ಕೇಂದ್ರಿಯ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕ ಪ್ರೊ.ಅಪ್ಪಗೆರೆ ಸೋಮಶೇಖರ್, ಮಲ್ಲಹಳ್ಳಿ ನಾರಾಯಣ, ಮೈಸೂರು ಸಂಶೋಧಕ ಸಂಘದ ಮಾಜಿ ಅಧ್ಯಕ್ಷ ಬಿ.ಮೂರ್ತಿ ಇನ್ನಿತರರು ಕಾರ್ಯಕ್ರಮದಲ್ಲಿ ಹಾಜರಿದ್ದರು.

# ವಿಮಾನ ನಿಲ್ದಾಣಕ್ಕೆ ಭೂಮಿ ಕೊಟ್ಟವರ ಬದುಕು ಹಸನಾಗಲಿ

**ಸಚಿವ ಕೆ.ಎಚ್.ಮುನಿಯಪ್ಪ**

ದೇವನಹಳ್ಳಿ: ಪಂಚಾಯಿತಿಗೆ ಲಭ್ಯವಾಗುತ್ತಿರುವ ಹೆಚ್ಚಿನ ಆದಾಯವನ್ನು ಗ್ರಾಮಗಳ ಸಮಗ್ರ ಅಭಿವೃದ್ಧಿಗೆ ಬಳಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ. ಎಚ್. ಮುನಿಯಪ್ಪ ಹೇಳಿದರು.

ರಾಜ್ಯದ ಶ್ರೀಮಂತ ಗ್ರಾಮ ಪಂಚಾಯಿತಿಗಳಲ್ಲಿ ಒಂದಾಗಿರುವ ಅಣ್ಣೇಶ್ವರ ಗ್ರಾಮ ಪಂಚಾಯಿತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದರು. ಪಂಚಾಯಿತಿ ವ್ಯಾಪ್ತಿಯಲ್ಲಿ ವಿಮಾನ ನಿಲ್ದಾಣ ಇರುವುದರಿಂದ ಪಂಚಾಯಿತಿಗೆ ಉತ್ತಮ ಆದಾಯ ಬರುತ್ತಿದೆ. ಆದರೆ ಸ್ಥಳೀಯವಾಗಿ ಭೂಮಿ ಕಳೆದುಕೊಂಡವರ ಬದುಕು ಮೇಲೇಳುವಂತೆ ವಿಶೇಷ ಯೋಜನೆಗಳನ್ನು ರೂಪಿಸಬೇಕು. ವಸತಿ, ಉದ್ಯೋಗಾವಕಾಶ, ಸ್ವಯಂ ಉದ್ಯೋಗ ಹಾಗೂ ಸಣ್ಣ ವ್ಯವಹಾರಗಳಿಗೆ ಉತ್ತೇಜನ ನೀಡುವ ಮೂಲಕ ಅವರ ಜೀವನಮಟ್ಟವನ್ನು ಸುಧಾರಿಸಬೇಕು ಎಂದರು.

ಅನುದಾನ ಬಳಕೆಯಲ್ಲಿ ಕುಲಂಕುಶ ಪರಿಶೀಲನೆ ನಡೆಸಿ, ಜನತೆಗೆ ನಿಜವಾದ ಪ್ರಯೋಜನ ತರುವ ಯೋಜನೆಗಳನ್ನು ಜಾರಿಗೊಳಿಸುವಂತೆ ಪಂಚಾಯಿತಿ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಸೂಚಿಸಿದರು.



# ಮನ್ ಕಿ ಬಾತ್‌ನಲ್ಲಿ ನಂಜನಗೂಡಿನ ರಸಬಾಳೆ, ಮೈಸೂರು ವೀಳ್ಯದೆಲೆ ಪ್ರಸ್ತಾಪ

**ಸಂಸದ ಯದುವೀರ್ ಸಂತಸ**

ಮೈಸೂರು: ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಮನ್ ಕಿ ಬಾತ್‌ನಲ್ಲಿ ಮೈಸೂರಿನ ವಸ್ತುಗಳ ಕುರಿತು ಪ್ರಸ್ತಾಪಿಸಿರುವುದು ನಿಜಕ್ಕೂ ಸಂತಸ ತಂದಿದೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದ್ದಾರೆ.

ಭಾನುವಾರ ಪ್ರಸಾರವಾದ "ಮನದ ಮಾತು" ಆಲಿಸಿದ ನಂತರ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, ನಮ್ಮ ಪ್ರದೇಶದ ಅತ್ಯಂತ ಪ್ರಿಯವಾದ ಭೌಗೋಳಿಕ ಸೂಚಕ (ಜಿಐ) ಉತ್ಪನ್ನಗಳಾದ ನಂಜನಗೂಡು ಬಾಳೆಹಣ್ಣು ಮತ್ತು ಮೈಸೂರು ವೀಳ್ಯದೆಲೆ ಬಗ್ಗೆ ಪ್ರಸ್ತಾಪಿಸಿದ್ದನ್ನು ನಾನು ಸ್ವಾಗತಿಸುತ್ತೇನೆ. ಇದಕ್ಕಾಗಿ ಪ್ರಧಾನಮಂತ್ರಿಗಳಿಗೆ ಧನ್ಯವಾದ ಸಲ್ಲಿಸುತ್ತೇನೆ ಎಂದಿದ್ದಾರೆ. ರಾಷ್ಟ್ರೀಯ ಮಟ್ಟದಲ್ಲಿ ಮನ್ನಣೆ ಪಡೆದ ಮೈಸೂರು ಮತ್ತು ಸುತ್ತಮುತ್ತಲಿನ ಕೃಷಿ ಸಮುದಾಯಗಳಿಗೆ ಅಪಾರ ಹೆಮ್ಮೆಯ ವಿಷಯವಾಗಿದೆ. ಈ ವಿಶಿಷ್ಟ ಕೃಷಿ ಉತ್ಪನ್ನಗಳಿಗೆ ಹೆಚ್ಚುತ್ತಿರುವ ಅಂತಾರಾಷ್ಟ್ರೀಯ ಬೇಡಿಕೆಯು ರೈತರಿಗೆ ಉತ್ತಮ ಬೆಲೆ ದೊರೆಯುವುದಲ್ಲದೇ, ವಿಶಿಷ್ಟ ಗುಣಮಟ್ಟ ಮತ್ತು ಸಾಂಪ್ರದಾಯಿಕ ಕೃಷಿ ಪದ್ಧತಿಗಳನ್ನು ಸಂರಕ್ಷಿಸುವ ಪ್ರಾಮುಖ್ಯತೆಯನ್ನು ಬಲಪಡಿಸುತ್ತದೆ.



ವಿಶಿಷ್ಟ ಮಣ್ಣಿನ ಸಂಯೋಜನೆಯಿಂದಾಗಿ ವಿಶಿಷ್ಟವಾದ ಸುವಾಸನೆ ಮತ್ತು ರುಚಿಗೆ ಹೆಸರುವಾಸಿಯಾದ ನಂಜನಗೂಡು ಬಾಳೆಹಣ್ಣು ಮತ್ತು ಮೌಲ್ಯಯುತವಾದ ಮೈಸೂರು ವೀಳ್ಯದೆಲೆಗಳು ಹಲವಾರು ಪೀಳಿಗೆಯ ಕೃಷಿ ಪರಂಪರೆಯನ್ನು ಪ್ರತಿನಿಧಿಸುತ್ತವೆ. ಇದರ ರಫ್ತು ವ್ಯಾಪ್ತಿ ವಿಸ್ತರಿಸುವುದರಿಂದ ರೈತರ ಆದಾಯ ಹೆಚ್ಚಾಗುತ್ತದೆ, ಹೊಸ ಮೌಲ್ಯ ಸೃಷ್ಟಿಸುತ್ತದೆ ಮತ್ತು ಯುವ ಕೃಷಿಕರು ಜಿಐ ಆಧಾರಿತ ಕೃಷಿಯಲ್ಲಿ ಹೂಡಿಕೆ ಮಾಡಲು ಅವಕಾಶ ಕಲ್ಪಿಸುತ್ತದೆ. ಸ್ಥಳೀಯ ಜೀವವೈವಿಧ್ಯ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ರಕ್ಷಿಸುವಾಗ ಭಾರತದ ಕೃಷಿ-ಕ್ಷೇತ್ರವನ್ನು ಇನ್ನಷ್ಟು ಬಲಪಡಿಸುವ ವಿಶಾಲ ದೃಷ್ಟಿಕೋನದೊಂದಿಗೆ ಕೆಲವು ಯೋಜನೆ ರೂಪಿಸಲಾಗುತ್ತಿದೆ. ರೈತರು, ಸಹಕಾರಿಗಳು ಮತ್ತು ರಫ್ತುದಾರರಿಗೆ ಮಾರುಕಟ್ಟೆ ಸಂಪರ್ಕಗಳು, ಲಾಜಿಸ್ಟಿಕ್ಸ್, ಬ್ರ್ಯಾಂಡಿಂಗ್ ಉಪಕ್ರಮಗಳು ಮತ್ತು ಈ ಅವಕಾಶವನ್ನು ಸಂಪೂರ್ಣವಾಗಿ ಬಳಸಿಕೊಳ್ಳಲು ಸಾಂಸ್ಥಿಕ ಬೆಂಬಲವನ್ನು ಸುಗಮಗೊಳಿಸಲು ನಮ್ಮ ಕೇಂದ್ರ ಸರ್ಕಾರ ಎಲ್ಲ ಪ್ರಯತ್ನಗಳನ್ನು ಮಾಡುತ್ತದೆ ಎಂದಿದ್ದಾರೆ.

ರೈತ ಉತ್ಪಾದಕ ಸಂಸ್ಥೆಗಳು, ರಫ್ತುದಾರರು, ಸಂಶೋಧನಾ ಸಂಸ್ಥೆಗಳು ಮತ್ತು ರಾಜ್ಯ ಸಂಸ್ಥೆಗಳು ಸೇರಿದಂತೆ ಪಾಲುದಾರರು ಈ ಜಿಐ ಖ್ಯಾತಿಯನ್ನು ಎತ್ತಿಹಿಡಿಯುವ ಮಾನದಂಡಗಳನ್ನು ಕಾಯ್ದುಕೊಳ್ಳುವಾಗ ಉತ್ಪಾದನೆಯನ್ನು ಸುಸ್ಥಿರವಾಗಿ ಅಳೆಯಲು ಸಹಯೋಗದಿಂದ ಕೆಲಸ ಮಾಡಬೇಕು. ಈ ನಿಟ್ಟಿನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಸಾಕಷ್ಟು ಯೋಜನೆ ರೂಪಿಸಿದ್ದಾರೆ. ಇವುಗಳನ್ನೇ ಮನ್ ಕಿ ಬಾತ್‌ನಲ್ಲಿ ಪ್ರಸ್ತಾಪಿಸಿದ್ದಾರೆ.

ಜಿಐ ಸ್ವತ್ತುಗಳನ್ನು ಗ್ರಾಮೀಣ ಸಮೃದ್ಧಿಯ ಎಂಜಿನ್‌ಗಳಾಗಿ ಪರಿವರ್ತಿಸಲು ಬದ್ಧವಾಗಿದೆ, ಜಾಗತಿಕ ಗುರುತಿಸುವಿಕೆಯ ಪ್ರಯೋಜನಗಳು ನಮ್ಮ ರೈತರಿಗೆ ಸ್ಪಷ್ಟವಾದ ಆರ್ಥಿಕ ಸಬಲೀಕರಣವಾಗಿ ಪರಿವರ್ತಿಸುವುದನ್ನು ಖಚಿತಪಡಿಸುತ್ತದೆ. ಈ ನಿಟ್ಟಿನಲ್ಲಿ ನಾವೆಲ್ಲರೂ ಒಟ್ಟಾಗಿ ದುಡಿಯೋಣ, ನರೇಂದ್ರ ಮೋದಿ ಅವರ ಕಲ್ಪನೆಯನ್ನು ಸಾಕಾರಗೊಳಿಸೋಣ ಎಂದು ಆಶಿಸಿದ್ದಾರೆ.

**ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ರಾಮಪ್ಪ ಹೇಳಿಕೆ**

# ಜಾತಿ ರಹಿತ ಸಮ ಸಮಾಜ ನಿರ್ಮಾಣ ಮಹಾನೀಯರ ಆಶಯ

ಮೈಸೂರು: ಜಾತಿ ರಹಿತ ಸಮ ಸಮಾಜ ನಿರ್ಮಾಣ ಮಹಾನ್ ವ್ಯಕ್ತಿಗಳ ಆಶಯವಾಗಿದ್ದು, ಅವರ ಜಯಂತಿಗಳ ಆಚರಣೆಯ ಮೂಲಕ ಸಮಾಜಕ್ಕೆ ತಿಳಿಸಲಾಗುತ್ತಿದೆ ಎಂದು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ರಾಮಪ್ಪ ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮೈಸೂರು ಮಹಾನಗರ ಪಾಲಿಕೆ ಹಾಗೂ ಸಂತ ಸೇವಾಲಾಲ್ ಜಯಂತೋತ್ಸವ ಸಮಿತಿ ವತಿಯಿಂದ ಕರ್ನಾಟಕ ಕಲಾಮಂದಿರದ ಆವರಣದಲ್ಲಿರುವ ಕಿರುರಂಗ ಮಂದಿರದಲ್ಲಿ ಆಯೋಜಿಸಲಾಗಿದ್ದ ಸಂತ ಸೇವಾ ಲಾಲ್ ಜಯಂತಿಯನ್ನು ಉದ್ಘಾಟಿಸಿ ಮಾತನಾಡಿದರು.

ಆಯಾ ಜಾತಿಗಳು ಮತ್ತು ಸಂಘಟನೆಗಳು ಗಟ್ಟಿಯಾಗಲು ಆರ್ಥಿಕವಾಗಿ, ಸಾಮಾಜಿಕವಾಗಿ ಹಾಗೂ ರಾಜಕೀಯವಾಗಿ ಬೆಳೆಯಲು ಜಯಂತಿಗಳನ್ನು ಆಚರಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅವಕಾಶವನ್ನು ಕಲ್ಪಿಸಿ ಕೊಟ್ಟಿರುವುದು ನಮ್ಮೆಲ್ಲರ ಸೌಭಾಗ್ಯವಾಗಿದೆ ಎಂದು ತಿಳಿಸಿದರು.

ಸಂಘಟನೆಗಳು ಉತ್ತಮ ಸಮಾಜ ನಿರ್ಮಾಣ



ಮಾಡಲು ಮಹಾನ್ ವ್ಯಕ್ತಿಗಳ ಜೀವನದ ತತ್ವ ಮತ್ತು ಆದರ್ಶಗಳ ಬಗ್ಗೆ ಜಾಗೃತಿ ಮೂಡಿಸುವಂತಹ ಕೆಲಸಕ್ಕೆ ಮುಂದಾಗಬೇಕು. ಬಡವರು ಹಾಗೂ ಹಿಂದುಳಿದ ವರ್ಗಗಳ ಸಿಗಬೇಕಾದಂತಹ ಸೌಲಭ್ಯಕ್ಕಾಗಿ ಹೋರಾಟ ನಡೆಸಬೇಕು ಎಂದು ಹೇಳಿದರು.

ವಿಧಾನಸಭಾ ಪರಿಷತ್ತಿನ ಸದಸ್ಯ ಸಿ.ಎನ್. ಮಂಜೇಗೌಡ ಮಾತನಾಡಿ ಸಂತ ಸೇವಾಲಾಲ್ ಸಾಮಾಜಿಕ, ಧಾರ್ಮಿಕ ಸುಧಾರಕ ರಾಗಿದ್ದರು. ಇವರನ್ನು ಗುರು ಬಂಜಾರ್ ಸಮುದಾಯದ ಆಧ್ಯಾತ್ಮಿಕ ಗುರುಗಳು ಎಂದು ಕರೆಯಲಾಗುತ್ತದೆ. ಸಂತ ಸೇವಾಲಾಲ್ ಅವರು ಪಶು ಸಂಗೋಪನೆಯಲ್ಲಿ ತಮ್ಮ ಕಾರ್ಯವನ್ನು ತೊಡಗಿಸಿಕೊಂಡಿದ್ದರು. ಇವರ ಹೆಸರಿನಲ್ಲಿ ಹಲವು ದೇವಾಲಯಗಳು ನಿರ್ಮಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿನೋದ್ ಆರ್ ಬಿ ಅವರು ಬರೆದಿರುವ ಶ್ರೀ ಸೇವಾ ಚರಿತಾಮೃತ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸುದರ್ಶನ್, ಹಾವೇರಿ ಜಿಲ್ಲೆಯ ಸವಣೂರು ತಾಲೂಕಿನ ಕೃಷ್ಣಾಪುರದ ಬಂಜಾರ ಗುರುಪೀಠದ ಕುಮಾರ್ ಮಹಾರಾಜ್, ವಿಜಯನಗರ ಕೊಟ್ಟೂರು ತಾಲೂಕಿನ ಶಕ್ತಿ ಪೀಠದ ಶಿವಪ್ರಕಾಶ್ ಮಹಾರಾಜ್, ಬಂಜಾರ ಸೇವಾ ಸಂಘದ ಅಧ್ಯಕ್ಷ ಎಂ.ಸುಂದರ್, ಉಪಾಧ್ಯಕ್ಷ ತೇಜು ನಾಯಕ, ಕಾರ್ಯದರ್ಶಿ ಎಂ. ಅನಿಲ್, ಸಂಘದ ಜಂಟಿ ಕಾರ್ಯದರ್ಶಿ ಪಿ.ಜಯ ರಾಮ್ ಹಾಗೂ ಕಾವೇರಿ ಬಾಯ್ ಉಪಸ್ಥಿತರಿದ್ದರು.

# ಸಫಾರಿ ಆರಂಭಕ್ಕೆ ರೈತಸಂಘ ತೀವ್ರ ವಿರೋಧ

## ಆದೇಶ ಹಿಂಪಡೆಯುವಂತೆ ಗ್ರಾಮಪಂಚಾಯತಿಗಳಿಗೆ ಮನವಿ ಸಲ್ಲಿಕೆ

**ಗುಂಡ್ಲುಪೇಟೆ:** ಕಳೆದ ಮೂರು ತಿಂಗಳುಗಳಿಂದ ಸ್ಥಗಿತವಾಗಿದ್ದ ಸಫಾರಿ ಆರಂಭಕ್ಕೆ ಸರ್ಕಾರ ಹಸಿರು ನಿಶಾನೆ ತೋರಿದ ಬೆನ್ನಲ್ಲೇ ತೀವ್ರ ವಿರೋಧ ವ್ಯಕ್ತಪಡಿಸಿರುವ ಸಾಮೂಹಿಕ ನಾಯಕತ್ವ ರೈತ ಸಂಘ ಸದಸ್ಯರು ಸಫಾರಿ ಆರಂಭ ಆದೇಶವನ್ನ ಹಿಂಪಡೆಯುವಂತೆ ಒತ್ತಾಯಿಸಿ ಗ್ರಾಮ ಪಂಚಾಯತಿ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದ್ದಾರೆ.

ಸಫಾರಿಯ ಸಾಧಕ ಬಾದಕಗಳ ತುಲನೆ ಮಾಡಿರುವ ಪ್ರಜ್ಞಾವಂತ ರೈತರು ಸ್ಥಳೀಯವಾಗಿ ಯಾರು ಸಹ ಸಫಾರಿಗೆ ಹೋಗುವುದಿಲ್ಲ, ವನ್ಯಜೀವಿಗಳು ಹಾಗೂ ಕಾಡಿನ ಜೊತೆಗೆ ಅವಿನಾಭಾವ ಸಂಬಂಧ ಹೊಂದಿರುವ ರೈತರು ಮತ್ತು ಗ್ರಾಮಸ್ಥರಿಗೆ ಉಪದ್ರ ನೀಡುವ ಕೆಲಸವನ್ನ ವಿಲಾಸಿ ಜೀವನಕ್ಕೆ ಜೋತು ಬಿದ್ದಿರುವವರು ನಡೆಸಿಕೊಂಡು ಬಂದ ಕಾರಣದಿಂದಲೇ ವನ್ಯಜೀವಿ ಮಾನವ ಸಂಘರ್ಷ ಉಲ್ಬಣವಾಗಿ ಸಾವು ನೋವುಗಳು ಸಂಭವಿಸಿವೆ ಉದ್ದಿಮೆದಾರರ ಹಾಗೂ ರೆಸಾರ್ಟ್ ಮಾಲೀಕರ



ಒತ್ತಾಯಕ್ಕೆ ಮಣಿದ ಸರ್ಕಾರ ಅನ್ನದಾತನ ಹಿತ ಮರೆತಿರುವುದು ಸರಿಯಲ್ಲ ಎಂದು ಬೇಸರ ಹೊರಹಾಕಿದೆ.

**ಹಣ ಮಾಡುವ ದಂಧೆಗೆ ಮೂಕಜೀವಿಗಳ ಬಲಿ**

ಈಗಾಗಲೇ ಬಂಡೀಪುರವನ್ನ ಹಣ ಮುದ್ರಿತ ಯಂತ್ರವನ್ನಾಗಿರಿಸಿರುವ ಬಂಡವಾಳ ಶಾಹಿಗಳು ಕಾಡಿನೊಳಗೆ ಅಕ್ರಮ ಅನಧಿಕೃತ ರೇಸಾರ್ಟ್ಸ್ , ಹೋಮ್ ಸ್ಟೇಗಳನ್ನ ನಿರ್ಮಿಸಿ ಹಚ್ಚಹಸಿರಿನ ಅರಣ್ಯವನ್ನ ಮೋಜು ಮಸ್ತಿಯ ತಾಣ ಎಂದು ಸಾಮಾಜಿಕ ಜಾಲತಾಣದಲ್ಲಿ ಹಾಗೂ ಜಾಹಿರಾತುಗಳಲ್ಲಿ ಸಾರುವ ಮೂಲಕ ಒಂದಷ್ಟು ಮಂದಿ ತಮ್ಮತ್ತ ಮುಖಮಾಡುವಂತಹ ವಾತಾವರಣವನ್ನ ಸೃಷ್ಟಿಸಿಕೊಂಡಿ ದ್ದಾರೆ, ಇತ್ತ ವನ್ಯಜೀವಿಗಳು ಆವಾಸ ಸ್ಥಾನ ತೊರೆಯಬೇಕಾದ ಸಂದಿಜ್ಞ ಸ್ಥಿತಿ ಬಂದೊದಗಿದೆ.

## ಅರಣ್ಯದೊಳಗೆ ಶಬ್ಧಮಾಲಿನ್ಯ


ಕಾಡಿನೊಳಗೆ ಸ್ವಚ್ಛಂದ ಜೀವನ ನಡೆಸುತ್ತಿರುವ ಪ್ರಾಣಿಗಳ ಸಹಜತೆಗೆ ವಾಹನಗಳ ಕರ್ಕಶ ಶಬ್ದ ಅಡ್ಡಿಯಾಗುತ್ತಿದೆ , ಒಮ್ಮೆಲೇ ಹತ್ತಾರು ವಾಹನಗಳು ಸಂಚರಿಸುವುದರಿಂದ ಗಾಬರಿಗೊಳಗಾಗುವ ಪ್ರಾಣಿಗಳು ದಿಕ್ಕಾಪಾಲಾಗಿ ಮೂಲಸ್ಥಾನ ತೊರೆದು ಜನವಸತಿ ಪ್ರದೇಶಗಳಿಗೆ ನುಗ್ಗುತ್ತಿವೆ. ಪ್ರಕೃತಿ ದತ್ತವಾಗಿ ಸಂತುಷ್ಟವಾಗಿ ತನ್ನ ವಿಸ್ತಾರತೆ ಚಾಚಿರುವ ಅರಣ್ಯ ಸಂಪತ್ತು ಹಾಗೂ ವನ್ಯಜೀವಿಗಳು ಮಾನವನ ಹಸ್ತಕ್ಷೇಪದಿಂದ ನೆಲೆ ಕಳೆದುಕೊಳ್ಳುತ್ತಿವೆ, ಹಸಿರು ಕಾನನದೊಟ್ಟಿಗೆ ಸಮತೋಲಿತವಾಗಿರಬೇಕಾದ ಪ್ರದೇಶ ಅಸಮತೋಲನದಿಂದ ಕೂಡಿರುವುದಕ್ಕೆ ಪ್ರವಾಸೋದ್ಯಮ ಹೆಸರಿನಡಿ ಶುರುವಾಗುವ ಸಫಾರಿಯೇ ಪ್ರಮುಖ ಕಾರಣವಾಗಿದೆ. ಮುಂದಿನ ಪೀಳಿಗೆಗೆ ಅರಣ್ಯ ಸಂಪತ್ತು ವನ್ಯಜೀವಿಗಳ ರಕ್ಷಣೆ ನಮ್ಮೆಲ್ಲರ ಹೊಣೆಯಾಗಬೇಕು ಎಂದರು

## ಅರಣ್ಯ ಇಲಾಖೆಯಲ್ಲಿ ಭ್ರಷ್ಟ ಅಧಿಕಾರಿಗಳದೆ ದರ್ಬಾರ್

ಸಫಾರಿ ಸ್ಥಗಿತವಾದ ವೇಳೆ ನೀರಿನಿಂದ ಹೊರಬಿದ್ದ ಮೀನಿನಂತೆ ವಿಲವಿಲ ಒದ್ದಾಡಿದ್ದು ಇಲಾಖೆಯಲ್ಲಿನ ಭ್ರಷ್ಟ ಅಧಿಕಾರಿಗಳೇ ಹೊರತು ರೈತರಲ್ಲ, ಸ್ಥಳೀಯ ಕೆಲವು ಯುವಕರಿಗೆ ಹಣದ ಆಮಿಷವೊಡ್ಡಿ ಧರಣಿ ನಿರತ ರೈತರ ಮೇಲೆ ಹಲ್ಲೆ ನಡೆಸಲು ಎಲ್ಲಾ ಸಿದ್ಧತೆ ನಡೆಸಿ ಪ್ರೇರೇಪಣೆ ನೀಡಿದ ಅಧಿಕಾರಿಗಳು ಸಫಾರಿಯಿಂದ ಕಿಸೆಗಿಳಿಯುವ ಲಕ್ಷ ಲಕ್ಷ ಹಣವು ಮೂರು ತಿಂಗಳುಗಳಲ್ಲಿ ಶೂನ್ಯವಾದ ಹಿನ್ನೆಲೆ ಹಿಂಬಾಗಿಲ ಪ್ರಯತ್ನಕ್ಕೆ ಮುಂದಾಗಿ ಅನ್ನದಾತರನ್ನೇ ಮುಖ್ಯ ಗುರಿಯಾಗಿಸಿಕೊಂಡಿದ್ದರೂ ಎಂಬುದು ಸರ್ಕಾರಕ್ಕೆ ತಿಳಿಯದಿರುವುದು ಶೋಚನೀಯ ಸಂಗತಿಯಾಗಿದೆ, ಭ್ರಷ್ಟ ಧಗಕೋರರ ಶೂಲಕ್ಕೆ ಸಿಲುಕಿ ನಲುಗುತ್ತಿರುವ ಬಂಡೀಪುರವನ್ನ ಉಳಿಸಲು ನಿಶ್ಚಲ ಹೋರಾಟಕ್ಕೆ ರೈತ ಸಂಘ ಮುಂದಾಗಲಿದೆ, ಹಾಗೆಯೇ ರೈತರ ವಿರುದ್ಧ ಪಿತೂರಿ ನಡೆಸಿ ಹಲ್ಲೆಗೆ ಪ್ರಚೋದನೆ ನೀಡಿದ ಕುರಿತು ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

## ಮನ್ವಂತರ ಸಂಸ್ಥೆ ಹೃದಯವಂತಿಕೆ, ಸಹಬಾಳ್ವೆಯ ಬೀಜ ಬಿತ್ತುತ್ತಿದೆ: ಕೆ.ವಿ.ಪ್ರಭಾಕರ್

# ಜಾತೀಯತೆ, ಮೂಢನಂಬಿಕೆ ವಿಜೃಂಭಿಸಬಾರದು



**ಕೋಲಾರ:** ಚಂದ್ರ ಲೋಕಕ್ಕೆ ಕಾಲಿಟ್ಟರೂ, ಕಾಲ ಬುಡದಲ್ಲೇ ಮರ್ಯಾದಾ ಹತ್ಯೆ ನಡೆಯುತ್ತಿರುವುದು ಬೇಸರದ ಸಂಗತಿ. ಜಾತೀಯತೆ, ಮೂಢನಂಬಿಕೆ ವಿಜೃಂಭಿಸುತ್ತಲೇ ಇದೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರದ ಕೆ.ವಿ.ಪ್ರಭಾಕರ್ ಬೇಸರ ವ್ಯಕ್ತಪಡಿಸಿದರು.

ಮನ್ವಂತರ ಪ್ರಕಾಶನ ಮತ್ತು ತರಬೇತಿ ಸಂಸ್ಥೆ ಆಯೋಜಿಸಿದ್ದ ನಾನಾ ಶ್ರಮಿಕ ಕ್ಷೇತ್ರಗಳ ಸಾಧಕರ ಸನ್ಮಾನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಮನ್ವಂತರ ಮಾಧ್ಯಮ ಕೌಶಲ್ಯಾಭಿವೃದ್ಧಿ ತರಬೇತಿ ಸಂಸ್ಥೆ ಕಳೆದ ಏಳು ವರ್ಷಗಳಿಂದ "ಸಹೃದಯತೆ, ಸದ್ವಿಚಾರ, ಸಹಬಾಳ್ವೆ ಎನ್ನುವ ಮೂರು ಮಂತ್ರಗಳನ್ನು ಪಾಲಿಸುತ್ತಾ, ಸಮಾಜದಲ್ಲಿ ಹೃದಯವಂತಿಕೆಯ ಬೀಜಗಳನ್ನು ಬಿತ್ತುತ್ತಿದೆ. ತಂತ್ರಜ್ಞಾನದ ಬೆಳವಣಿಗೆಯಿಂದ ಮನುಷ್ಯ ಜಗತ್ತಿನಲ್ಲಿ ಒಂದು ಹೊಸ ಮನ್ವಂತರವೇ ಆರಂಭವಾಗಿದೆ. ಮನೆಗಳ ಒಳಗೂ ಮನುಷ್ಯ ಸಂಬಂಧ, ಮಾನವೀಯ ಬೆಸುಗೆ ಕಾಣೆಯಾಗುತ್ತಿರುವ ಹೊತ್ತಲ್ಲಿ ಕೋಲಾರದ ಮಣ್ಣಿನಲ್ಲಿ ಮನ್ವಂತರ ಸಂಸ್ಥೆ ಮಾನವೀಯ ಬೆಸುಗೆಗಳನ್ನು ಗಟ್ಟಿಗೊಳಿಸುವ ಕೆಲಸ ಮಾಡುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮನ್ವಂತರ ಸಂಸ್ಥೆ ದೊಡ್ಡ ದೊಡ್ಡ ಉದ್ಯಮಿಗಳನ್ನು, ಐಎಎಸ್, ಐಪಿಎಸ್ ಅಧಿಕಾರಿಗಳು, ಅಧಿಕಾರಸ್ಥರು, ಹಣವಂತರನ್ನು ಸನ್ಮಾನಿಸಿ ದೊಡ್ಡ ಹೆಸರನ್ನು ಸಂಪಾದಿಸಬಹುದಿತ್ತು. ಆದರೆ, ಪಾನಿಪೂರಿ ಮಾಡಿ ವಿಶ್ವಮಟ್ಟದಲ್ಲಿ ಗುರುತಿಸಿಕೊಂಡ ರಮೇಶ್ ಅವರನ್ನು ಗುರುತಿಸಿದೆ. ನಾವು ಬೆಳಗ್ಗೆ ಎದ್ದು ಮನೆಯಿಂದ ಹೊರಗೆ ಕಾಲಿಡುವ ಮೊದಲೇ ಬೀದಿಯನ್ನು ಗುಡಿಸಿ ಸ್ವಚ್ಛವಾಗಿಡುವ ಪೌರ ಕಾರ್ಮಿಕ ಸಮುದಾಯದ ಕೋಕಿಲಾ ಅವರನ್ನು ಗುರುತಿಸಿದೆ ಎಂದರು.

ಕೋಲಾರ ಅಂದರೆ ಸೌಹಾರ್ದತೆಯ ಮಂಟಪ ಇದ್ದ ಹಾಗೆ. ಎಲ್ಲಾ ಧರ್ಮದವರೂ ಒಟ್ಟಾಗಿ ಬೆಸೆದುಕೊಂಡಿರುವ ಶ್ರಮಿಕ ಸಮಾಜ. ಈ ಕೋಲಾರದ ಮಣ್ಣಿನ ಸೌಹಾರ್ದತೆ ಮತ್ತು ಸಹಬಾಳ್ವೆಗೆ ನೀರು ಗೊಬ್ಬರ ಹಾಕುತ್ತಿರುವ ಮುಬಾರಕ್ ಬಾಗಬಾನ್ ಅವರನ್ನು ಗುರುತಿಸಿದೆ. ಎಲ್ಲರೂ ಸಿನಿಮಾ ಮತ್ತು ಸೀರಿಯಲ್ ನಟ ನಟಿಯರನ್ನು ಹುಡುಕಿಕೊಂಡು ಓಡುತ್ತಿರುವ ಹೊತ್ತಿನಲ್ಲಿ ಮನ್ವಂತರ ಸಂಸ್ಥೆ, ಸಾಂಪ್ರದಾಯಿಕ ಕಲೆ, ಲಾವಣಿ ಹಾಡುವ ಅರಳು ಮಲ್ಲಿಗೆ ಪ್ರಭುದೇವರನ್ನು, ನಾದಸ್ವರ ಕಲಾವಿದ ವಿದ್ವಾನ್ ಬಿ.ಎನ್.ಗೋಪಾಲ್, ಜಾನಪದ ಕ್ಷೇತ್ರದ ಲಲಿತಮ್ಮ, ಕ್ರೀಡಾಪಟು ಮಹಾದೇವಿ, ನಿವೃತ್ತ ಶಿಕ್ಷಕಿ ಕುಮುದಾ, ವಕೀಲರೂ ಹಾಗೂ ಹಿರಿಯ ಕ್ರಿಕೆಟ್ ಪಟುಗಳಾದ ಗ್ರಾಮೀಣ ಪ್ರತಿಭೆ ಬಿ.ಸಿ.ಪರಮೇಶ್ ಅವರನ್ನು ಗುರುತಿಸಿ ಗೌರವಿಸುತ್ತಿದೆ. ಮಾತ್ರವಲ್ಲದೆ ಬಹುಭಾಷಿಕ ನೆಲದಲ್ಲಿ ಕನ್ನಡಕ್ಕಾಗಿ ಶ್ರಮಿಸಿದ ಬಿ.ಎನ್.ಮೋಹನ್ ಕುಮಾರ್ ಅವರಿಗೆ ಮರಣೋತ್ತರವಾಗಿ ಪುರಸ್ಕಾರ ನೀಡುತ್ತಿರುವುದಕ್ಕೆ ವಿಶೇಶವಾಗಿ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

ಇವರೆಲ್ಲರ ಕ್ಷೇತ್ರಗಳೂ ಬೇರೆ ಬೇರೆ ಇರಬಹುದು. ಆದರೆ, ಎಲ್ಲರನ್ನೂ ನಾನು "ಸಾಮಾಜಿಕ ಶುಶ್ರೂಶಕರು. ಸಮಾಜದ ಆರೋಗ್ಯಕ್ಕಾಗಿ ಶ್ರಮಿಸುತ್ತಿರುವ ಖಂಭುಚಿಟ ಆಂಭಿಣಂಥಿ ಎಂದು ಕರೆಯಲು ಇಚ್ಚಿಸುತ್ತೇನೆ. ಇಂತಹ ಸಹೃದಯರನ್ನು ಸನ್ಮಾನಿಸುವ ಅರ್ಥಪೂರ್ಣ ಕಾರ್ಯಕ್ರಮಕ್ಕೆ ಬಂದಿರುವುದು ನನಗೆ ಬಹಳ ಖುಷಿ ಕೊಟ್ಟಿದೆ ಎಂದರು.

ನಮ್ಮ ಜಿಲ್ಲೆಯ ಮಣ್ಣಿನಲ್ಲಿ ಮನ್ವಂತರ ಬಿತ್ತುತ್ತಿರುವ ಈ ಹೃದಯವಂತಿಕೆ ಮತ್ತು ಸೌಹಾರ್ದದ ಬೀಜಗಳು ಬೆಳೆದು ಹೆಮ್ಮರವಾಗಿ "ಸಹಬಾಳ್ವೆ" ಎನ್ನುವ ನೆರಳನ್ನು ಸದಾ ಕಾಲ ನೀಡುತ್ತಿರಲಿ ಎಂದು ಹಾರೈಸುತ್ತೇನೆ. ಉಳಿದಂತೆ, ಮನ್ವಂತರ ಸಂಸ್ಥೆ ಕೌಶಲ್ಯಾಭಿವೃದ್ಧಿ ಮತ್ತು ತರಬೇತಿ ಮೂಲಕ ಗ್ರಾಮೀಣ ಭಾಗದ ಯುವಜನರ ಬಾಳಿಗೆ ಆಸರೆ ಆಗುತ್ತಿದೆ. ನನ್ನ ಸಹಕಾರ ಸದಾ ಈ ಸಂಸ್ಥೆಯ ಜೊತೆಗೆ ಇರುತ್ತದೆ ಎಂದು ಹೇಳಲು ಬಯಸುತ್ತೇನೆ.

ಕೇವಲ ಪಠ್ಯಪುಸ್ತಕದ ಜ್ಞಾನವಲ್ಲದೆ, ಪ್ರಾಯೋಗಿಕವಾಗಿ ಕೆಲಸ ಕಲಿಯಲು ಹೆಚ್ಚಿನ ಆದ್ಯತೆ ಕೊಡುವ ಅಗತ್ಯವಿದೆ. ಈ ಕೆಲಸವನ್ನು ಮನ್ವಂತರ ಮಾಡುತ್ತಿದೆ. ಯುವ ಸಮುದಾಯದಲ್ಲಿ ಕೌಶಲ್ಯದ ತರಬೇತಿ ಮೂಲಕ ಆತ್ಮವಿಶ್ವಾಸವನ್ನು ತುಂಬುವುದು ಬಹಳ ಅರ್ಥಪೂರ್ಣ ಕೆಲಸ. ಏಕ ಕಾಲಕ್ಕೆ ಹತ್ತಾರು ಮಂದಿಯ ವೈಯುಕ್ತಿಕ ಬದುಕಿಗೆ ಆಸರೆಯಾಗುತ್ತಾ, ಸಮಾಜದ ಆರೋಗ್ಯಕ್ಕೂ ಶ್ರಮಿಸುತ್ತಿರುವ ಮನ್ವಂತರ ಸಂಸ್ಥೆಗೆ ರಾಜ್ಯೋತ್ಸವ ಪ್ರಶಸ್ತಿ ಬರಬೇಕು ಎನ್ನುವುದು ನನ್ನ ವೈಯುಕ್ತಿಕ ಅಭಿಲಾ? ಎಂದರು.

ಮನ್ವಂತರ ಸಂಸ್ಥೆಯ ಅನಂತರಾಮು ಹಾಗೂ ಬಂಗಾರಪೇಟೆ ಪತ್ರಕರ್ತರ ಸಂಘದ ಪದಾಧಿಕಾರಿಗಳು ವೇದಿಕೆಯಲ್ಲಿ ಉಪಸ್ಥಿತರಿದ್ದರು.



### ಪರಿಹಾರ ನೀಡಿದರೆ ಮಾತ್ರ ನ್ಯಾಯಾಲಯದ ತಡೆಯಾಜ್ಞೆ ತೆರವು

# ನರಸಾಪುರ ದ್ವಿಪಥ ರಸ್ತೆ ಡಾಂಬರೀಕರಣಕ್ಕೆ ತಕರಾರು

**ಕೋಲಾರ:** ತಾಲ್ಲೂಕಿನ ನರಸಾಪುರದ ದ್ವಿಪಥ ರಸ್ತೆಯಲ್ಲಿ ಡಾಂಬರೀಕರಣಕ್ಕೆ ಕಾನೂನುಬದ್ಧವಾಗಿ ನೋಟಿಸ್ ನೀಡಿ ಪರಿಹಾರ ನೀಡಿದರೆ ಮಾತ್ರ ನ್ಯಾಯಾಲಯದ ತಡೆಯಾಜ್ಞೆ ತೆರವುಗೊಳಿಸಿ ಅವಕಾಶ ಮಾಡಿಕೊಡಲಾಗುವುದು ಎಂದು ಎಪಿಎಂಸಿ ಮಾಜಿ ಅಧ್ಯಕ್ಷೆ ಕುರ್ಕಿ ರಾಜೇಶ್ವರಿ ತಿಳಿಸಿದರು.

ಗ್ರಾಮದ ತಮ್ಮ ಜಾಗಕ್ಕೆ ಸಂಬಂಧಿಸಿದ ಸ್ಥಳದಲ್ಲಿ ಡಾಂಬರೀಕರಣಕ್ಕೆ ತಡೆಯಾಜ್ಞೆ ತಂದಿರುವ ಕುರಿತು ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮ ಆಸ್ತಿ ಮೇಲೆ ಆರೋಪ ಮಾಡಿ ಖಾತೆ ರದ್ದು ಮಾಡಿ ಜಾಗ ತೆಗೆದುಕೊಂಡಿದ್ದಾರೆ. ಏಕಾಏಕಿ ಕೆಲಸ ಮಾಡಲು ಮುಂದಾದರು. ಬಲವಂತವಾಗಿ ಜಾಗ ತೆಗೆದುಕೊಳ್ಳಲು ಮುಂದಾದರು. ಇದು ಮನಸ್ಸಿಗೆ ನೋವುಂಟು ಮಾಡಿತು. ನಾವೇ ಒತ್ತುವರಿ ಮಾಡಿಕೊಂಡಿದ್ದೇವೆ ಎಂದರ್ಥ ಬರುತ್ತದೆ. ಅವಮಾನ ಆಗುವಂಥ ವಿಚಾರ. ಹೀಗಾಗಿ, ನಮ್ಮ ಆಸ್ತಿಗೆ ಸಂಬಂಧಿಸಿದಂತೆ ಮಾತ್ರ ತಡೆಯಾಜ್ಞೆ ತಂದಿದ್ದೇನೆ. ನಮ್ಮ ಆಸ್ತಿ ಉಳಿಸಿಕೊಳ್ಳಲು ಈ ಕ್ರಮ ವಹಿಸಿದೆ ಎಂದರು.

ಕೆಲವರು ಎಸಗಿದ ತಪ್ಪಿನಿಂದ ಈ ಸಮಸ್ಯೆ ಸೃಷ್ಟಿಯಾಯಿತು. ಐದಾರು ತಿಂಗಳಿನಿಂದ ರಸ್ತೆ ಕಾರ್ಯ ನಿಂತಿತ್ತು. ಈ ಕಾರಣ ರಸ್ತೆ ನಿರ್ಮಾಣ ಕಾಮಗಾರಿ ವಿಳಂಬವಾಯಿತು. ದೂಳು ನಿರ್ಮಾಣವಾಯಿತು. ಡಾಂಬರೀಕರಣಕ್ಕಾಗಿ ಗ್ರಾಮಸ್ಥರು ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವರೆಗೆ ಹೋಗಬೇಕಾಯಿತು ಎಂದು ಹೇಳಿದರು.


ಕೆಲವರು ನಮ್ಮಿಂದಾಗಿ ಕೆಲಸ ಸ್ಥಗಿತಗೊಂಡಿದೆ ಎಂದು ಭಾವಿಸಿದ್ದರು. ನಾನು ಯಾವತ್ತೂ ರಸ್ತೆ ನಿರ್ಮಾಣಕ್ಕೆ ವಿರೋಧಿ ಅಲ್ಲ.ಈ ವಿಚಾರ ಹೆಚ್ಚಿನವರಿಗೆ ಗೊತ್ತಿದೆ. ಖಾತೆ ರದ್ದು ಮಾಡಿದ್ದಕ್ಕೆ ನ್ಯಾಯಾಲಯ ಮೊರೆಹೋದೆ. ನನಗೆ ನಮ್ಮ ಜನ ಮುಖ್ಯ ಅವರಿಗಾಗಿ ಜಾಗ ಬಿಟ್ಟು ಕೊಡಲು ಸಿದ್ಧ. ಆದರೆ, ಹಾಗೆಯೇ ಕೊಟ್ಟರೆ ತಪ್ಪು ನಮ್ಮದು ಎಂದಾಗುತ್ತದೆ. ಈ ಜಾಗದ ಸಂಬಂಧ ಮತ್ತೆ ನಮ್ಮ ಹೆಸರಿಗೆ ಖಾತೆ ಮಾಡಬೇಕು. ಹೀಗಾಗಿ, ಕಾನೂನಾತ್ಮಕವಾಗಿ ಸರ್ಕಾರದಿಂದ ಪರಿಹಾರ ಪಡೆದು ಜಾಗ ಬಿಟ್ಟು ಕೊಡುತ್ತೇವೆ. ಅದಕ್ಕೆ ತಮ್ಮಂದಿರು ಒಪ್ಪಿದ್ದಾರೆ. ಈ ವಿಚಾರವನ್ನು ಎಇಇ ಮಂಜುನಾಥ್ ಇದ್ದಾಗಲೇ ಚರ್ಚಿಸಲಾಗಿತ್ತು. ಆದರೆ, ಏಕೆ ಖಾತೆ ರದ್ದು ಮಾಡಿದರೋ ಗೊತ್ತಿಲ್ಲ ಎಂದು ತಿಳಿಸಿದರು.

ಈಗ ನಿರ್ಮಾಣ ಮಾಡುತ್ತಿರುವ ರಸ್ತೆಗೆ ಈಗಲೂ ಚರಂಡಿ ಇಲ್ಲ. ಪಾದಚಾರಿ ಮಾರ್ಗ ಇಲ್ಲ. ಹೀಗಾಗಿ, ಈಗಲೂ ನ್ಯಾಯಾಲಯಕ್ಕೆ ಹೋಗಿ ರಸ್ತೆ ಕಾಮಗಾರಿ ನಿಲ್ಲಿಸಬಹುದು. ಆದರೆ ನಾನು ಆ ರೀತಿ ಮಾಡಲ್ಲ. ಕೆಲವರು ಅಧಿಕಾರವಿದೆ, ಸರ್ಕಾರ ನಮ್ಮದಿದೆ ಎಂದು ದರ್ಪ ತೋರಿಸಲು ಮುಂದಾಗಿದ್ದಾರೆ. ಅಕ್ರಮವಾಗಿ ಖಾತೆ ರದ್ದು ಮಾಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರಕರಣ ನ್ಯಾಯಾಲಯದಲ್ಲಿ ಇರುವ ಕಾರಣ ಈಗಲೇ ಜಾಗ ಬಿಟ್ಟುಕೊಡಲು ಆಗಲ್ಲ. ಅದು ಕಾನೂನು ಪ್ರಕ್ರಿಯೆ ಮೂಲಕವೇ ಆಗಬೇಕಿದೆ . ಖಾತೆ ನಮ್ಮ ಹೆಸರಿಗೆ ಮತ್ತೆ ಆಗಬೇಕಿದೆ ಎಂದರು.

## ಎಸ್‌ಎಸ್‌ಎಲ್‌ಸಿ ಹೆಚ್ಚು ಫಲಿತಾಂಶ ಪಡೆಯಲು 'ಕಲಿಕಾಮಿತ್ರ'ನೆರವು

# ಶಾಲೆಗಳಿಗೆ ಖುದ್ದು ಜಿಪಂ ಸಿಇಓ ಭೇಟಿ



**ಮಂಡ್ಯ:** ಪಾಂಡವಪುರ ತಾಲ್ಲೂಕಿನ ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸರ್ಕಾರಿ ಪ್ರೌಢಶಾಲೆಗೆ ಭೇಟಿ ಕೊಟ್ಟ ಜಿಪಂ ಸಿಇಓ ನಂದಿನಿ ಕೆ.ಆರ್. ರವರು ಶಾಲೆಯಲ್ಲಿ ವಿದ್ಯಾರ್ಥಿಗಳು ಹಾಗೂ ಶಿಕ್ಷಕರ ಜೊತೆ ಸಂವಾದ ನಡೆಸಿ, ವಿದ್ಯಾರ್ಥಿಗಳ ಕುಂದು ಕೊರತೆಗಳನ್ನುಆಲಿಸಿದರು.

ಕಳೆದ ಸಾಲಿನಲ್ಲಿ ಪರೀಕ್ಷೆಯಲ್ಲಿ ಕಡಿಮೆ ಅಂಕ ಬಂದ ಪರಿಣಾಮ ಮತ್ತೆ ಈ ಮಟ್ಟದ ಫಲಿತಾಂಶ ಬರಬಾರದೆಂದು ಶಾಲೆಗಳಿಗೆ ಅನಿರೀಕ್ಷಿತ ಭೇಟಿ ನೀಡಿ, ಶಿಕ್ಷಕರ ಜೊತೆ ಕಲಿಕೆಯ ಹಾಗೂ ಬೋಧನೆಯ ವರದಿ ಪಡೆದರು.

ಶಾಲೆಯಲ್ಲಿ ಶಿಕ್ಷಕರ ಬೋಧನೆ ಹೇಗಿದೆ ಹಾಗೆಯೇ ಶಾಲೆಯಲ್ಲಿ ಸಂಜೆಯ ನಂತರ ವಿಶೇಷ ತರಗತಿಗಳು ನಡೆಯುತ್ತಿದೆಯೇ ಎಂದು ಮಕ್ಕಳೊಟ್ಟಿಗೆ ಮುಕ್ತಾವಾಗಿ ಚರ್ಚಿಸಿದರು.


ಹಾಗೆ 'ಕಲಿಕಾಮಿತ್ರ' ಎಷ್ಟು ಮಕ್ಕಳಿಗೆ ಉಪಯುಕ್ತವಾಗಿದೆ ಎಂಬ ಮಾಹಿತಿ ಸಹ ಪಡೆದರು.


ವಿದ್ಯಾರ್ಥಿಗಳೊಡನೆ 'ಕಲಿಕಾಮಿತ್ರ' ಕುರಿತು ಸಂವಾದ ನಡೆಸಿದ ಸಂದರ್ಭದಲ್ಲಿ ಇದಕ್ಕೆ ಉತ್ತರಿಸಿದ ವಿದ್ಯಾರ್ಥಿಗಳು ಆಂಗ್ಲ ಮಾಧ್ಯಮ ವಿದ್ಯಾರ್ಥಿಗಳನ್ನು ಹೊರತುಪಡಿಸಿ ಕನ್ನಡ ಮಾಧ್ಯಮ ವಿದ್ಯಾರ್ಥಿಗಳಿಗೆ ಹೆಚ್ಚಾಗಿ ಉಪಯುಕ್ತವಾಗಿದೆ.

ಕಾರಣ ಕಲಿಕಾಮಿತ್ರ ಪಠ್ಯವು ಕನ್ನಡದಲ್ಲಿ ಇರುವುದರಿಂದ ಆಂಗ್ಲ ಮಾಧ್ಯಮ ವಿದ್ಯಾರ್ಥಿಗಳಿಗೆ ಕೊಂಚ ಕಷ್ಟವಾಗಿದೆ, ಹಾಗಾಗಿ ಇಂಗ್ಲಿಷ್ ಮಾಧ್ಯಮದಲ್ಲಿ ಕಲಿಕಾಮಿತ್ರ ಅನುವಾದಗೊಂಡರೆ ನಮಗೆ ಸಹಾಯವಾಗಲಿದೆ ಎಂದು ತಿಳಿಸಿದರು.

ಜಕ್ಕನಹಳ್ಳಿ ಗ್ರಾಮ ಪಂಚಾಯಿತಿ ಗ್ರಂಥಾಲಯದ ವ್ಯವಸ್ಥೆ ಇಲ್ಲದ ಕಾರಣ ಪ್ರಾಥಮಿಕ ಶಾಲೆಯೊಂದರಲ್ಲಿ ಖಾಲಿ ಇರುವ ಕೊಠಡಿಯೊಂದನ್ನು ಆದಷ್ಟು ಬೇಗ ಗ್ರಂಥಾಲಯಕ್ಕೆ ನೀಡುವಂತೆ ಕ್ಷೇತ್ರ ಶಿಕ್ಷಣಾಧಿಕಾರಿಯವರಿಗೆ ಸೂಚಿಸಿದರು.

# ಸತ್ಪ್ರಜೆಗಳ ನಿರ್ಮಾಣದಲ್ಲಿ ಪೋಷಕರು ಹಾಗೂ ಶಿಕ್ಷಕರ ಪಾತ್ರ



| ಸಿದ್ಧಾರ್ಥ ನಂಜಪ್ಪ ತುಮಕೂರು

ಕ್ರಿ.ಪೂ. 4 ನೇ ಶತಮಾನದಲ್ಲಿ ಜನಿಸಿದ ಪುರಾತನ ಗ್ರೀಸ್‌ನ ದಾರ್ಶನಿಕ ಪ್ಲೇಟೋ ಪ್ರಕಾರ "ಒಂದು ಸಂಪದ್ಭರಿತ ಅಥವಾ ಬಲಿಷ್ಠ ರಾಷ್ಟ್ರವೆಂದರೆ ಆ ರಾಷ್ಟ್ರದಲ್ಲಿರುವ ಸೇನೆ, ಸೇನೆಗೆ ತಕ್ಕ ಶಸ್ತ್ರಾಸ್ತ್ರ, ಅಲ್ಲಿನ ಸಂಪತ್ತು, ಕಟ್ಟಡಗಳಲ್ಲ. ಬದಲಾಗಿ ಆ ರಾಷ್ಟ್ರದಲ್ಲಿ ವಾಸಿಸುತ್ತಿರುವ ಆರೋಗ್ಯವಂತ, ವಿದ್ಯಾವಂತ, ಪ್ರಜ್ಞಾವಂತ, ಸುಸಂಸ್ಕೃತ, ವಿವೇಚನಾಯುಕ್ತ ದೇಶಭಕ್ತರೇ ಆ ದೇಶದ ದೊಡ್ಡ ಸಂಪತ್ತು ಹಾಗೂ ಆ ರಾಷ್ಟ್ರವೇ ಒಂದು ಬಲಿಷ್ಠ ರಾಷ್ಟ್ರ."

ಇಂತಹ ವಿವೇಕಯುಕ್ತ, ವಿದ್ಯಾವಂತ ಯುವಶಕ್ತಿಯನ್ನು ನಿರ್ಮಿಸುವ ಗುರುತರ ಜವಾಬ್ದಾರಿ ಸಾಮಾನ್ಯವಾಗಿ ಸಮಾಜದಲ್ಲಿ ಇಬ್ಬರಿಗಿರುತ್ತದೆ. ಒಬ್ಬರು ಜನ್ಮ ನೀಡುವ ತಾಯಿ-ತಂದೆ ಅಂದರೆ ಪೋಷಕರು ಹಾಗೂ ಎರಡನೆಯವರು ವಿದ್ಯೆ ಕಲಿಸುವ ಗುರು ಅರ್ಥಾತ್ ಶಿಕ್ಷಕರು.

ತಂದೆ-ತಾಯಿ ಅನ್ನುತ್ತಿದ್ದ ಹಾಗೆ ತಂದೆಗಿಂತ ತಾಯಿಯ ಪಾತ್ರ ಹಿರಿಯದು. ಆದ್ದರಿಂದಲೇ ಜನನಿಯನ್ನೇ ದೇವರಿಗೆ ಹೋಲಿಸಿರುತ್ತಾರೆ. "ಜನನಿ ತಾನೇ ಮೊದಲ ಗುರುವು, ಜನನಿಯಿಂದ ಪಾಠ ಕಲಿತ ಜನರು ಧನ್ಯರು" ಎಂಬ ಜನವಾಣಿಯಂತೆ ತಾಯಿ ನಿಜವಾಗಿಯೂ ತನ್ನ ಮಗುವಿಗೆ ಮೊದಲ ಗುರುವಾಗಿ ನಿಲ್ಲುತ್ತಾಳೆ.

ಇಂತಹ ಮಹಾನ್ ತಾಯಿಯರಲ್ಲಿ ನಮಗೆ, ನಿಮಗೆ ಮೊದಲು ನೆನಪಿಗೆ ಬರುವವರೆಂದರೆ ಜೀಜಾಬಾಯಿ. ಈಕೆ ಮರಾಠ ಸಾಮ್ರಾಜ್ಯದ ಚಕ್ರವರ್ತಿ ಛತ್ರಪತಿ ಶಿವಾಜಿಯ ಜನ್ಮದಾತೆ. ಈಕೆ ತಾನು ಗರ್ಭ ಧರಿಸಿದ್ದಾಗಲೇ ವೀರರ, ಶೂರರ ಕಥೆಗಳನ್ನು ಕೇಳುತ್ತಿದ್ದಳು. ಅಲ್ಲದೆ ತನ್ನ ಮಗುವಿಗೆ ಜನ್ಮ ನೀಡಿದ ಕ್ಷಣದಿಂದಲೂ ಹಾಲುಣಿಸುವಾಗ, ಅನ್ನ ತಿನ್ನಿಸುವಾಗ, ಆಟವಾಡಿಸುವಾಗ, ನಿಂತಲ್ಲಿ, ಕುಂತಲ್ಲಿ ವೀರರ, ಶೂರರ, ಸದ್ಗುರುಗಳ ಕಥೆಗಳನ್ನು, ಯುದ್ಧದ ಕಥೆಗಳನ್ನು ಹೇಳಿ ತನ್ನ ಮಗನ ಮನದಲ್ಲಿ ಧೈರ್ಯ, ಸಾಹಸ, ಸದ್ಗುಣಗಳ ಅಂಶಗಳನ್ನು ತುಂಬುತ್ತಿದ್ದಳು. ಪರಿಸರವನ್ನು ಬಳಸಿಕೊಂಡು ಮಾವಾಳರೆಂಬ ಗಿರಿಜನರ ಸ್ನೇಹದಿಂದ, ದಾದಾಜಿ ಕೊಂಡದೇವ ನೀಡಿದ ವಿದ್ಯೆಯಿಂದ ಸೈನ್ಯ ಕಟ್ಟಿ ಬಲಿಷ್ಠ ನಾಯಕನಾಗಿ ಹೊರಹೊಮ್ಮಿ ಭಾರತದಲ್ಲಿ ಹಿಂದೂ ಸಾಮ್ರಾಜ್ಯ ಸ್ಥಾಪಿಸಿದ ಚಿತ್ರ ನಮ್ಮ-ನಿಮ್ಮ ಕಣ್ಮುಂದೆ ಈಗಲೂ ಹಸಿರಾಗಿದೆ.

ಅದೇ ರೀತಿ ಮತ್ತೋರ್ವ ಕಲ್ಕತ್ತಾದ ಮಹಾನ್ ತಾಯಿ, ಸ್ವಾಮಿ ವಿವೇಕಾನಂದರ ತಾಯಿ ಭುವನೇಶ್ವರಿದೇವಿ. ಈಕೆ ದೈವಭಕ್ತೆ, ಸುಸಂಸ್ಕೃತೆ. ದೇವರಲ್ಲಿ ಅಪಾರ ಭಕ್ತಿ, ಶ್ರದ್ಧೆಯುಳ್ಳ ಹೆಣ್ಣು. ಈಕೆಯೂ ತನ್ನ ಮಗ ನರೇಂದ್ರನಿಗೆ ಚಿಕ್ಕ ವಯಸ್ಸಿನಲ್ಲೇ ವಿದ್ಯೆ, ಬುದ್ಧಿ, ದೇವರಲ್ಲಿ ನಂಬಿಕೆ, ಧೈರ್ಯ, ಸತ್ಯ ಮುಂತಾದ ಸಂಸ್ಕಾರಗಳನ್ನು ಧಾರೆ ಎರೆದಂತಹ ಸಾಧ್ವೀಮಣಿ. ಅದರ ಫಲವಾಗಿ ನರೇಂದ್ರನಿಗೆ ದೇವರಲ್ಲಿ ಅಪಾರ ಭಕ್ತಿ, ಧ್ಯಾನ, ಏಕಾಗ್ರತೆ, ಉತ್ತಮ ಸಂಸ್ಕಾರ ತಾನೇ ತಾನಾಗಿ ತಾಯಮೊಲೆಯಿಂದ ಹರಿದು ಬಂದ ಹಾಲಂತೆ, ತಾಯಿಯಿಂದ ಹರಿದು ಬಂದವು. ಇಂತಹ ಸಂಸ್ಕಾರದಿಂದ ಹಾಗೂ ತನ್ನ ಗುರುಗಳಾದ ಶ್ರೀ ರಾಮಕೃಷ್ಣ ಪರಮಹಂಸರ ಆಶೀರ್ವಾದದಿಂದ ಮುಂದೆ ವಿವೇಕಾನಂದರು ಭಾರತೀಯ ಸಂಸ್ಕೃತಿ, ಹಿಂದೂ ಧರ್ಮದ ಶ್ರೇಷ್ಠತೆಯನ್ನು ವಿಶ್ವಕ್ಕೇ ಪರಿಚಯಿಸಿದ್ದು ನಮಗೆಲ್ಲಾ ತಿಳಿದದ್ದೇ.

ಈ ಎರಡೂ ಉತ್ತಮ ನಿದರ್ಶನಗಳಿಂದ ಉತ್ತಮ ಸಮಾಜ ನಿರ್ಮಾಣದಲ್ಲಿ ಪೋಷಕರು ಹಾಗೂ ಶಿಕ್ಷಕರ ಪಾತ್ರ ಎಷ್ಟು ಶ್ರೇಷ್ಠ ಹಾಗೂ ಅಮೂಲ್ಯವೆಂಬುದು ನಮಗೆಲ್ಲಾ ಅರ್ಥವಾಗುತ್ತದೆ.

ಇಂದು ನಮ್ಮ ತಾಯಂದಿರು ಇಂತಹ ಜೋಗುಳ, ಕಥೆ, ಭಕ್ತಿ, ಶ್ರದ್ಧೆ, ವಿದ್ಯೆ ಇತ್ಯಾದಿಗಳನ್ನು ತಮ್ಮ ಮಕ್ಕಳ ಮನದಲ್ಲಿ ಮೂಡಿಸದೆ, ಆಧುನಿಕ ಸಮಾಜದಲ್ಲಿ ಮಾಧ್ಯಮಗಳ ಹಾವಳಿಯ ಪ್ರಭಾವಕ್ಕೆ ಮರುಳಾಗಿ, ಉತ್ತಮ ಸಮಾಜ ನಿರ್ಮಾಣದಲ್ಲಿ ತಮ್ಮ ಪಾತ್ರವೇನೂ ಇಲ್ಲವೇನೋ ಎಂಬಂತೆ ಬಿಂಬಿತರಾಗುತ್ತಿರುವ ಪ್ರಯುಕ್ತ ಇಂದು ನಮ್ಮ ಯುವಪೀಳಿಗೆ ಎಲ್ಲವನ್ನೂ ಮರೆತು ಬೇಜವಾಬ್ದಾರಿಯಿಂದ ಸಮಾಜಘಾತುಕ ಕೃತ್ಯಗಳಲ್ಲಿ ತೊಡಗಿದೆ. ಮತ್ತೆ ಕೆಲವರು ಕೇವಲ ವಿದ್ಯೆ, ದುಡಿಮೆ, ತಾನಾಯಿತು ತನ್ನ ಸಂಸಾರವಾಯಿತು ಎಂದಷ್ಟೇ ಕೂಪಮಂಡೂಕದಂತೆ ಬದುಕುತ್ತಿರುವುದನ್ನು ಕಂಡಾಗ ಸುಭದ್ರ ಭಾರತದ ಕನಸು ಕಂಡ ವಿವೇಕಾನಂದರ, ಗಾಂಧೀಜಿಯವರ ರಾಮರಾಜ್ಯ, ಇಳಿ ವಯಸ್ಸಿನಲ್ಲೂ ಹದಿಹರೆಯದ ಯುವಕರಂತೆ ಜೀವನೋತ್ಸಾಹದಿಂದ, ಭಾರತೀಯರಿಗೆ ಸ್ಫೂರ್ತಿಯ ಚಿಲುಮೆಯಾಗಿದ್ದ ದಿವಂಗತ ಡಾ॥ ಅಬ್ದುಲ್ ಕಲಾಂರವರ ಕನಸು ಕೇವಲ ಕನಸಾಗೇ ಉಳಿಯುತ್ತದೇನೋ ಎಂಬ ಸಂಶಯ ನಮಗೆಲ್ಲರಿಗೂ ಮೂಡುತ್ತದೆ.

ಆದ್ದರಿಂದ ಇನ್ನಾದರೂ ಪೋಷಕರು ತಮ್ಮ ಜವಾಬ್ದಾರಿ ಅರಿತು ತಮ್ಮ ಮಕ್ಕಳಿಗೆ ಒಳ್ಳೆಯ ವಿದ್ಯೆ, ಬುದ್ಧಿ, ಸಂಸ್ಕಾರ, ಒಳ್ಳೆಯ ನಡೆ-ನುಡಿಗಳನ್ನು ಕಲಿಸಿ, ಸಮಾಜಮುಖಿಗಳಾಗುವಂತೆ ಎಚ್ಚರ ವಹಿಸಿದ್ದೇ ಆದಲ್ಲಿ ಸತ್ಪ್ರಜೆಗಳ ನಿರ್ಮಾಣವಾಗುವುದರಲ್ಲಿ ಸಂಶಯವಿಲ್ಲ.

ಸಮಾಜದಲ್ಲಿ ಶಿಕ್ಷಕರ ಪಾತ್ರವೂ ತಾಯಿಯಷ್ಟೇ ಶ್ರೇಷ್ಠವಾದುದು. ಆದ್ದರಿಂದಲೇ ಶಿಕ್ಷಕರನ್ನು ಗುರು ಬ್ರಹ್ಮನೆಂದು ಸಂಬೋಧಿಸುತ್ತಿರುವುದು. ಪೋಷಕ-ಶಿಕ್ಷಕ ಇವರ ಪಾತ್ರಗಳನ್ನು ಒಂದು ರಥದ ಎರಡು ಚಕ್ರಗಳಿಗೆ ಹೋಲಿಸಬಹುದು. ಹೇಗೆಂದರೆ ರಥದ ಚಲನೆಗೆ ಎರಡು ಚಕ್ರಗಳು ಎಷ್ಟು ಮುಖ್ಯವೋ ಹಾಗೆಯೇ ಸಮಾಜದ ನಿರ್ಮಾಣದಲ್ಲಿ ಪೋಷಕ-ಶಿಕ್ಷಕ ಇಬ್ಬರೂ ಮುಖ್ಯ ಹಾಗೂ ಅಮೂಲ್ಯ.

ಶಿವಾಜಿ ದಾದಾಜಿ ಕೊಂಡದೇವರಿಂದ, ವಿವೇಕಾನಂದರು ರಾಮಕೃಷ್ಣ ಪರಮಹಂಸರಿಂದ, ಕುವೆಂಪು ವೆಂಕಣ್ಣಯ್ಯನವರಿಂದ, ಡಾ॥ ಅಬ್ದುಲ್ ಕಲಾಂ ರಾಮಸ್ವಾಮಿಯವರಿಂದ ಪ್ರಭಾವಿತರಾದಂತೆ ಹಲವರು ಶಿಕ್ಷಕರಿಂದ ಪ್ರಭಾವಿತರಾಗಿ ಮಹಾನ್ ಸಾಧನೆಗೈದಿರುವುದು ಶಿಕ್ಷಕರ ಕಾರ್ಯಕ್ಷಮತೆಯನ್ನು ಸೂಚಿಸುತ್ತದೆ. ಜಗತ್ತಿನ ಮಹಾನ್ ಕ್ರಾಂತಿಗಳ (ಅಮೇರಿಕಾ, ಫ್ರಾನ್ಸ್, ರಷ್ಯಾ) ಹಿಂದೆ ಶ್ರೇಷ್ಠ ಶಿಕ್ಷಕರ ಪಾತ್ರವಿದೆಯೆಂಬುದರಲ್ಲಿ ಎರಡು ಮಾತಿಲ್ಲ. ಶಿಕ್ಷಕರು ಹೇಗೋ ವಿದ್ಯಾರ್ಥಿಗಳೂ ಹಾಗೆ ಇರುತ್ತಾರೆ.

ಅಂತಿಮವಾಗಿ ಹೇಳುವುದಾದರೆ ಸತ್ಪ್ರಜೆಗಳ ನಿರ್ಮಾಣದಲ್ಲಿ ಪೋಷಕರು ಹಾಗೂ ಶಿಕ್ಷಕರು ತಮ್ಮ ತಮ್ಮ ಕರ್ತವ್ಯದಲ್ಲಿ ಚ್ಯುತಿ ಬರದಂತೆ ನಿಭಾಯಿಸಿದಲ್ಲಿ ಖಂಡಿತ ಸತ್ಪ್ರಜೆಗಳನ್ನು ಸೃಷ್ಟಿಸಿ, ಸುಭದ್ರ ಭಾರತವನ್ನು ನಿರ್ಮಿಸಬಹುದು.

# ಬದುಕಿನ ಪಯಣ...!





| ವೀಣಾ ಹೇಮಂತ್‌ಗೌಡ ಪಾಟೀಲ್

ಬದುಕು ಒಂದು ರೀತಿಯ ರೈಲು ಗಾಡಿಯ ಪಯಣ ಇದ್ದಂತೆ. ರೈಲುಗಾಡಿಯಲ್ಲಿ ಹತ್ತಿ ಕುಳಿತುಕೊಳ್ಳುವ ನಾವುಗಳು ಮಾರ್ಗ ಮಧ್ಯದಲ್ಲಿ ಹತ್ತುವ-ಇಳಿಯುವ, ನೂರಾರು ಜನರೊಂದಿಗೆ ಸ್ನೇಹ ಸಂಬಂಧಗಳನ್ನು ಬೆಳೆಸುತ್ತೇವೆ ಅವರವರ ನಿಲ್ದಾಣ ಬಂದಾಗ ಅವರವರು ಇಳಿದು ಹೋಗುತ್ತಾರೆ..... ಅಂತೆಯೇ ನಾವು ಕೂಡ

ನಮ್ಮ ಬದುಕಿನ ಪಯಣ ಕೂಡ ಹಾಗೆಯೇ.... ಆದರೆ ಈ ಪಯಣ ಅನಿರೀಕ್ಷಿತ ಸಂತೆಗಳ ಆಗರ.ಇದಮಿತ್ಥಂ ಎಂದು ಹೇಳುವ ಹಾಗೆಯೇ ಇಲ್ಲ. ನಮ್ಮ ಮುಂದಿನ ನಿಲ್ದಾಣ ಯಾವುದು ಎಂಬುದು ನಮಗೆ ಗೊತ್ತಿರುವುದಿಲ್ಲ.

ತಂದೆ ತಾಯಿಯ ಕೈ ಹಿಡಿದು ಬದುಕಿನ ಪಯಣವನ್ನು ಆರಂಭಿಸುವ ನಾವು ನಮ್ಮ ಜೀವಿತದ ಕೊನೆಯವರೆಗೂ ಅವರು ನಮ್ಮೊಂದಿಗೆ ಇರುತ್ತಾರೆ ಎಂಬ ಭರವಸೆಯ ಜೊತೆಗೆ ಜೀವಿಸುತ್ತೇವೆ.... ಆದರೆ ತಮ್ಮ ಪ್ರಯಾಣ ಪೂರೈಸುವ ಅವರು ಯಾವ ಘಳಿಗೆ ಯಲ್ಲಾದರೂ ನಮ್ಮನ್ನು ಬಿಟ್ಟು ಹೊರಟು ಹೋಗಬಹುದು ಹಾಗೂ ಅವರಿಲ್ಲದೆ ನಾವು ನಮ್ಮ ಬದುಕಿನ ಪಯಣವನ್ನು ಮುಂದುವರಿಸಬೇಕು ಎಂಬ ನಿಷ್ಟುರ ಸತ್ಯದ ಅರಿವಿದ್ದು ಕೂಡ ಅರಿವಿಲ್ಲದ ರೀತಿಯಲ್ಲಿ ನಾವು ಬಾಳುತ್ತೇವೆ.

ಆದರೂ ಕೂಡ ಯಾವುದೇ ಸೀಟುಗಳು ಖಾಲಿ ಉಳಿಯುವುದಿಲ್ಲ. ನಮಗೆ ಸ್ವಲ್ಪ ಹಿಂದು ಮುಂದಾಗಿ ನಮ್ಮ ಒಡಹುಟ್ಟಿದವರು, ಸ್ನೇಹಿತರು, ಸಂಬಂಧಿಗಳು ಹಾಗೂ ನಾವು ಪ್ರೀತಿಸುವ ಬದುಕಿನಲ್ಲಿ ನಮ್ಮೊಂದಿಗೆ ಇರಲಿ ಎಂದು ಬಯಸುವ ಹತ್ತು ಹಲವು ಸಂಗತಿಗಳು ನಮ್ಮೊಂದಿಗೆ ಬದುಕಿನ ಪಯಣದ ಸ್ಥಾನವನ್ನು ಆಕ್ರಮಿಸಿಕೊಳ್ಳುತ್ತವೆ.

ತಮ್ಮ ತಮ್ಮ ಪಯಣ ಮುಗಿಸಿ ಕೆಲವರು ನಿರೀಕ್ಷಿತ ಸಮಯಕ್ಕೆ ಇಳಿದು ಹೊರಟು ಹೋದರೆ ಮತ್ತೆ ಕೆಲವರು ನಮ್ಮ ಬದುಕಿನ ಮೇಲೆ ಸಾಕಷ್ಟು ಪರಿಣಾಮವನ್ನು ಬೀರುವ ನಮ್ಮಲ್ಲಿ ಖಾಲಿತನವನ್ನು

ಹುಟ್ಟು ಹಾಕುವ ರೀತಿಯಲ್ಲಿ ಕಣ್ಮರೆಯಾಗುತ್ತಾರೆ.... ಮತ್ತೆ ಕೆಲವರ ನಿರ್ಗಮನ ಅದೆಷ್ಟು ಅನಿರೀಕ್ಷಿತವಾಗುತ್ತದೆ0ದರೆ ಅದನ್ನು ಅರಗಿಸಿಕೊಳ್ಳುವುದು ಬಹಳವೇ ಕಷ್ಟ .

ಈ ಪಯಣವು ಸುಖ ದುಃಖಗಳ ಏರಿಳಿವುಗಳ ಮೇಲೆ ತೂಗುಯ್ಯಾಲೆಯಂತೆ ಭಾಸವಾಗುತ್ತದೆ. ಕೆಲ ಭೇಟಿಗಳು ಮನಸ್ಸನ್ನು ಪ್ರಫುಲ್ಲಗೊಳಿಸಬಹುದು ಎಷ್ಟೋ ಬಾರಿ ಭರವಸೆಗಳು ಹುಸಿಯಾಗಬಹುದು.... ವಿದಾಯಗಳು ಎದೆಯ ಭಾರವನ್ನು ಹೆಚ್ಚಿಸಬಹುದು ಕೆಲವರ ಜೊತೆಯು ಸಂತಸವನ್ನು ಉಂಟುಮಾಡಿದರೆ ಮತ್ತೆ ಕೆಲವರ ಸಾಂಗತ್ಯ ರೇಜಿಗೆಯನ್ನುಂಟು ಮಾಡಬಹುದು

ಬದುಕಿನಲ್ಲಿ ಪಯಣದಲ್ಲಿ ಚೆನ್ನಾಗಿ ಬದುಕುವುದು ಎಂದರೆ ನಮ್ಮ ಜೊತೆಗಿರುವ ಸಹ ಪ್ರಯಾಣಿಕರ ಕುರಿತು ಒಳ್ಳೆಯ ಅರಿವನ್ನು ಹೊಂದಿರಬೇಕು. ಉತ್ತಮ ಸಂವಹನವನ್ನು ಹೊಂದಿರಬೇಕು.... ಅದರಲ್ಲೂ ಮುಖ್ಯವಾಗಿ ನಮ್ಮ ಬದುಕಿನ ಹೊರೆಗಳನ್ನು ಹಂಚಿಕೊಂಡಿರುವವರೊಂದಿಗೆ ಅತ್ಯಂತ ಆತ್ಮೀಯವಾದ ಸಂಬಂಧವನ್ನು ಮುಂದುವರಿಸಬೇಕು

ಜೀವನದ ಪಯಣದಲ್ಲಿ ನಮ್ಮ ಪಯಣದ ಆರಂಭದ ಸಮಯದಲ್ಲಿ ನಮಗೆ ನೀಡಲಾದ ಟಿಕೇಟಿನಲ್ಲಿ ಆರಂಭಿಸಿದ ಸಮಯ ದಿನ, ತಿಂಗಳು ವಾರ ಮತ್ತು ವರ್ಷಗಳನ್ನು ನಮೂದಿಸುತ್ತದೆ ನಿಜ ಆದರೆ ಯಾವಾಗ ನಾವು ಜೀವನದ ಪಯಣ ಮುಗಿಸಿ ಇಳಿಯಬಹುದು ಎಂಬ ಸಣ್ಣ ಸುಳಿವು ಕೂಡ ನಮಗೆ ಇರುವುದಿಲ್ಲ.

ನಮ್ಮ ಪಯಣದ ಹಾದಿಯನ್ನು ನಾವು ಹೇಗೆ ಇಟ್ಟುಕೊಳ್ಳುತ್ತೇವೆ ಎಂಬುದರ ಮೇಲೆ ನಮ್ಮ ಬದುಕಿನ ಗುಣಮಟ್ಟವನ್ನು ಅಳೆಯಬಹುದು.. ನಾವು ದೇವರನ್ನು ಪ್ರೀತಿಸಬೇಕು ಅತ್ಯಂತ ಸರಳವಾಗಿ ಕ್ಷಮಿಸಬೇಕು ಜೊತೆಗೆ ನಮ್ಮ ನೈಜತೆಯನ್ನು ಹೊರ ಹಾಕಬೇಕು.

ಅಂತಿಮ ಪಯಣದ ಸಮಯದಲ್ಲಿ ನಮಗೆ ದೊರೆಯುವ ಸಂಜ್ಞೆಗಳನ್ನು ಗುರುತಿಸಿ ಮೆಲ್ಲಗೆ ಹೊರಟು ಬಿಡಬೇಕು. ಮರದ ಗೊಂಬೆಯನ್ನು ಆಶ್ರಯಿಸಿದ ಹಕ್ಕಿ ಒಂದೇ ಏಟಿಗೆ ರೆಕ್ಕೆಗಳನ್ನು ಅಗಲಿಸಿ ಹಾರಿ ಹೋಗುವಂತೆ ನಾವು ಕೂಡ ಬದುಕಿನ ಈ ಪಯಣವನ್ನು ಮುಗಿಸಿ ಹೊರಟು ಬಿಡಬೇಕು.. ಉಳಿದವರ ಬದುಕಿನ ಅತ್ಯಂತ ಸುಂದರ ನೆನಪಾಗಿ ನಾವು ಉಳಿದುಕೊಳ್ಳಬೇಕೆ ಹೊರತು ಅವರ ಚಿತ್ತವನ್ನು ಕಲಕಿ ಮಾನಸಿಕ ಸ್ವಾಸ್ಥ್ಯವನ್ನು ಕದಡುವ, ನಮ್ಮ ನೆನಪು ಅವರಲ್ಲಿ ಬೇಸರ ಹುಟ್ಟಿಸುವ ರೀತಿಯಲ್ಲಿ ಬದುಕಬಾರದು.

ಬದುಕಿನ ಪ್ರಯಾಣದಲ್ಲಿ ಸಂತೋಷ, ತೃಪ್ತಿ,ನೆಮ್ಮದಿ ಇಂತಹ ಹಗುರವಾದ ಭಾವಗಳನ್ನು ನಮ್ಮ ಲಗೇಜ್ ಗಳನ್ನಾಗಿ ಕೊಯ್ಯಬೇಕೇ ಹೊರತು ಮನಸ್ಸನ್ನು ಭಾರವಾಗಿಸುವ ನೋವು ನಿರಾಶೆ ಅತೃಪ್ತಿ ಅ ಸಂತೋಷಗಳೆಂಬ ಭಾರವಾದ ವಸ್ತುಗಳನ್ನು ಅಲ್ಲಲ್ಲಿಯೇ ಬಿಟ್ಟು ಮುಂದೆ ಹೊರಡಬೇಕು.

ಲೆಸ್ ಲಗೇಜ್ ಮೋರ್ ಕಂಫರ್ಟ್ ಎಂಬ ಮಾತು ಬದುಕಿನ ಪಯಣಕ್ಕೂ ಸೂಕ್ತವಾಗಿದೆ.

ನಮ್ಮ ಬದುಕಿನಲ್ಲಿ ನಾವು ಬಹು ದೂರ ಸಾಗಬೇಕಾದ ಪರಿಸ್ಥಿತಿಯಲ್ಲಿ ನಮ್ಮೊಂದಿಗೆ ಹೆತ್ತವರು, ಒಡಹುಟ್ಟಿದವರು, ಸಂಗಾತಿ, ಮಕ್ಕಳುಸಂಬಂಧಿಗಳು ಸ್ನೇಹಿತರು ಜೊತೆ ಇರಬೇಕು. ನಮ್ಮ ಹೆಗಲ ಮೇಲೆ ನಾವು ಮಲಗಲು ಸಾಧ್ಯವಿಲ್ಲ.... ನಮ್ಮ ಮನದ ಭಾವನೆಗಳನ್ನು ಹಂಚಿಕೊಂಡು ಹಗುರವಾಗಲು ನಮಗೆ ಬೇರೊಬ್ಬರ ಹೆಗಲು ಬೇಕೇ ಬೇಕು.

ನಮ್ಮ ಬದುಕಿನ ಉದ್ದೇಶ ಮತ್ತು ಗುರಿಗಳು ಸ್ಪಷ್ಟವಾಗಿದ್ದು ತಲುಪುವ ಗಮ್ಯದ ಅರಿವು ನಮಗಿರಬೇಕು..... ಅಂದರೆ ನಮ್ಮ ಪಯಣ ಅತ್ಯಂತಸುರಕ್ಷಿತ ಹಾಗೂ ತೃಪ್ತಿದಾಯಕವಾಗಿರುತ್ತದೆ.

ಏನಂತೀರಾ ಸ್ನೇಹಿತರೇ?..... ನೀವು ಕೂಡ ನಿಮ್ಮ ಬದುಕಿನ ಪಯಣವನ್ನು ಅತ್ಯಂತ ಸರಳ ಹಾಗೂ ಸುಂದರವಾದ ಬದುಕಿನ ಪಯಣ ನಿಮ್ಮದಾಗಿರಲಿ

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,